ಸಂಪುಟ: 14 Volume | ಸಂಚಿಕೆ: 45 Issue | ಪುಟಗಳು 08 Pages | ಗುರುವಾರ 21 ಮೇ 2026 | ₹4 | PRGINO.120927 (RNINO:KARKAN/2011/48371) | BDR/054/2026-2027 | www.mallammanudi.in | mallammanudi@gmail.com | 9448604450, 9845028349

ಬೀದರ | ಕಲ್ಬುರ್ಗಿ | ಯಾದಗಿರಿ | ರಾಯಚೂರು | ಕೊಪ್ಪಳ | ಬಳ್ಳಾರಿ | ಬಾಗಲಕೋಟೆ | ವಿಜಯನಗರ & ವಿಜಯಪುರ ಜಿಲ್ಲೆಗಳಲ್ಲಿ ಏಕಕಾಲಕ್ಕೆ ಪ್ರಕಟ

# ಮಲ್ಲಮ್ಮ ನುಡಿ

ಕನ್ನಡ ಕಿರಣ

Mallammanudi Regional News Paper

ಪ್ರಾದೇಶಿಕ ಕನ್ನಡ ದೈನಿಕ

ಸಂಪಾದಕರು: ರಮೇಶ ರೆಡ್ಡಿ

**ಬೆಳಗು**

ನಮ್ಮ ಹಕ್ಕುಗಳಿಗಾಗಿ ಹೋರಾಡಲು ಎಲ್ಲಿ ಅವಕಾಶ ಇದೆಯೋ ಅಲ್ಲಿ ಪ್ರಜಾಪ್ರಭುತ್ವ ಇದೆ ಎಂದೇ ಅರ್ಥ.

–ರೋಜರ್ ನಾಶ್ ಬಾಲ್ಡಿವಿನ್

# ಸಂಗೀತಕ್ಕೆ ಗೋರಟಾ ಪೂಜ್ಯ ಪಂ. ವಿರೂಪಾಕ್ಷ ಸ್ವಾಮಿಗಳ ಕೊಡುಗೆ ಅಪಾರ

• ಮಲ್ಲಮ್ಮ ನುಡಿ ವಾರ್ತೆ ಹುಮನಾಬಾದ್

ದೇಶದ ವೇದ ಸಂಗೀತ ಪರಂಪರೆಗೆ ಪೂಜ್ಯ ಪಂ. ವಿರೂಪಾಕ್ಷಯ್ಯ ಸ್ವಾಮಿ ಗೋರಟಾ ಅವರ ಕೊಡುಗೆ ಅಪೂರ್ವ ಮತ್ತು ಸಾರ್ವಕಾಲಿಕ ವಾಗಿದೆ ಎಂದು ಬೀದರ ಜಿಲ್ಲಾ ಬಿಜೆಪಿ ಅಧ್ಯಕ್ಷ ರಾದ ಸೋಮನಾಥ ಪಾಟೀಲ ಅಭಿಪ್ರಾಯ ಪಟ್ಟರು. ಅವರು ತಾಲೂಕಿನ ಐತಿಹಾಸಿಕ ಕಲೆ ಸಾಹಿತ್ಯ ಸಂಗೀತ ಮತ್ತು ದೇಶಪ್ರೇಮಿಗಳ ತವರೂರಾದ ಗೋರಟಾದಲ್ಲಿ ನಡೆದ ಶ್ರೀ ಸಂಗೀತ ರುದ್ರೇಶ್ವರ 4ನೇ ಜಾತ್ರಾ ಮಹೋತ್ಸವ, ಸಂಗೀತ ರುದ್ರ ಸಾರ್ವಭೌಮ ಪೂಜ್ಯಶ್ರೀ ವಿರೂಪಾಕ್ಷಯ್ಯ ಸ್ವಾಮಿಯವರ 14 ನೇ ಮತ್ತು ಪೂಜ್ಯ ವೀರಮ್ಮ ತಾಯಿಯ ವರ 9ನೇ ಪುಣ್ಯಾರಾಧನೆ, ಕಲ್ಯಾಣ ಕರ್ನಾಟಕ 7ನೇ ಪ್ರಾಂತೀಯ ಸಂಗೀತ ಸಮ್ಮೇಳನ ಮತ್ತು ಪಂ. ವಿರೂಪಾಕ್ಷ ಸಮ್ಮಾನ್ ರಾಷ್ಟ್ರೀಯ ಮತ್ತು ರಾಜ್ಯ ಪ್ರಶಸ್ತಿ ಪ್ರದಾನ ಸಮಾರಂಭದ ಮುಖ್ಯ ಅತಿಥಿಗಳಾಗಿ ಮಾತನಾಡುತ್ತಾ ಹೇಳಿದರು.

ಕಲ್ಯಾಣ ಕರ್ನಾಟಕ ಭಾಗದ ಚಾರಿತ್ರಿಕ ಸಾಂಸ್ಕೃತಿಕ ನೆಲೆಯಾದ ಗೋರಟಾ ಸಂಗೀತ ರುದ್ರದ ತವರು ಮನೆಯಾಗಿದೆ. ಪೂಜ್ಯ ವಿರೂ ಪಾಕ್ಷಯ್ಯನವರು ವೇದದ ರುದ್ರ ಮಂತ್ರಗಳಿಗೆ ಸಂಗೀತವನ್ನು ಕೂಡಿಸಿ ದೇಶಾದ್ಯಂತ ತಮ್ಮ ರುದ್ರ ಸಂಗೀತ ಕಾರ್ಯಕ್ರಮವನ್ನು ನೀಡಿ ನಾಡಿಗೆ ಜಿಲ್ಲೆಗೆ ದೊಡ್ಡ ಗೌರವವನ್ನು ತಂದಿರುವ ಮೇರು ಪುರುಷ. ಗೋರಟಾ ದಲ್ಲಿ1948 ರಲ್ಲಿ ನಡೆದ ರಜಾಕಾರ ಹತ್ಯಾಕಾಂಡದ ಕುರಿತು ಪೂಜ್ಯರು ಭುಲಾಯಿ ಪದ ಗ್ರಂಥ ರಚಿಸಿ ವೀರ ಹುತಾತ್ಮರ ಕುರಿತು ಜಾಗೃತಿ ಮೂಡಿಸಿದರು. ಇಂದು ಗೋರ ಟಾದಲ್ಲಿ ಹುತಾತ್ಮ ಸ್ಮಾರಕ ನಿರ್ಮಾಣವಾಗಲಿಕೆ ಮೂಲ ಪ್ರೇರಕರು ಪೂಜ್ಯರಾದರೆ,ಡಾ. ರಾಜಶೇಖರ ಶಿವಾಚಾರ್ಯರು ಆ ಕುರಿತು ಬಹುದೊಡ್ಡ ಜಾಗೃತಿಯನ್ನು ಮೂಡಿಸಿ ಈ ಸ್ಮಾರಕಕ್ಕೆ ಮೂಲ ಪ್ರೇರಕರಾ ಗಿರುವರು. ಅವರು ಹಾಕಿಕೊಟ್ಟ ಮಾರ್ಗದಲ್ಲಿ ನಾವೆಲ್ಲರೂ ಮುಂದುವರಿಯೋಣ ಮತ್ತು ಯುವಜನತೆ



ದೇಶ ಧರ್ಮ ಸಂಸ್ಕೃತಿ ಜನಜಾಗೃತಿಗಾಗಿ ಸೇವೆಗಾಗಿ ಮುಂದೆ ಬರಬೇಕೆಂದು ಅವರು ಕರೆ ನೀಡಿದರು.

ಪಂ.ವಿರುಪಾಕ್ಷಸಮ್ಮಾನ್ ರಾಷ್ಟ್ರೀಯ ಪ್ರಶಸ್ತಿಗೆ ಭಾಜನರಾದ ಖ್ಯಾತ ಹಾರ್ಮೋನಿಯಂ ಸಂಗೀತ ಕಲಾವಿದರಾದ ಪಂ. ರಾಜೇಂದ್ರ ಸಿಂಗ್ ಪವಾರ ಮಾತನಾಡಿ ನಾಡಿನ ಸಂಗೀತ ಕ್ಷೇತ್ರಕ್ಕೆ ಪೂಜ್ಯ ವಿರುಪಾಕ್ಷಯ್ಯ ಸ್ವಾಮಿಯವರ ಕೊಡುಗೆ ವರ್ಣಿಸಲಸದಳ . ನಾವೆಲ್ಲ ಅವರ ರುದ್ರ ಸಂಗೀತ ಕೇಳಿ ಪ್ರಭಾವಿತರಾಗಿ ಬೆಳೆದವರು. ಅವರು ಶ್ರೀ ರುದ್ರಕ್ಕೆ ಸಂಗೀತದ ಕೂಡಿಸಿದ ದೇಶದ ಮೊಟ್ಟ ಮೊದಲ ಕಲಾವಿದರು.ಅವರು 60ರ ದಶಕದಲ್ಲಿ ಗೋರಟಾದಲ್ಲಿ ಶಾರದಾ ಸಂಗೀತ ವಿದ್ಯಾಲಯವನ್ನು ಪ್ರಾರಂಭಿಸಿ ನೂರಾರು ಜನಗಳಿಗೆ ಸಂಗೀತ ಧಾರೆ ಎರೆದಿರುವರು. ಸಂಗೀತ ವಿಶಾರದ,ಸಂಗೀತ ಅಲಂಕಾರ ಮುಂತಾದ ಪದವಿ ಪರೀಕ್ಷೆಗಳನ್ನು ನಡೆಸಿದವರು. ಅವರ ಗರಡಿಯಲ್ಲಿ ತಯಾರಾದ ಅವರ ಶಿಷ್ಯರು ಸಂಗೀತ ಕ್ಷೇತ್ರದಲ್ಲಿ ಅಪಾರ ಖ್ಯಾತಿಗಳಿಸಿರುವರು. 1958ರಲ್ಲಿ ಗೋರಟಾದಲ್ಲಿ ಹೈದ್ರಾಬಾದ್ ಕರ್ನಾಟಕ ಪ್ರಾಂತೀಯ ಸಂಗೀತ ಸಮ್ಮೇಳನವನ್ನು ಯಶಸ್ವಿಯಾಗಿ ನೆರವೇರಿಸಿ ಈ ಭಾಗಕ್ಕೆ ಕೀರ್ತಿ ತಂದಿರುವರು. ಇಂದು ಅವರ ಪವಿತ್ರ ಹೆಸರಿನಲ್ಲಿರುವ ಪ್ರಶಸ್ತಿಯನ್ನು ಸ್ವೀಕರಿಸುತ್ತಿರುವುದು ನನ್ನ ಜೀವನದ ಅವಿಸ್ಮರಣೀಯ ಕ್ಷಣ ವೆಂದು ರಾಜೇಂದ್ರ ಸಿಂಗ ಪವಾರ ನುಡಿದರು. ದೇವಾಲಯ ಕಮಿಟಿ ಉಪಾಧ್ಯಕ್ಷರು ಮತ್ತು ಸಂಸ್ಥಾನ ಗಾಯಕರಾದ ಡಾ:ಸಿದ್ದರಾಮಯ್ಯ ಸ್ವಾಮಿ ರುದ್ರ ಮಠ ಗೋರಟಾ ಎಲ್ಲರನ್ನು ಸ್ವಾಗತಿಸಿ ಪ್ರಾಸ್ತಾವಿಕ ಮಾತನಾಡಿದರು. ಸಮಾರಂಭದ ಸಾನಿಧ್ಯವನ್ನು ವಹಿಸಿದ ಸಂಸ್ಥಾನದ ಅಧಿಪತಿಗಳಾದ ಶ್ರೀ ಡಾ: ರಾಜಶೇಖರ ಶಿವಾಚಾರ್ಯ ಸ್ವಾಮಿಗಳು ಗೋರಟಾ ಬೇಮಳಖೇಡ ಅವರು ಗೋರಟಾ ಕಲ್ಯಾಣ ಚಾಲುಕ್ಯರ ಕಾಲದ ಘಟಿಕಾ ಸ್ಥಾನ ಹೊಂದಿರುವ ಬಹುದೊಡ್ಡ ವಿದ್ಯಾ ಕೇಂದ್ರವಾಗಿತ್ತು. ಇದರಲ್ಲಿ ಸು. 200 ಜನ ಪ್ರಾಧ್ಯಾಪಕರು ಬೋಧನೆ ಮಾಡುತ್ತಿದ್ದರೆಂದು ಭಾಸ್ಕರ ಚಟ್ಟೋಪಾಧ್ಯಾಯ ಇದರ ಕುಲಪತಿಗಳಾಗಿದ್ದರು. ಛಾತ್ರರ ಸಂಖ್ಯೆ ಅಗಣಿತವಾಗಿತ್ತು. ಇಲ್ಲಿದ್ದ ರಾಜ ಪೂಜಿತ ರುದ್ರೇಶ್ವರ ದೇವಾಲಯದ ನಿತ್ಯ ಸೇವೆಗೆಂದು ಮತ್ತು ಇಲ್ಲಿದ್ದ ವಿಶ್ವವಿದ್ಯಾಲಯಕ್ಕೆ ಚಾಲುಕ್ಯ ಅರಸ 6ನೇ ವಿಕ್ರಮಾದಿತ್ಯ (1076 ಕ್ರಿ ಶ)ನು ಭಲ್ಲುಕೆ 84 ಪ್ರದೇಶವನ್ನು ದಾನವಾಗಿ ನೀಡಿದ್ದನೆಂಬ ಸಂಗತಿಯನ್ನು ಇಲ್ಲಿರುವ ಬೃಹತ್ ಶಾಸನ ಉಲ್ಲೇಖಿಸುತ್ತದೆ. ಆ ಪ್ರಾಚೀನ ರುದ್ರೇಶ್ವರ ದೇವಾಲಯದ ಪ್ರತೀಕವಾಗಿ ಪೂಜ್ಯ ಶ್ರೀ ವಿರೂಪಾಕ್ಷಯ್ಯ ಸ್ವಾಮಿಯವರ ಸತ್ಸಂಕಲ್ಪದಂತೆ ಇಂದು ಎಲ್ಲ ಭಕ್ತರ ಸಯೋಗದೊಂದಿಗೆ ಬೃಹತ್ ಸಂಗೀತ ರುದ್ರೇಶ್ವರ ಬೃಹತ್ ದೇವಾಲಯ ಮತ್ತು ಸುಮಾರು 81 ಅಡಿಯ ಬೃಹತ್ ಗೋಪುರ ನಿರ್ಮಾಣ ಮಾಡಲಾಗಿದೆ ಎಂದು ಪೂಜ್ಯರು ಹೇಳಿದರು.



ಜಿಲ್ಲಾ ಪೊಲೀಸ್ ಅಧೀಕ್ಷಕರಾದ ಡಾ. ಶೋಭಾರಾಣಿ ವಿ.ಜೆ,ಐಪಿಎಸ್ ರವರು ಮದ್ದೂರು ಪೊಲೀಸ್ ಠಾಣಾ ವ್ಯಾಪ್ತಿಯ ಕೆ.ಹೊನ್ನಲೆಗೆರೆ ಗ್ರಾಮದಲ್ಲಿ ಕೊಲೆ ನಡೆದ ಸ್ಥಳಕ್ಕೆ ಭೇಟಿ ನೀಡಿ ಪರಿಶೀಲಿಸಿ ಪ್ರಕರಣದ ತನಿಖೆ ಹಾಗೂ ಆರೋಪಿಗಳ ಪತ್ತೆ ಯ ಬಗ್ಗೆ ತನಿಖಾಧಿಕಾರಿಗಳಿಗೆ ಸೂಕ್ತ ಸಲಹೆ ಮತ್ತು ಸೂಚನೆಗಳನ್ನು ನೀಡಿದರು, ನಂತರ ಮಂಡ್ಯ ಜಿಲ್ಲಾಸ್ಪತ್ರೆಗೆ ಭೇಟಿ ನೀಡಿ ಪರಿಶೀಲನೆ ನಡೆಸಿದರು.



ಡಿಸಿಎಂ ಡಿ ಕೆ ಶಿವಕುಮಾರ್ ಅವರು ಕುಮಾರಪಾರ್ಕ್ ಗಾಂಧಿ ಭವನ ರಸ್ತೆಯ ಸರಕಾರಿ ಗೃಹ ಕಚೇರಿಯಲ್ಲಿ ಗ್ರೇಟರ್ ಬೆಂಗಳೂರು ಸಮಗ್ರ ಉಪನಗರ ಯೋಜನೆ ಸಂಬಂಧ ಬಿಡದಿ ರೈತ ಪ್ರತಿನಿಧಿಗಳ ಜತೆ ಸಮಾಲೋಚನೆ ನಡೆಸಿದರು. ಶಾಸಕ ಬಾಲಕೃಷ್ಣ, ಮುಖಂಡ ಗಾಣಕಲ್ ನಟರಾಜ್, ರೈತ ಮುಖಂಡರಾದ ರಾಜಣ್ಣ ಹೊಸೂರು, ಸಿದ್ದರಾಜು, ಮಂಜುನಾಥ, ಶಿವರಾಮು, ಜಯರಾಮಯ್ಯ, ಕೃಷ್ಣಮೂರ್ತಿ, ವಿಶ್ವನಾಥ್ ಮತ್ತಿತರರು ಉಪಸ್ಥಿತರಿದ್ದರು.



ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು ಹಾಗೂ ಶಿವಮೊಗ್ಗ ಜಿಲ್ಲಾ ಉಸ್ತುವಾರಿ ಸಚಿವರಾದ ಎಸ್. ಮಧು ಬಂಗಾರಪ್ಪ ಅವರ ನೇತೃತ್ವದಲ್ಲಿ ಶಿವಮೊಗ್ಗ ವಕೀಲರ ಸಂಘದ ಪದಾಧಿಕಾರಿಗಳ ನಿಯೋಗವು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರನ್ನು ಗೃಹಕಚೇರಿ 'ಕೃಷ್ಣಾ'ದಲ್ಲಿ ಭೇಟಿಯಾಗಿ, ಶಿವಮೊಗ್ಗಕ್ಕೆ ಹೈಕೋರ್ಟ್ ಸಂಚಾರಿ ಪೀಠದ ಅಗತ್ಯತೆಯ ಕುರಿತು ಚರ್ಚಿಸಿ ಮನವಿ ಪತ್ರ ಸಲ್ಲಿಸಿತು.

# ಕಮಲ ಹುದ್ದೆಯ ಕಲರವ

## ರಾಜ್ಯ ಬಿಜೆಪಿ ಪಕ್ಷದಲ್ಲಿ ರಾಜ್ಯಾಧ್ಯಕ್ಷ ಸ್ಥಾನದ ಬದಲಾವಣೆ ಚರ್ಚೆ | ಯಾರಿಗೆ ಒಲಿಯಲಿದೆ ಪಟ್ಟ?

• ಮಲ್ಲಮ್ಮ ನುಡಿ ವಾರ್ತೆ ಬೆಂಗಳೂರು

ರಾಜ್ಯ ಬಿಜೆಪಿ ಪಕ್ಷದಲ್ಲಿ ಇದೀಗ ರಾಜ್ಯಾಧ್ಯಕ್ಷ ಸ್ಥಾನದ ಬದಲಾವಣೆ ಚರ್ಚೆ ಮುನ್ನಲೆಗೆ ಬಂದಿದೆ. ಹಾಲಿ ರಾಜ್ಯಾದ್ಯಕ್ಷ ಅವರ ಅವರ ಅವಧಿ ಮುಗಿಯುವ ಮುನ್ನವೇ ಬಿಜೆಪಿಯ ಪ್ರಭಾವಿ ನಾಯಕ ಈ ಸ್ಥಾನಕ್ಕೆ ಪೈಪೋಟಿ ನಡೆದಿದೆ. ಕೆಲವರು ತೆರೆ ಮರೆಯಲ್ಲೇ ರಾಷ್ಟ್ರೀಯ ನಾಯಕರ ಮೂಲಕ ಹುದ್ದೆಗೆ ಕಣ್ಣು ಹಾಕುತ್ತಿದ್ದಾರೆ.

**ಅವಧಿ ಮುಕ್ತಾಯ ಶೀಘ್ರ:** 2026 ನವೆಂಬರ್ ತಿಂಗಳಿಗೆ ಬಿ ವೈ ವಿಜಯೇಂದ್ರ ಅವರ ಬಿಜೆಪಿ ರಾಜ್ಯಾಧ್ಯಕ್ಷ ಅವಧಿ ಮುಕ್ತಾಯವಾಗುತ್ತಿದೆ. ಮೂರು ವರ್ಷಗಳ ಕಾಲ ಬಿಜೆಪಿಯಲ್ಲಿ ರಾಜ್ಯಾಧ್ಯಕ್ಷ ಅವಧಿ ಇದೆ. ಅವಧಿ ಮುಕ್ತಾಯಗೊಳ್ಳಲು ಕೆಲವೇ ತಿಂಗಳು ಇರುವ ಹಿನ್ನೆಲೆಯಲ್ಲಿ ಈ ಪ್ರಯತ್ನ ನಡೆಸಲಾಗುತ್ತಿದೆ.

**ಯಾರು ಆ ಪ್ರಭಾವಿ ನಾಯಕ?:** ಬಿಜೆಪಿಯಲ್ಲಿ ರಾಜ್ಯಾಧ್ಯಕ್ಷ ಆಯ್ಕೆ ಕುರಿತು ಚರ್ಚೆ ಹಿನ್ನೆಲೆಯಲ್ಲಿ ಮಾಜಿ ಸಚಿವ ಶ್ರೀರಾಮುಲು ಹೆಸರು ಚರ್ಚೆಗೆ ಬರುತ್ತದೆ. ರಾಜ್ಯಾಧ್ಯಕ್ಷ ಸ್ಥಾನಕ್ಕೆ ಶ್ರೀ ರಾಮುಲು ಭಾರೀ ಲಾಬಿ, ಪೈಪೋಟಿ ನಡೆಸುತ್ತಿದ್ದಾರೆ. ಮುಂದಿನ ರಾಜ್ಯಾಧ್ಯಕ್ಷರಾಗಲು ಶ್ರೀರಾಮುಲು ಕಸರತ್ತು ಜೋರಾಗಿದೆ.



### ಮಾಜಿ ಸಚಿವರ ಕಸರತ್ತು

ರಾಜ್ಯಾಧ್ಯಕ್ಷ ಸ್ಥಾನಕ್ಕೆ ತಮ್ಮನ್ನು ಪರಿಗಣಿಸುವಂತೆ ಶ್ರೀರಾಮುಲು ಒತ್ತಡ ಹೇರುತ್ತಿದ್ದಾರೆ. ಹೈಕಮಾಂಡ್ ನಾಯಕರಿಗೆ ಈ ಸಂಬಂಧ ಶ್ರೀರಾಮುಲು ಬೇಡಿಕೆ ಇಟ್ಟಿದ್ದಾರೆ. ಕೇಂದ್ರ ಸಚಿವ ಪ್ರಹ್ಲಾದ್ ಜೋಷಿ ಮೂಲಕವೂ ಶ್ರೀರಾಮುಲು ಪ್ರಯತ್ನ ನಡೆಸಲಾಗುತ್ತಿದೆ. ವಿಜಯೇಂದ್ರ ಅವಧಿ ಮುಗಿದ ಬಳಿಕ ತಮ್ಮನ್ನು ರಾಜ್ಯಾಧ್ಯಕ್ಷ ಮಾಡುವಂತೆ ಶ್ರೀರಾಮುಲು ಒತ್ತಾಯ ಹೇರುತ್ತಿದ್ದಾರೆ.

### ವಿಷಯ ಇರಿಸಿ ಬೇಡಿಕೆ..!

ಎಸ್ಟಿ ಸಮುದಾಯದ ಪ್ರಬಲ ನಾಯಕನಾಗಿದ್ದೇನೆ. ರಾಜ್ಯಾಧ್ಯಕ್ಷರನ್ನಾಗಿ ಮಾಡಿದರೆ ಎಸ್ಟಿ ಸಮುದಾಯ ಬಿಜೆಪಿಗೆ ಬೆಂಬಲಿಸಲಿದೆ. ಸದ್ಯ ಕಾಂಗ್ರೆಸ್ ಮೇಲೆ ಎಸ್ಟಿ ಸಮುದಾಯ ಬೇಸರಗೊಂಡಿದೆ. ಮೀಸಲಾತಿ ಕೊಡದಿರುವ ಹಿನ್ನೆಲೆಯಲ್ಲಿ ಕಾಂಗ್ರೆಸ್ ಮೇಲೆ ಎಸ್ಟಿ ಸಮುದಾಯ ಅಸಮಧಾನಗೊಂಡಿದೆ. ಹೀಗಾಗಿ ಎಸ್ ಟಿ ಸಮುದಾಯಕ್ಕೆ ಆದ್ಯತೆ ನೀಡಬೇಕು ಎಂಬುದು ರಾಮುಲು ಬೇಡಿಕೆ.

ರಾಜ್ಯಾಧ್ಯಕ್ಷ ಬದಲಾವಣೆ ಚರ್ಚೆ ಇಲ್ಲ. ನಾವು ಎಸ್ ಟಿ ಸಮುದಾಯದಿಂದ ಅಧ್ಯಕ್ಷರಾಗಬೇಕು ಎಂಬ ಬೇಡಿಕೆ ಇಡುತ್ತಿಲ್ಲ. ಸಮಾಜದ ಹಿತದೃಷ್ಟಿಯಿಂದ ಎಸ್ ಟಿ ಸಮುದಾಯ ಒಂದಾಗಿದೆ. ಪಕ್ಷ, ಸಮಾಜದ ವಿಚಾರ ಬಂದಾಗ ಎಲ್ಲರೂ ಒಂದಾಗಿರುತ್ತೇವೆ.

–ರಾಜು ಗೌಡ, ಮಾಜಿ ಶಾಸಕ ಹಾಗೂ ಎಸ್ ಟಿ ಸಮುದಾಯದ ಬಿಜೆಪಿ ಮುಖಂಡ

### ಅಧ್ಯಕ್ಷ ನಿತಿನ್ ಕುತೂಹಲ

ಮುಂಬರುವ 2028ರ ವಿಧಾನಸಭೆ ಚುನಾವಣೆಗೆ ಪಕ್ಷದಲ್ಲಿ ಕೆಲವು ಆಮೂಲಾಗ್ರ ಬದಲಾವಣೆ ಕುರಿತಂತೆ ಬಿಜೆಪಿ ರಾಷ್ಟ್ರೀಯ ಅಧ್ಯಕ್ಷ ನಿತಿನ್ ನಬೀನ್ ಹಾಗೂ ಕೇಂದ್ರ ಸಚಿವ ಭೂಪೇಂದ್ರ ಯಾದವ್ ನೇತೃತ್ವದ ಬಿಜೆಪಿ ನಿಯೋಗ ಮೇ 23ರಂದು ರಾಜ್ಯಕ್ಕೆ ಭೇಟಿ ನೀಡುತ್ತಿದ್ದು, ಕುತೂಹಲ ಕೆರಳಿಸಿದೆ.

### ವಿಜಯೇಂದ್ರ ಸ್ಥಿತಿ ಗತಿ..?

ಹಾಲಿ ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ಅವರ ಅವಧಿಯನ್ನು ಮುಂದುವರೆಸಬೇಕೇ? ಇಲ್ಲವೇ ಈ ಹುದ್ದೆಯನ್ನು ಬೇರೆಯವರಿಗೆ ನೀಡಬೇಕೇ? ಪ್ರಧಾನ ಕಾರ್ಯದರ್ಶಿಗಳು, ಕಾರ್ಯದರ್ಶಿಗಳು, ಪದಾಧಿಕಾರಿಗಳ ನೇಮಕಾತಿ, ಪಕ್ಷ ಸಂಘಟನೆ ಸೇರಿದಂತೆ ಪ್ರಚಲಿತ ವಿದ್ಯಮಾನಗಳ ಬಗ್ಗೆ ರಾಷ್ಟ್ರೀಯ ಅಧ್ಯಕ್ಷ ಅಭಿಪ್ರಾಯ ಸಂಗ್ರಹಿಸಲಿದ್ದಾರೆ.

# ಟ್ರೆಂಡ್ ಬಗ್ಗೆ ಸಚಿವ ಪ್ರಿಯಾಂಕ್ ಖರ್ಗೆ ವಾಗ್ದಾಳಿ

• ಮಲ್ಲಮ್ಮ ನುಡಿ ವಾರ್ತೆ ಬೆಂಗಳೂರು



ಪ್ರಧಾನಿ ನರೇಂದ್ರ ಮೋದಿ ಹಾಗೂ ಇಟಲಿ ಪ್ರಧಾನಿ ಜಾರ್ಜಿಯಾ ಮೆಲೋನಿ ಅವರ ಭೇಟಿ ಹಾಗೂ ಅದರ ಸುತ್ತಲಿನ ಸಾಮಾಜಿಕ ಜಾಲತಾಣದ ಟ್ರೆಂಡ್ ಬಗ್ಗೆ ಸಚಿವ ಪ್ರಿಯಾಂಕ್ ಖರ್ಗೆ ತೀವ್ರವಾಗ್ದಾಳಿ ನಡೆಸಿದ್ದಾರೆ. ಪ್ರಮುಖವಾಗಿ, ಇಂಧನ ಬಿಕ್ಕಟ್ಟು ಪರಿಹಾರ ಬದಿಗಿರಲಿ, ಮೆಲೋನಿ ಅವರಿಗೆ ಮೆಲೋಡಿ (ಚಾಕೊಲೇಟ್) ತಡವಾಗಬಾರದು ಎಂದು ಸಚಿವರು ವ್ಯಂಗ್ಯವಾಡಿದ್ದಾರೆ. ಮೋದಿಯವರನ್ನು 'ಸ್ವಯಂ ಪ್ರಚಾರದ ಗೀಳಿರುವ ಇನ್‌ಫ್ಲುಯೆನ್ಸರ್' ಎಂದು ಕರೆದಿರುವ ಅವರು, ಜ್ವಲಂತ ಸಮಸ್ಯೆಗಳಿಂದ ಜನರ ಗಮನವನ್ನು ಬೇರೆಡೆ ಸೆಳೆಯಲು ಪ್ರಧಾನಿ ಇಂತಹ 'ಸಿಲ್ಲಿ ರೀಲ್ಸ್' ಮೊರೆ ಹೋಗುತ್ತಿದ್ದಾರೆ ಎಂದು ಕಟುವಾಗಿ ಟೀಕಿಸಿದ್ದಾರೆ. ಈ ಕುರಿತು ಎಕ್ಸ್ (ಟ್ವಿಟರ್) ಖಾತೆಯಲ್ಲಿ ಬರೆದುಕೊಂಡಿರುವ ಪ್ರಿಯಾಂಕ್ ಖರ್ಗೆ, ಪ್ರಧಾನಿಯವರ ಇತ್ತೀಚಿನ ವಿದೇಶಿ ಪ್ರವಾಸದ ನಡೆಯನ್ನು ಲೇವಡಿ ಮಾಡಿದ್ದಾರೆ.

# ಹಠಾತ್ ಹೃದಯಾಘಾತದಿಂದ ಸಾವು

• ಮಲ್ಲಮ್ಮ ನುಡಿ ವಾರ್ತೆ ಗಂಗಾವತಿ



ನಗರದ ಕೋರ್ಟ್ ಆವರಣದಲ್ಲಿರುವ ಕ್ಯಾಂಟೀನ್ ನಲ್ಲಿ ಯುವ ವಕೀಲ ಕನಕೇಶ್(26) ಹಠಾತ್ ಹೃದಯಾಘಾತದಿಂದ ಕೊನೆಯುಸಿರೆಳೆದರು. ಕಳೆದ ವರ್ಷವಷ್ಟೇ ವಕೀಲ ವೃತ್ತಿ ಆರಂಬಿಸಿದ್ದ ಕನಕೇಶ ಈ ದಿನ ಒಂದನೇ ಹೆಚ್ಚುವರಿ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರ ಬೀಳ್ಕೋಡುಗೆ ಸಮಾರಂಭದಲ್ಲಿ ಭಾಗಿಯಾಗಿ ಹೊರ ಬಂದ ಸಂದರ್ಭದಲ್ಲಿ ಹಠಾತ್ ಎದೆನೋವು ಬಂದಾಗ ಖಾಸಗಿ ಆಸ್ಪತ್ರೆಗೆ ಕರೆದೊಯ್ಯುವ ಸಂದರ್ಭದಲ್ಲಿ ಕೊನೆಯುಸಿರು ಎಳೆದಿದ್ದಾನೆ ಎಂದು ತಿಳಿದು ಬಂದಿದೆ. ಇಂದು ರಾತ್ರಿ ಸ್ವಗ್ರಾಮದಲ್ಲಿ ಅಂತ್ಯಕ್ರಿಯೆ ನೆಡಸಲು ಕುಟುಂಬದ ಸದಸ್ಯರು ನಿರ್ಧರಿಸಿದ್ದಾರೆ.

# ಗಬ್ಬು ಚರಂಡಿಯಲ್ಲೇ ಶುದ್ಧ ನಲ್ಲಿ ನೀರು, ಆರೋಗ್ಯ ಏರುಪೇರು

• ರಾಜ್‌ಕುಮಾರ್ ಹಡಪದ, ಚಿಟಗುಪ್ಪ

ತಾಲೂಕಿನ ಚಾಂಗಲೇರಾ ಗ್ರಾಮ ಪಂಚಾಯಿತಿ ವ್ಯಾಪತಿಯ ಜನರು ಚರಂಡಿಯಲ್ಲಿ ಹಾದು ಹೋಗಿರುವ ಕುಡಿಯುವ ನೀರಿನ ನೀರೇ ಕುಡಿದು ಬದುಕುತ್ತಿದ್ದಾರೆ..!

ಇದರಿಂದ ಇಲ್ಲಿನ ಜನರ ಆರೊಗ್ಯ ಆಗಾಗ ಏರುಪೇರಾಗುವುದು ಸಾಮಾನ್ಯವಾಗಿದೆ. ಓಣಿಯಲ್ಲಿ ದಶಕಗಳಿಂದ ಶುದ್ಧ ಕುಡಿಯುವ ನೀರಿನ ವ್ಯವಸ್ಥೆ ಇಲ್ಲ, ನಾವು 500 ಮೀಟರ್ ದೂರದಿಂದ ಕುಡಿಯುವ ನೀರು ಪ್ರತಿದಿನ ತರುತ್ತೇವೆ. ಮನೆಗೆ ಬಳಸಲು ಸಹ ನಾವು ಚಂರಂಡಿ ನೀರು ಬಳಸುವ ಪರಿಸ್ಥಿತಿ ಎದುರಾಗಿದೆ. ನೀರಿನ ಪೈಪ್ ಲೈನ್ ಚರಂಡಿಯಲ್ಲಿ ಇದೆ ಅದನ್ನು ಅದೇ ಪೈಪ್ ಇಂದ ಬರುವ ನೀರನ್ನು ನಾವು ಬಳಸಲು ಅನಿವಾರ್ಯವಾಗಿದೆ ಎನ್ನುತ್ತಾರೆ ಸ್ಥಳೀಯ ನಿವಾಸಿ ಮಹಮ್ಮದ್ ರಿಯಾಜೋದ್ದಿನ.

**ಮೂಲಭೂತ ಸೌಲಭ್ಯಗಳೇ ಕಣ್ಮರೆ:** ಮೂಲಭೂತ ಸೌಲಭ್ಯಗಳೇ ಕಣ್ಮರೆಯಾಗಿವೆ. ಗ್ರಾ.ಪಂ.ವ್ಯಾಪ್ತಿಯಲ್ಲಿ ತಾಂಡಾಗಳು ಸೇರಿ ಒಟ್ಟು 5 ಗ್ರಾಮಗಳು ಒಳಗೊಂಡಿವೆ. ಚಾಂಗಲೇರಾ 8000, ಪೋಲಕಪಳ್ಳಿ 900, ದೇವಗಿರಿ ತಾಂಡಾ 1000, ಚೌಕಿ ತಾಂಡಾ 800, ಅಲ್ಲಿಪುರ್ 600 ಸೇರಿ ಈ ಗ್ರಾ.ಪಂವ್ಯಾಪ್ತಿಯಲ್ಲಿ ಒಟ್ಟು 11,300 ಜನ ಸಂಖ್ಯೆ ಇದೆ.




### ಸ್ವಚ್ಛತೆಯೇ ಮರೀಚಿಕೆ, ಸಾರ್ವಜನಿಕರಿಗೆ ಟೈಫಾಯಿಡ್ ಭೀತಿ

ಸ್ವಚ್ಛತೆ ಇಲ್ಲದೆ ಸರ್ಕಾರಿ ಸೌಲಭ್ಯಗಳಿಲ್ಲದೆ, ಸೊಳ್ಳೆ, ಕಾಲರಾ, ಟೈಫಾಯಿಡ್, ಡೆಂಗೋ ಜ್ವರ ಜೊತೆಗೆ ಶುದ್ಧ ಕುಡಿಯುವ ನೀರಿನ ಸಮಸ್ಯೆಗಳಿಂದಾಗಿ ಜನತೆ ಹೈರಾಣಾಗಿದ್ದಾರೆ. ಬೆಂಗಳೂರಿನಿಂದ ಬೀದರ್ ಜಿಲ್ಲೆಯವರೆಗೆ ಸರ್ಕಾರಿ ಸೌಲಭ್ಯಗಳು ತಲುಪುವುದರೊಳಗೆ ಎಲ್ಲಾ ಮಂಗಮಾಯವಾಗಿವೆ. ಸ್ವಚ್ಛತೆಯೇ ಮರೀಚಿಕೆ ಆಗಿದೆ ಎಂದು ಗ್ರಾಮಸ್ಥರು ಆರೋಪಿಸಿದ್ದಾರೆ.

ಚರಂಡಿಯಲ್ಲಿ ಪೈಪ್ ಲೈನ್ ಇವಾಗಿನಿಂದ ಅಲ್ಲ, ಮೊದಲಿನಿಂದ ಇಲ್ಲೇ ಇದೆ. ರಿಪೇರಿ ಮಾಡಬೇಕೆಂದು 15ದಿನಗಳ ಹಿಂದೆ ಸ್ಥಳಕ್ಕೆ ಹೋಗಿ ನೀಡಿದ್ದೇನೆ, ಯಾವುದೇ ಸಮಸ್ಯೆ ಇದ್ದರೆ 8–10 ದಿವಸಗಳಲ್ಲಿ ಬಗ್ಗೆ ಹರಿಸುತ್ತೇನೆ.

–ರಾಮಚಂದ್ರ, ಅಭಿವೃದ್ಧಿ ಅಧಿಕಾರಿಗಳು, ಚಾಂಗಲೇರಾ

ಸಮಸ್ಯೆ ಬಗ್ಗೆ ಹರಿಸಲು ಗ್ರಾಮ ಪಂಚಾಯತ್ ಅಧಿಕಾರಿಗಳಿಗೆ ಸ್ಥಳಕ್ಕೆ ಭೇಟಿ ನೀಡಲು ಸೂಚಿಸುತ್ತೇನೆ. ಒಂದು ವೇಳೆ ಸರಿ ಹೋಗದಿದ್ದರೆ ನಾನೇ ವೈಯಕ್ತಿಕವಾದ ಆಸಕ್ತಿಯಿಂದ ಸ್ಥಳಕ್ಕೆ ಭೇಟಿ ನೀಡಿ ಸಮಸ್ಯೆ ಬಗ್ಗೆ ಹರಿಸುತ್ತೇನೆ.

–ಲಕ್ಷ್ಮಿ ಬಿರಾದಾರ್, ಇಒ, ಚಿಟಗುಪ್ಪ

### ಅಧಿಕಾರಿಗಳಿಗೆ ದೂರು ಕೊಟ್ರೂ ಡೋಂಟ್‌ಕೇರ್..!

ಗ್ರಾಮದ ವಾರ್ಡ್ ಸಂಖ್ಯೆ 3 ಸೇರಿದಂತೆ ಪ್ರತಿಯೊಂದು ಓಣಿಯಲ್ಲೂ ಸ್ವಚ್ಛತೆ ಇಲ್ಲದೆ ಗಬ್ಬು ನಾರುತ್ತಿದೆ. ಪರಿಸರ ಗಬ್ಬು ನಾರುತ್ತಿರುವುದರಿಂದ ನಮ್ಮ ಮನೆಯಲ್ಲಿ ವೃದ್ಧರು, ಸಣ್ಣ ಸಣ್ಣ ಮಕ್ಕಳಿದ್ದಾರೆ. ಸಾಂಕ್ರಾಮಿಕ ರೋಗಗಳು ಹರಡುತ್ತಿವೆ. ನಾವುಗಳು ಜೀವದ ಭಯದಲ್ಲಿ ಬದುಕುವ ಪರಿಸ್ಥಿತಿ ನಿರ್ಮಾಣವಾಗಿದೆ. ಗ್ರಾ.ಪಂ. ಹೋಗಿ ಅಧಿಕಾರಿಗಳಿಗೆ ಹೇಳಿ ಹೇಳಿ ಸಾಕಾಗಿದೆ. ಆದರೂ ಅಧಿಕಾರಿಗಳು ಕ್ಯಾರೆ ಎನ್ನುತ್ತಿಲ್ಲ ಎನ್ನುತ್ತಾರೆ ಜನತೆ.

## ಆರ್ಥಿಕತೆ ಎಕ್ಕುಟ್ಟಿ ಹೋಗಲಿ, ಆದ್ರೆ ಮೆಲೋನಿಗೆ 'ಮೆಲೋಡಿ' ಕೊಡುವುದು ತಡವಾಗ್ಬಾರ್ದು: ಖರ್ಗೆ ಕಿಡಿ

## ಆನ್‌ಲೈನ್ ಮೂಲಕ ಔಷಧ ಮಾರಾಟ ವಿರೋಧಿಸಿ ಪ್ರತಿಭಟನೆ




**ಚಿಟಗುಪ್ಪ:** ಆನ್‌ಲೈನ್‌ನಲ್ಲಿ ದೊಡ್ಡ ಕಂಪನಿಗಳು ಹೆಚ್ಚು ರಿಯಾಯಿತಿ ನೀಡಿ ಔಷಧ ಮಾರಾಟ ಮಾಡುತ್ತಿವೆ. ಈ ಮೂಲಕ ನಕಲಿ ಔಷಧಗಳೂ ಮಾರುಕಟ್ಟೆ ಪ್ರವೇಶಿಸುತ್ತಿವೆ. ಹೀಗಾಗಿ, ಆನ್‌ಲೈನ್ ನಲ್ಲಿ ಔಷಧ ಮಾರಾಟ ಮಾಡುವುದನ್ನು ಕೇಂದ್ರ ಸರ್ಕಾರ ತಕ್ಷಣ ನಿಲ್ಲಿಸಬೇಕೆಂದು ಆಗ್ರಹಿಸಿ ಬುಧವಾರ ತಾಲೂಕದ್ಯಂತ ಔಷಧ ವ್ಯಾಪಾರಿಗಳು ಅಂಗಡಿ ಬಂದ್ ಮಾಡಿ ಪ್ರತಿಭಟಿಸಿದರು. ಔಷಧ ಅಂಗಡಿ ವ್ಯಾಪಾರಿಗಳು ಪಟ್ಟಣದ ಬಸವರಾಜ ವೃತ್ತದಿಂದ ತಹಶೀಲ್ ಕಚೇರಿ ವರೆಗೆ ಪ್ರತಿಭಟನೆ ಮೆರವಣಿಗೆ ನಡೆಸಿ ದೇಶದ ಪ್ರಧಾನ ಮಂತ್ರಿ ನರೇಂದ್ರ ಮೋದಿಯವರಿಗೆ ಬರೆದ ಮನವಿ ಪತ್ರವನ್ನು ತಹಶೀಲ್ದಾರ್ ಮೂಲಕ ಕೇಂದ್ರ ಸರ್ಕಾರಕ್ಕೆ ಮನವಿ ಸಲ್ಲಿಸಿದರು. ಈ ಸಂದರ್ಭದಲ್ಲಿ ತಾಲೂಕ ಔಷಧಿ ವ್ಯಾಪಾರಿಗಳ ಸಂಘದ ತಾಲೂಕಾಧ್ಯಕ್ಷ ಗಣೇಶ ಐನಾಪುರ್, ಉಪಾಧ್ಯಕ್ಷ ಸೈಯದ್ ನಯೀಮುದ್ದೀನ, ಬಸವರಾಜ ತುಗಾಂವ, ರಾಜಪ್ಪ ಧುಮ್ಮನಸೂರ್, ರಾಮದಾಸ್ ಮಂಕಾಲ್, ಶ್ರೀಪಾದ ಮಂಕಾಲ್, ಸಂಪತಕುಮಾರ್ ಫೋಬ್ಬ, ರಾಮಶೆಟ್ಟಿ ಗುಂಡಪ್ಪ, ವೈಜಿನಾಥ ಪಾಟೀಲ್, ವಿಜಯಕುಮಾರ್ ವಿಜಾಪುರ ನಿರ್ಣಾ, ಡಾ. ಸಂತೋಷ ಐನಾಪುರ್, ಮಹೇಶ ಐನಾಪುರ್, ಮಹಮ್ಮದ್ ಖಮರ್, ಉಮೇಶ ಬಬಡಿ, ಇರ್ಫಾನ್ ವಕೀಲಸಾಬ್, ಸೇರಿದಂತೆ ತಾಲೂಕ ಔಷಧಿ ವ್ಯಾಪಾರಿಗಳ ಸಂಘದವರು ಉಪಸ್ಥಿತರಿದ್ದರು.

**ಆನ್‌ಲೈನ್ ನಲ್ಲಿ ಔಷಧ ಮಾರಾಟ ರದ್ದು ಮಾಡಬೇಕು. ಆನ್‌ಲೈನ್‌ನಲ್ಲಿ ಕಾರ್ಪೋರೇಟ್ ಕಂಪನಿಗಳು ಹೆಚ್ಚು ರಿಯಾಯಿತಿ ನೀಡುತ್ತಿವೆ. ನಕಲಿ ಔಷಧಿಗಳೂ ಆನ್ ಲೈನ್ ಮೂಲಕ ಮಾರುಕಟ್ಟೆಗೆ ಕಾಲಿಡುತ್ತಿವೆ. ಆನ್ಲೈನ್ ಔಷಧಿಗಳಿಂದ ಯುವಕರು ಬಲಿಯಾಗುತ್ತಿದ್ದಾರೆ. ಈ ಹಿನ್ನೆಲೆಯಲ್ಲಿ ನಾವು ರಾಷ್ಟ್ರವ್ಯಾಪಿ 14 ಲಕ್ಷ ಮಂದಿ ಔಷಧ ಅಂಗಡಿಯವರು, ಅದೇ ರೀತಿ ನಮ್ಮ ರಾಜ್ಯದಲ್ಲಿ 800 ಮಂದಿ ನಮ್ಮ ತಾಲೂಕಿನಲ್ಲಿ 80 ಅಂಗಡಿ ಬಂದ್ ಮಾಡಿ ಪ್ರತಿಭಟನೆ ನಡೆಸುತ್ತಿದ್ದೇವೆ.**

**–ರಾಶೀದ್ ಅಲಿ ಪಟೇಲ್**

**ತಾಲೂಕ ಔಷಧಿ ವ್ಯಾಪಾರಿಗಳ ಸಂಘದ ಪ್ರಧಾನ ಕಾರ್ಯದರ್ಶಿ**

## ಯುವಕನ ಬರ್ಬರ ಹತ್ಯೆ ಮಾರಕಾಸ್ತ್ರದಿಂದ ಕೊಚ್ಚಿ ಕೊಲೆ





**ಮಂಡ್ಯ:** ಮದ್ದೂರು ತಾಲೂಕಿನ ಕೆ.ಹೊನ್ನಲಗೆರೆಯಲ್ಲಿ ದುಷ್ಕರ್ಮಿಗಳ ಗುಂಪೊಂದು ಯಕನೋರ್ವನನ್ನು ಬರ್ಬರವಾಗಿ ಮಾರಕಾಸ್ತ್ರಗಳಿಂದ ಕೊಚ್ಚಿ ಕೊಲೆ ಮಾಡಲಾಗಿದೆ.

ಸಕ್ಕರೆನಾಡು ಮಂಡ್ಯದಲ್ಲಿ ಎರಡು ತಿಂಗಳ ಅಂತರದಲ್ಲಿ ನಡೆದ ಐದನೇ ಕೊಲೆ ಇದಾಗಿದ್ದು ಸರಣಿ ಭೀಕರ ಹತ್ಯೆಗಳಿಂದಾಗಿ ಮಂಡ್ಯಜಿಲ್ಲೆಯ ಜನತೆ ಆತಂಕದಲ್ಲಿ ಜೀವನ ನಡೆಸುವಂತೆ ಪರಿಸ್ಥಿತಿ ನಿರ್ಮಾಣವಾಗಿದೆ.

ಮದ್ದೂರು ತಾಲೂಕಿನ ಚುಂಚಗಳ್ಳಿ ಗ್ರಾಮದ ಸುನೀಲ್ (29) ಕೊಲೆಯಾದ ವ್ಯಕ್ತಿಯಾಗಿದ್ದಾನೆ.

ಸುನೀಲ್ ಮತ್ತು ಸ್ನೇಹಿತರಾದ ಸತೀಶ್, ಸಿದ್ದರಾಜು ಅವರೊಂದಿಗೆ ಮಂಗಳವಾರ ರಾತ್ರಿ 9.30ರ ವೇಳೆಗೆ ಕೆ.ಹೊನ್ನಲಗೆರೆಯ ದೀಪ ಬಾರ್ ನಲ್ಲಿ ಮದ್ಯಪಾನ ಮಾಡುವ ವೇಳೆಗೆ ಅಜ್ಜಹಳ್ಳಿ ಗ್ರಾಮದ ನಿಶಾಂತ್ ಮತ್ತು ಆತನ ಸ್ನೇಹಿತರು ಆಗಮಿಸಿದ್ದಾರೆ. ನಿಶಾಂತ್ ಹಾಗೂ ಕ್ಯಾಷಿಯರ್ ಜೊತೆಗೆ ಕೆಲಕಾಲ ಮಾತುಕತೆ ಬೆಳೆದಿದೆ. ಬಳಿಕ ಸುನೀಲ್ ಮತ್ತು ಆತನ ಸ್ನೇಹಿತರು ಮಧ್ಯೆ ಪ್ರವೇಶಿಸಿ ತಿಳಿಗೊಳಿಸಿದ್ದಾರೆ.

ಆನಂತರ ಸುನೀಲ್ ಮತ್ತು ಸ್ನೇಹಿತರು ಒಂದೇ ಬೈಕ್ ನಲ್ಲಿ 10.30 ರ ಸಮಯಕ್ಕೆ ತಮ್ಮ ಸ್ವಗ್ರಾಮ ಚುಂಚಗಳ್ಳಿಗೆ ತೆರಳುವಾಗ ಕೆ. ಹೊನ್ನಲಗೆರೆಯ ಡಾ.ಬಿ.ಆರ್.ಅಂಬೇಡ್ಕರ್ ಭವನದ ಮುಂಭಾಗ ಕಾರಿನಲ್ಲಿ ಬಂದ ದುಷ್ಕರ್ಮಿಗಳ ಗುಂಪೊಂದು ಬೈಕ್ ಅನ್ನು ಅಡ್ಡಗಟ್ಟಿ ಬೈಕ್ ನ ಹಿಂಬದಿ ಕುಳಿತಿದ್ದ ಸುನೀಲ್ ಕುತ್ತಿಗೆ ಭಾಗಕ್ಕೆ ಲಾಂಗ್ ಬೀಸಿ ಪರಾರಿಯಾಗಿದ್ದಾರೆ. ಮಾರಕಾಸ್ತ್ರದ ದಾಳಿಗೆ ಸುನೀಲ್ ಕುತ್ತಿಗೆ ಭಾಗಕ್ಕೆ ಗಂಭೀರವಾಗಿ ಗಾಯಗೊಂಡು ತಕ್ಷಣವೇ ಕುಸಿದು ಬಿದ್ದು ಸುನೀಲ್ ತೀವ್ರ ರಕ್ತಸ್ರಾವದಿಂದ ಬಿದ್ದು ನರಳಾಡಿದ್ದಾರೆ. ಆತನ ಸ್ನೇಹಿತರು ಗ್ರಾಮದ ಯುವಕರಿಗೆ ವಿಷಯ ತಿಳಿಸಿದ್ದಾರೆ.

ಇನ್ನು ವಿಷಯ ತಿಳಿದ ತಕ್ಷಣವೇ ಮದ್ದೂರು ಪೋಲೀಸ್ ಠಾಣೆಯ ಇನ್ಸ್ಪೆಕ್ಟರ್ ನವೀನ್ ಹಾಗೂ ಸಿಬ್ಬಂದಿಗಳು ಗಾಯಾಳು ಸುನೀಲ್ ನನ್ನು ಆತನ ಸ್ನೇಹಿತರು ಹಾಗೂ ಪೋಲೀಸರು ಮಂಡ್ಯ ಮಿಮ್ಸ್ ಆಸ್ಪತ್ರೆಗೆ ರವಾನಿಸಿದ್ದಾರೆ. ಆದರೆ, ಗಾಯಾಳು ಸುನೀಲ್ ಚಿಕಿತ್ಸೆ ಫಲಕಾರಿಯಾಗದೆ ಮಿಮ್ಸ್ ಆಸ್ಪತ್ರೆಯಲ್ಲಿ ಕೊನೆಯುಸಿರೆಳೆದಿದ್ದಾರೆ ಎಂದು ವೈದ್ಯರು ಸ್ಪಷ್ಟಪಡಿಸಿದ್ದಾರೆ.

ವಿಷಯ ತಿಳಿದು ಮಂಡ್ಯ ಮಿಮ್ಸ್ ಆಸ್ಪತ್ರೆಗೆ ಜಿಲ್ಲಾ ಪೋಲೀಸ್ ವರಿಷ್ಠಾಧಿಕಾರಿ ವಿ.ಜೆ. ಶೋಭಾರಾಣಿ ಭೇಟಿ ನೀಡಿ ಪರಿಶೀಲನೆ ನಡೆಸಿ ಅಗತ್ಯ ಮಾಹಿತಿ ಪಡೆದು ಕೊಂಡಿದ್ದು, ಕೊಲೆ ಆರೋಪಿಗಳ ಪತ್ತೆಗೆ ಈಗಾಗಲೇ ವಿಶೇಷ ತಂಡ ರಚನೆ ಮಾಡಲಾಗಿದೆ. ಕೊಲೆಗೆ ನಿಖರವಾದ ಕಾರಣ ತಿಳಿದುಬಂದಿಲ್ಲ. ಈ ಸಂಬಂಧ ಮದ್ದೂರು ಪೋಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದ್ದು, ಮುಂದಿನ ತನಿಖೆ ಕೈಗೊಂಡಿದ್ದಾರೆ.

# ಸ್ಯಾಟಲೈಟ್ ಬಸ್ ನಿಲ್ದಾಣಕ್ಕೆ 2 ಎಕರೆ ಜಮೀನು ಮಂಜೂರು

• **ಮಲ್ಲಮ್ಮ ನುಡಿ ವಾರ್ತೆ ಕಲಬುರಗಿ**

ಸೇಡಂ ಮಾರ್ಗವಾಗಿ ಸಂಚರಿಸುವ ಬಸ್ಸುಗಳ ಸುಗಮ ಸಂಚಾರಕ್ಕೆ ಉದ್ದೇಶಿತ ಗುಲಬರ್ಗಾ ವಿ.ವಿ ಬಳಿ ಸ್ಯಾಟಲೈಟ್ ಬಸ್ ನಿಲ್ದಾಣ ನಿರ್ಮಿಸಲು 2 ಎಕರೆ ಜಮೀನು ಕೆ.ಕೆ.ಆರ್.ಟಿ.ಸಿ. ಸಂಸ್ಥೆಗೆ ಮಂಜೂರು ಮಾಡಿದ ಗುಲಬರ್ಗಾ ವಿ.ವಿ. ಸಿಂಡಿ–ಕೇಟ್ ನಿರ್ಧಾರಕ್ಕೆ ಸಂತಸ ವ್ಯಕ್ತಪಡಿಸಿರುವ ಕೆ.ಕೆ. ಆರ್.ಟಿ.ಸಿ ಅಧ್ಯಕ್ಷ ಅರುಣಕುಮಾರ ಪಾಟೀಲ ಅವರು ಬುಧವಾರ ಸಿಂಡಿಕೇಟ್ ಸದಸ್ಯರಿಗೆ ಸತ್ಕರಿಸಿ ಅಭಿನಂದನೆ ಸಲ್ಲಿಸಿದರು.

ಕಲ್ಯಾಣ ಕರ್ನಾಟಕ ಸಾರಿಗೆ ಸಂಸ್ಥೆಯಿಂದ ಉದ್ದೇಶಿತ ಸೇಡಂ ಮಾರ್ಗದಲ್ಲಿ ಸ್ಯಾಟಲೈಟ್ ಬಸ್ ನಿಲ್ದಾಣ ನಿರ್ಮಾಣಕ್ಕೆ ಜಮೀನು ಮಂಜೂರು ಮಾಡಬೇಕೆಂಬ ಸಂಸ್ಥೆಯ ಪ್ರಸ್ತಾವನೆಗೆ ಗುಲಬರ್ಗಾ ವಿ.ವಿ. ಸಿಂಡಿಕೇಟ್ ಸಮಿತಿಯು ಸಾರ್ವಜನಿಕ ಹಿತಾಸಕ್ತಿ ಮತ್ತು ಜನಸೇವೆಯ ದೃಷ್ಟಿಯಿಂದ ಜಮೀನು ಮಂಜೂರಾತಿಗೆ ಮಹತ್ವದ ನಿರ್ಧಾರ ಕೈಗೊಂಡಿದ್ದು, ಇದು ಕಲಬುರಗಿ ನಗರದ ಸಾರಿಗೆ ವ್ಯವಸ್ಥೆಗೆ ಹೊಸ ದಿಕ್ಕು ನೀಡಲಿದೆ. ವಿದ್ಯಾರ್ಥಿಗಳು, ಪ್ರಯಾಣಿಕರು ಹಾಗೂ ಸಾರ್ವಜನಿಕರಿಗೆ ಹೆಚ್ಚಿನ ಅನುಕೂಲ ಕಲ್ಪಿಸಲಿದೆ ಎಂದು ಅರುಣಕುಮಾರ ಪಾಟೀಲ ಧನ್ಯವಾದ ತಿಳಿಸಿದರು.



ಇನ್ನು ಜಮೀನು ಮಂಜೂರಾತಿಗೆ ಜಿಲ್ಲಾ ಉಸ್ತುವಾರಿ ಸಚಿವ ಪ್ರಿಯಾಂಕ್ ಖರ್ಗೆ, ಉನ್ನತ ಶಿಕ್ಷಣ ಸಚಿವರು ಹಾಗೂ ಗುಲಬರ್ಗಾ ವಿಶ್ವವಿದ್ಯಾಲಯದ ಸಮ ಕುಲಾಧಿಪತಿ ಎಂ.ಸಿ.ಸುಧಾಕರ್, ಶಾಸಕರಾದ ಅಲ್ಲಮಪ್ರಭು ಪಾಟೀಲ್, ಕನೀಜ್ ಫಾತಿಮಾ ಅವರ ಸಹಕಾರ ಹಾಗೂ ಬೆಂಬಲ ಮತ್ತು ಸಹಕಾರವನ್ನು ಅಧ್ಯಕ್ಷರು ಇದೇ ಸಂದರ್ಭದಲ್ಲಿ ಕೊಂಡಾಡಿದರು.

ನಿಗಮದಿಂದ ಸ್ಯಾಟಲೈಟ್ ಬಸ್ ನಿಲ್ದಾಣ ನಿರ್ಮಾಣಗೊಂಡ ಬಳಿಕ ವಿದ್ಯಾರ್ಥಿಗಳು ಹಾಗೂ ಸಾರ್ವಜನಿಕರ ಸಂಚಾರಕ್ಕೆ ಮತ್ತಷ್ಟು ಅನುಕೂಲ ಒದಗಿಸುವ ಮತ್ತು ವಿಶ್ವವಿದ್ಯಾಲಯಕ್ಕೆ ಪ್ರತ್ಯೇಕ ಬಸ್ ಸೇವೆ ಕಲ್ಪಿಸುವ ಭರವಸೆಯನ್ನು ನಿಗಮದ ಅಧ್ಯಕ್ಷ ಅರುಣಕುಮಾರ ಎಮ್. ವಾಯ್. ಪಾಟೀಲ ವಿ.ವಿ.ಗೆ ನೀಡಿದರು. ಅಲ್ಲದೆ ಸಿಂಡಿಕೇಟ್ ಸದಸ್ಯರು ನೀಡಿದ ಪ್ರಮುಖ ಸಲಹೆಗಳನ್ನು ಸಹ ಪರಿಗಣನೆಗೆ ತೆಗೆದುಕೊಳ್ಳುವುದಾಗಿ ತಿಳಿಸಿದರು.

ಈ ಸಂದರ್ಭದಲ್ಲಿ ಗುಲಬರ್ಗಾ ವಿಶ್ವವಿದ್ಯಾಲಯದ ಸಿಂಡಿಕೇಟ್ ಸದಸ್ಯರು ಹಾಗೂ ಕುಲಪತಿ ಪ್ರೊ. ಶಶಿಕಾಂತ ಎಸ್. ಉಡಿಕೇರಿ, ರಿಜಿಸ್ಟ್ರಾರ್ ರಮೇಶ್ ಲಂಡನ್ಕರ್, ಮೌಲ್ಯಾಮಾಪನ ವಿಭಾಗದ ಕುಲಸಚಿವ ನಿಂಗಪ್ಪ ಕಣ್ಣೂರ್, ವಿತ್ತಾಧಿಕಾರಿ ಜಯಾಂಬಿಕಾ, ಸಿಂಡಿಕೇಟ್ ಸದಸ್ಯರುಗಳಾದ ಉದಯ್ ಕಾಂತ್ ಪಾಟೀಲ, ಪೀರ್ ಜಾದ್ ಫಹಿಮುದ್ದೀನ್, ಮಲ್ಲಣ್ಣ ಎಸ್. ಮಡಿವಾಳ, ರಾಘವೇಂದ್ರ ಎಂ. ಭೈರಪ್ಪ, ಸಿದ್ದಪ್ಪ ಸುಳ್ಳದ ಉಪಸ್ಥಿತರಿದ್ದರು.

# ಚರಂಡಿಯ ದುರ್ನಾತವೇ ಪಂಚಾಯತ್ ಸಾಧನೆ, ಕಿವುಡಾದ ಇಲಾಖೆ

• **ಮಲ್ಲಮ್ಮ ನುಡಿ ವಾರ್ತೆ ಸಿರುಗುಪ್ಪ**

ಗಡಿ ಗ್ರಾಮ ಹಚ್ಚೊಳ್ಳಿಯಲ್ಲಿ ಸ್ವಚ್ಛತೆ ಮಾಯ, ಚರಂಡಿ ನೀರು ರಸ್ತೆ ಮೇಲೆ ಹರಿದು ದುರ್ವಾಸನೆ ಗ್ರಾಮವನ್ನೇ ಆವರಿಸಿದೆ. "ಚರಂಡಿಯ ದುರ್ನಾತವೇ ಇಲ್ಲಿನ ಪಂಚಾಯತಿ ಆಡಳಿತದ ದೊಡ್ಡ ಸಾಧನೆ" ಎಂದು ಸ್ಥಳೀಯರು ಆಕ್ರೋಶ ಹೊರಹಾಕಿದ್ದಾರೆ.

**12 ವರ್ಷದಿಂದ ಅಲುಗದ ಕುರ್ಚಿ:**

ಬಳ್ಳಾರಿ ಜಿಲ್ಲೆ ಸಿರುಗುಪ್ಪ ತಾಲ್ಲೂಕಿನ ಗಡಿ ಗ್ರಾಮವಾದ ಹಚ್ಚೊಳ್ಳಿ ಗ್ರಾಮ ಪಂಚಾಯತಿಯಲ್ಲಿ ಪಿಡಿಒ ಮಂಜುಳಾ ಕಳೆದ 12 ವರ್ಷದಿಂದ ಒಂದೇ ಸ್ಥಳದಲ್ಲಿ ಠಿಕಾಣಿ ಹೂಡಿದ್ದಾರೆ. "ದಪ್ಪ ಚರ್ಮದ" ಆಡಳಿತದಿಂದ ಮೂಲಭೂತ ಸೌಕರ್ಯಗಳು ಮರೀಚಿಕೆಯಾಗಿವೆ. ಚರಂಡಿ ವ್ಯವಸ್ಥೆ ಇಲ್ಲದೇ ಕೊಳಚೆ ನೀರು ನೇರ ರಸ್ತೆಗೆ ಹರಿಯುತ್ತಿದ್ದು, ಹಂದಿಗಳು ಅದೇ ನೀರಿನಲ್ಲಿ ಮಲಗುವ ಪರಿಸ್ಥಿತಿ ನಿರ್ಮಾಣವಾಗಿದೆ.




**ನರೇಗಾ ಹಣ ಲೂಟಿ ಆರೋಪ:**

ನರೇಗಾ ಯೋಜನೆಯ ಕೋಟಿ ಗಟ್ಟಲೆ ಹಣ ಲೂಟಿ ಹೊಡೆದರೂ ಕನಿಷ್ಠ ಮೂಲಭೂತ ಸೌಕರ್ಯ ಒದಗಿಸದ ಪಂಚಾಯತಿ ಅಧಿಕಾರಿಗಳ ವಿರುದ್ಧ ಸಾರ್ವಜನಿಕರು ಗಂಭೀರ ಆರೋಪ ಮಾಡಿದ್ದಾರೆ. ರೋಗ–ರುಜಿನಗಳ ಭಯದಲ್ಲೇ ದಿನ ದೂಡುವ ಸ್ಥಿತಿ ನಿರ್ಮಾಣವಾಗಿದೆ.

**ಕಿವುಡಾದ ಇಲಾಖೆ, ನಾಪತ್ತೆಯಾದ ಅಧಿಕಾರಿಗಳು:**

1. ಸಿಇಒ ಹ್ಯಾರಿಸ್: ಸಾರ್ವಜನಿಕರ ಅಳಲನ್ನು ಸುದ್ದಿ ಮೂಲಕ ಇಲಾಖೆ ಗಮನಕ್ಕೆ ತಂದರೂ ಜಿಲ್ಲಾ ಪಂಚಾಯತ್ ಸಿಇಒ ಹ್ಯಾರಿಸ್ ಕ್ಯಾರೆ ಎನ್ನುತ್ತಿಲ್ಲ.

2. ಇಒ ಪವನ್ ಕುಮಾರ್: ಅಧಿಕೃತ ದೂರು ನೀಡಿದರೂ ಇಒ ಪವನ್ ಕುಮಾರ್ ಸ್ಪಂದಿಸದೇ "ಎಲ್ಲಿದೀಯಪ್ಪಾ ಪವನ್ ಕುಮಾರ್" ಎಂದು ಜನ ಹುಡುಕುವ ಸ್ಥಿತಿ ಬಂದಿದೆ.

3. ಫೋರ್ಜರಿ ಹಗರಣ: ಪಂಚಾಯತಿಯಲ್ಲಿ ಫೋರ್ಜರಿ ದಾಖಲೆ ಸೃಷ್ಟಿಸಿ ಅಕ್ರಮವಾಗಿ ಆಸ್ತಿ ಹಕ್ಕು ಬದಲಾವಣೆ ಮಾಡಿದ ಸಿಬ್ಬಂದಿ ಮೇಲೆ ಕ್ರಮವೇ ಇಲ್ಲ.

**"ಒಣ ರಾಜಕೀಯ ಬಿಟ್ಟು ಅಭಿವೃದ್ಧಿ ಕಡೆ ಗಮನಿಸಿ":**

ಇಡೀ ಇಲಾಖೆ ಸಿಬ್ಬಂದಿ ಕೆಳಹಂತದ ಅಧಿಕಾರಿಯ ತಪ್ಪನ್ನು ಸಮರ್ಥನೆ ಮಾಡಿಕೊಳ್ಳುತ್ತಿದ್ದಾರೆ ಎಂಬ ಆರೋಪ ಕೇಳಿಬಂದಿದೆ. "ಒಣ ರಾಜಕೀಯ ಬಿಟ್ಟು ಅಭಿವೃದ್ಧಿ ಕಡೆ ಗಮನ ನೀಡಿ ಖರ್ಗೆ ಸಾಹೇಬರೇ" ಎಂದು ಜನ ನೇರವಾಗಿ ಪ್ರಶ್ನಿಸಿದ್ದಾರೆ.

**ಜನರ ಅಂತಿಮ ಒತ್ತಾಯ:**

ಗಡಿ ಭಾಗದ ಗ್ರಾಮವೆಂದು ನಿಷ್ಕಾಳಜಿ ತೋರದೆ, ಇಲಾಖೆ ಎಚ್ಚೆತ್ತು ಕೂಡಲೇ ಕ್ರಮ ಕೈಗೊಳ್ಳಬೇಕು. 12 ವರ್ಷದಿಂದ ಕುರ್ಚಿಗೆ ಅಂಟಿಕೊಂಡಿರುವ ಪಿಡಿಒ ಮಂಜುಳಾ ವಿರುದ್ಧ ತನಿಖೆ ನಡೆಸಿ, ನರೇಗಾ ಹಣ ದುರ್ಬಳಕೆ, ಆಸ್ತಿ ಹಕ್ಕು ಅಕ್ರಮದ ಬಗ್ಗೆ ಉನ್ನತ ಮಟ್ಟದ ತನಿಖೆಯಾಗಬೇಕು. ಇಲ್ಲದಿದ್ದರೆ ಗ್ರಾಮಸ್ಥರು ಉಗ್ರಹೋರಾಟದ ಎಚ್ಚರಿಕೆ ನೀಡಿದ್ದಾರೆ.

# ಗಾಳಿಯಿಂದ ರಕ್ಷಣೆ ಪಡೆಯಲು ಬಸ್ ತಂಗುದಾಣ ಮುಖ್ಯ

• **ಮಲ್ಲಮ್ಮ ನುಡಿ ವಾರ್ತೆ ಹುಣಸೂರು**

ಗ್ರಾಮೀಣ ಭಾಗದಲ್ಲಿ ಊರಿಗೊಂದು ದೇವಾಲಯ ಎಷ್ಟು ಮುಖ್ಯವಾಗಿರುತ್ತದೆಯೊ ಅದೇ ರೀತಿ ಒಂದು ಊರಿನಿಂದ ಇನ್ನೊಂದು ಊರಿಗೆ ಪ್ರಯಾಣ ಮಾಡಲು ಹಾಗೂ ಬಿಸಿಲು, ಮಳೆ, ಗಾಳಿಯಿಂದ ರಕ್ಷಣೆ ಪಡೆಯಲು ಬಸ್ ತಂಗುದಾಣವೂ ಕೂಡ ಅಷ್ಟೇ ಮುಖ್ಯವಾಗಿರುತ್ತದೆಂದು ಐಟಿಸಿ ಕಂಪನಿಯ ಎಬಿಡಿ, ವಿಭಾಗದ ಜನರಲ್ ಮ್ಯಾನೇಜರ್ ಪಿ.ಪ್ರವೀಣ ಕುಮಾರು ತಿಳಿಸಿದರು.

ತಾಲ್ಲೂಕಿ ಕೂಡ್ಲೂರು ಗ್ರಾಮದಲ್ಲಿ ಐಟಿಸಿ ಕಂಪನಿಯ ಎಬಿಡಿ ವಿಭಾಗದಿಂದ ನೂತನವಾಗಿ ನಿರ್ಮಿಸಿರುವ ಬಸ್ ತಂಗುದಾಣವನ್ನು ಉದ್ಘಾಟಿಸಿ ಮಾತನಾಡಿದವರು ವೃದ್ದರಿಗೆ, ಮಹಿಳೆಯರು, ರೈತರು ಹಾಗೂ ಶಾಲಾ, ಕಾಲೇಜ್ ಮಕ್ಕಳು ಪ್ರತಿನಿತ್ಯ 200 ಕ್ಕೂ ಹೆಚ್ಚು ಜನರು ಪ್ರಯಾಣ ಮಾಡುವ ಸಂದರ್ಭದಲ್ಲಿ ಮಳೆ, ಗಾಳಿ ಹಾಗೂ ಬಿಸಿಲಿನಿಂದ ರಕ್ಷಣೆಗೆ ಅನುಕೂಲವಾಗಲೆಂದು ಈ ಗ್ರಾಮದ ಫಾಧರ್ ಸ್ಟ್ಯಾನ್ಲಿ ಡಿ ಅಮ್ಲೆಡ ಮತ್ತು ಜೋಸೆಫ್ ಮರಿರವರ ಮನವೀಯ ಮೇರೆಗೆ ನಾವು ನಮ್ಮ ತಂಬಾಕು ಬೆಳೆಗಳನ್ನು ಬೆಳೆಯುವ ಗ್ರಾಮೀಣ ಭಾಗದ ಸಾರ್ವಜನಿಕರಿಗೆ ಅನುಕೂಲವಾಗಲೆಂದು ಬಸ್ ನಿಲ್ದಾಣವನ್ನು ನಿರ್ಮಾಣ ಮಾಡಿಕೊಟ್ಟಿರುತ್ತೇವೆಂದರು.

ಮೈಸೂರು ವಿಭಾಗದ ಬಿಸೇಫ್ ಪಾಧರ್ ಡಾ.ಪ್ರೀಸ್ಸಿ ಸಿರಾರೋ.ಎಸ್.ಜೆ ಭಾಗವಹಿಸಿದ ಸಾರ್ವಜನಿಕರಿಗೆ ಪ್ರವಚನೆ ನೀಡಿ ಮಾತನಾಡಿದವರು ಕೂಡ್ಲೂರು ಗ್ರಾಮದ ಸಾರ್ವಜನಿಕರು, ಶಾಲಾ, ಕಾಲೇಜ್ ಮಕ್ಕಳ ಹಿತದೃಷ್ಠಿಯಿಂದ ಬಸ್ಸ್ ನಿಲ್ದಾಣವನ್ನು ಐಟಿಸಿ ಕಂಪನಿಯ ಎಬಿಡಿ ವಿಭಾಗದಿಂದ ನಿರ್ಮಾಣ ಮಾಡಿಕೊಟ್ಟಿರುತ್ತಾರೆ ಇದನ್ನು ಉತ್ತಮ ರೀತಿಯಲ್ಲಿ ಬಳಕೆ ಮಾಡಿಕೊಂಡು ಹಾಳಗದಂತೆ ನೋಡಿಕೊಳ್ಳಿ ಎಂದು ಕೀವಿ ಮಾತು ಹೇಳಿದರು.



ಕೂಡ್ಲೂರು ಚರ್ಚ್ ಫಾಧರ್ ಸ್ಟ್ಯಾನ್ಲಿ ಡಿಅಮ್ಲೆಡ ಮಾತನಾಡಿ ಈ ಬಸ್ಸ್ ನಿಲ್ದಾಣ ನಿರ್ಮಾಣ ಮಾಡಲು ತುಂಬ ಅಡೆ ತಡೆಗಳಿದ್ದವು ಅವಗಳನ್ನು ಕಾನೂನು ರೀತಿಯಲ್ಲಿ ವ್ಯವಸ್ಥಿತವಾಗಿ ಸರಿಪಡಿಸಿ ಸಹಕಾರವನ್ನು ಪಿ.ಡಿ.ಓ ರಾಮಣ್ಣನವರು ಬೆಂಬಲ ನೀಡಿರುತ್ತಾರೆ. ಇದರಿಂದ ಈ ಭಾಗದಲ್ಲಿ ಕೂಡ್ಲೂರು, ಬೀರನಹಳ್ಳಿ, ಕಾವಲ್ ಹಾಗೂ ಕಟ್ಟೆಮೂಲೆ ಗ್ರಾಮದ ಜನರಿಗೆ ಅನುಕೂಲವಾಗುವಂತೆ ಮಾಡಿಕೊಟ್ಟಿರುತ್ತಾರೆ ಉತ್ತಮ ರೀತಿಯಲ್ಲಿ ಸದ್ಬಳಕೆ ಮಾಡಿಕೊಳ್ಳೋಣ ಎಂದರು.

ಈ ಸಂದರ್ಭದಲ್ಲಿ ಐಟಿಸಿ ಕಂಪನಿಯ ಎಬಿಡಿ, ವಿಭಾಗದ ಇಲವಾಲ ಮ್ಯಾನೇಜರ್ ಚನ್ನವೀರೇಶ, ಆಶ್ರಯ ಸೇವಾ ಟ್ರಸ್ಟ್ ಅಧ್ಯಕ್ಷ ಜೋಸೆಫ್ ಮರಿ, ಆಶ್ರಯ ಸೇವಾ ಟ್ರಸ್ಟ್ ಸಂಘಟನಾ ಕಾರ್ಯದರ್ಶಿ ರಾಘವೇಂದ್ರ ಕೆ.ಪಿ. ಕಣಗಾಲು, ಪಿ.ಡಿ.ಓ ಸಂಘದ ಗೌರವಾಧ್ಯಕ್ಷ ರಾಮಣ್ಣ, ಔಟ್ ರೀಚ್ ಸಂಸ್ತೆಯ ಜಿ.ಎಸ್.ಜಗದೀಶ, ಗುತ್ತಿಗೆದಾರ ಮಹೇಶ, ಈ ಗ್ರಾಮದ ಮಾಜಿ ಗ್ರಾಮ ಪಂಚಾಯಿತಿ ಸದಸ್ಯರುಗಳು ಹಾಗೂ ಗ್ರಾಮಸ್ಥರು ಭಾಗವಹಿಸಿರು.

# ಭೀಕರ ರಸ್ತೆ ಅಪಘಾತ: ಲಾರಿ–ಬೈಕ್ ಮುಖಾಮುಖಿ ಡಿಕ್ಕಿ, ಇಬ್ಬರು ಸವಾರರು ಸ್ಥಳದಲ್ಲೇ ಸಾವು!!






• **ಮಲ್ಲಮ್ಮ ನುಡಿ ವಾರ್ತೆ ಕೊಪ್ಪಳ**

ಕುಕನೂರ ತಾಲೂಕಕಿನ ಆಡೂರ ರಾಜೂರ ಬೈ ಪಾಸ್ ರಾಷ್ಟ್ರೀಯ ಹೆದ್ದಾರಿ 365ಯಲ್ಲಿ ಇಂದು ಸಂಜೆ ಸಂಭವಿಸಿದ ಭೀಕರ ರಸ್ತೆ ಅಪಘಾತದಲ್ಲಿ ಬೃಹತ್ ಲಾರಿ ಹಾಗೂ ಬೈಕ್ ನಡುವೆ ಮುಖಾಮುಖಿ ಡಿಕ್ಕಿಯಾಗಿದ್ದು, ಬೈಕ್‌ನಲ್ಲಿದ್ದ ಇಬ್ಬರು ಸವಾರರು ಸ್ಥಳದಲ್ಲೇ ಅತ್ಯಂತ ದುರಂತವಾಗಿ ಸಾವನ್ನಪ್ಪಿರುವ ಘಟನೆ ನಡೆದಿದೆ

ಮೃತರನ್ನು ಯಲಬುರ್ಗಾ ತಾಲೂಕಿನ ಬಳೂಟಿಗಿ ಗ್ರಾಮದ ಬಸಣ್ಣ ಗೂಗೇರಿ(ವಯಸ್ಸು 55 ವರ್ಷ) , ಶಂಕ್ರಪ್ಪ ಸುತ್ತರೊಟ್ಟಿ (ವಯಸ್ಸು 48 ವರ್ಷ ) ನಿವಾಸಿಗಳೆಂದು ಗುರುತಿಸಲಾಗಿದೆ. ಬೈಕ್ ವಾಹನ ಸಂಖ್ಯೆ ಏಂ 37, ಇಗ 0208), (ಬೃಹತ್ ಲಾರಿ ಸಂಖ್ಯೆ : ಏಂ 27, ಃ9510), ಈ ಪ್ರಕರಣದಲ್ಲಿ ಹಾವೇರಿ ಜಿಲ್ಲೆ ಅಕ್ಕಿಆಲೂರು ಪಟ್ಟಣದ ಬೃಹತ್ ಲಾರಿ ಆಗಿದ್ದು, ಚಾಲಕ ಮಲ್ಲಪ್ಪ ತಂದೆ ವೀರಪ್ಪನನ್ನು ವಶಪಡಿಸಿಕೊಂಡಿದ್ದಾರೆ.

**ಘಟನೆಯ ವಿವರ:**

ಇಂದು ಸಂಜೆ ಸುಮಾರು 4:50ರ ವೇಳೆಗೆ ವೇಗವಾಗಿ ಯಲಬುರ್ಗಾ ಕಡೆಯಿಂದ ಬಂದ ಸಿಮೆಂಟ್ ಸಾಗಣೆ ಬೃಹತ್ ಲಾರಿಯೊಂದು ಕುಕನೂರ್ ಕಡೆಯಿಂದ ಯಲಬುರ್ಗಾ ಕಡೆಗೆ ಬರುತ್ತಿದ್ದ ಬೈಕ್‌ಗೆ ನೇರವಾಗಿ ಡಿಕ್ಕಿ ಹೊಡೆದಿದೆ. ಡಿಕ್ಕಿಯ ರಭಸಕ್ಕೆ ಬೈಕ್ ಸಂಪೂರ್ಣವಾಗಿ ನಜ್ಜುಗುಜ್ಜಾಗಿದ್ದು, ಸವಾರರಿಬ್ಬರು ಲಾರಿಯ ಚಕ್ರದಡಿಗೆ ಸಿಲುಕಿ ತೀವ್ರ ರಕ್ತಸ್ರಾವದಿಂದಾಗಿ ಸ್ಥಳದಲ್ಲೇ ಪ್ರಾಣ ಬಿಟ್ಟಿದ್ದಾರೆ.

ಸಂಜೆ ವೇಳೆ ಲಾರಿ ಚಾಲಕನ ಮತ್ತು ಮದ್ಯ ಸೇವಿಸಿ ಅತಿ ವೇಗದ ಚಾಲನೆಯೇ ಈ ಘಟನೆಗೆ ಮುಖ್ಯ ಕಾರಣ ಎಂದು ಪ್ರಾಥಮಿಕ ತನಿಖೆಯಿಂದ ತಿಳಿದುಬಂದಿದೆ.

ಘಟನಾ ಸ್ಥಳಕ್ಕೆ ಸ್ಥಳಕ್ಕೆ ಕೊಪ್ಪಳ ಜಿಲ್ಲಾ ವರಿಷ್ಠಾಧಿಕಾರಿ ಡಾ.ರಾಮ್ ಎಲ್ ಅರಸಿದ್ದಿ, ಅಡಿಷನಲ್ ಎಸ್ ಪಿ ಆರ ಹೇಮಂತ್ ಕುಮಾರ್ ಹಾಗೂ ಯಲಬುರ್ಗಾ ವೃತ್ತದ ಸಿಪಿಐ ಮೌನೇಶ್ವರ ಮಾಲಿಪಾಟೀಲ್, ಕುಕನೂರು ಠಾಣೆಯ ಸಬ್ ಇನ್ಸ್‌ಪೆಕ್ಟರ್ ಎಸ್ ಪಿ ನಾಯ್ಕ್ ಮತ್ತು ಸಿಬ್ಬಂದಿ ಭೇಟಿ ನೀಡಿ ಪರಿಶೀಲನೆ ನಡೆಸಿದ್ದಾರೆ. ಮೃತರ ಮೃತದೇಹಗಳನ್ನು ಮರಣೋತ್ತರ ಪರೀ–ಕ್ಷೆಗಾಗಿ ಹತ್ತಿರದ ಕುಕನೂರಿನ ಸರ್ಕಾರಿ ಆಸ್ಪತ್ರೆಗೆ ರವಾನಿಸಲಾಗಿದೆ.

# ಮೇ 23 ರಂದು ಗೋಕರ್ಣದಲ್ಲಿ ನಾಮಧಾರಿ ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ

• ಮಲ್ಲಮ್ಮ ನುಡಿ ವಾರ್ತೆಗೋಕರ್ಣ



ರಾಷ್ಟ್ರೀಯ ಈಡಿಗ ಮಹಾಮಂಡಳಿ ಹಾಗೂ ಶ್ರೀ ನಾರಾಯಣಗುರು ವೇದಿಕೆ ವತಿಯಿಂದ ನಾಮಧಾರಿ ಸಮಾಜದ ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ ಮೇ 23 ಶನಿವಾರ ಬೆಳಿಗ್ಗೆ 10.30 ಕ್ಕೆ ಇಲ್ಲಿಯ ವೀರಶೈವ ಸಭಾಭವನದಲ್ಲಿ ಹಮ್ಮಿಕೊಳ್ಳಲಾಗಿದೆ.

ಎಸ್‌ಎಸ್‌ಎಲ್‌ಸಿ : ಯುಕ್ತಿ ನಾಗರಾಜ ನಾಯ್ಕ ಶೇ.97.76, ಚರಿಷ್ಮಾ ಜಯಂತ ನಾಯ್ಕ ಶೇ.95.68, ಧನ್ಯಾ ನಾಗರಾಜ ನಾಯ್ಕ ಶೇ.93.76, ಕುಶಾದ ಕುಮಾರ ನಾಯ್ಕ ಶೇ.90.56 ಹಾಗೇ ಬಾಡ ಗ್ರಾಮದ ದಿಶಾಂತ ದಯಾನಂದ ನಾಯ್ಕ 624 ಅಂಕ ಪಡೆದು ರಾಜ್ಯಕ್ಕೆ ದ್ವಿತೀಯ ಸ್ಥಾನ ಹೊಂದಿರುವುದಕ್ಕೆ ವಿಶೇಷ ಸನ್ಮಾನ ಹಮ್ಮಿಕೊಳ್ಳಲಾಗಿದೆ. ಪಿಯುಸಿ : ನಿಧಿ ಉದಯ ನಾಯ್ಕ ಶೇ.91.05, ಅನನ್ಯ ನಾಗೇಶ ನಾಯ್ಕ ಶೇ. 90, ಕಾರ್ತಿಕ ಕುಮಾರ ನಾಯ್ಕ ಶೇ.83.33 ಅಂಕ ಪಡೆದಿದ್ದು ಇವರನ್ನು ಸನ್ಮಾನಿಸಲಿದ್ದಾರೆ.

ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಗಳಾಗಿ ವಕೀಲರಾದ ಅರವಿಂದ ನಾಯ್ಕ ಆಗಮಿಸಲಿದ್ದು, ರಾಷ್ಟ್ರೀಯ ಈಡಿಗ ಮಹಾಮಂಡಳಿಯ ಅಧ್ಯಕ್ಷ ದಾಮೋದರ ಜಿ. ನಾಯ್ಕ ಅಧ್ಯಕ್ಷತೆ ವಹಿಸಲಿದ್ದಾರೆ. ಅತಿಥಿಗಳಾಗಿ ಶ್ರೀ ಮಹಾಬಲೇಶ್ವರ ಅರ್ಬನ್ ಬ್ಯಾಂಕ್ ನಿರ್ದೇಶಕ ತೇಜಸ್ವಿ ನಾಯ್ಕ, ಗ್ರಾಮೀಣ ವ್ಯವಸಾಯ ಸೇವಾ ಸಹಕಾರಿ ಸಂಘ ಹನೇಹಳ್ಳಿ ಅಧ್ಯಕ್ಷ ನಾಗರಾಜ ಆರ್. ನಾಯ್ಕ, ಖ್ಯಾತ ಚಿತ್ರಕಲಾ ಶಿಕ್ಷಕ ನಾಗರಾಜ ಹನೇಹಳ್ಳಿ, ನಿವೃತ್ತ ಉಪತಹಸೀಲ್ದಾರ ಎನ್. ಎಂ.ನಾಯ್ಕ ಪಾಲ್ಗೊಳ್ಳಲಿದ್ದಾರೆ ಎಂದು ಸಂಘಟಕರಾದ ನಾಗರಾಜ ಮಂಜಗುಣಿ, ಶ್ರೀಪಾದ ನಾಯ್ಕ, ಸಂತೋಷ ನಾಯ್ಕ, ಶ್ರೀನಿವಾಸ ನಾಯ್ಕ ಇತರರು ತಿಳಿಸಿದ್ದಾರೆ.

## ಹಿಂದುಳಿದ ವರ್ಗಗಳ ವಿದ್ಯಾರ್ಥಿನಿಲಯಗಳ ಪ್ರವೇಶಾತಿಗೆ ಅರ್ಜಿ ಆಹ್ವಾನ

• ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ

ಜಿಲ್ಲೆಯಲ್ಲಿ ಕಾರ್ಯನಿರ್ವಹಿಸುತ್ತಿರುವ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಮೆಟ್ರಿಕ್ ಪೂರ್ವ ಹಾಗೂ ಮೆಟ್ರಿಕ್ ನಂತರದ (ಕೇವಲ ಪಿಯುಸಿ ವಿದ್ಯಾರ್ಥಿಗಳಿಗೆ ಮಾತ್ರ) ಬಾಲಕ ಮತ್ತು ಬಾಲಕಿಯರ ವಿದ್ಯಾರ್ಥಿನಿಲಯಗಳಿಗೆ 2026-27ನೇ ಸಾಲಿನ ಹೊಸ ಪ್ರವೇಶಾತಿಗಾಗಿ ಅರ್ಹ ವಿದ್ಯಾರ್ಥಿಗಳಿಂದ ಆನ್‌ಲೈನ್ ಮೂಲಕ ಅರ್ಜಿಗಳನ್ನು ಆಹ್ವಾನಿಸಲಾಗಿದೆ.

ಪ್ರವರ್ಗ-1, 2ಎ, 2ಬಿ, 3ಎ, 3ಬಿ, ಪರಿಶಿಷ್ಟ ಜಾತಿ, ಪರಿಶಿಷ್ಟ ವರ್ಗ ಹಾಗೂ ಇತರೆ ಹಿಂದುಳಿದ ವರ್ಗಗಳಿಗೆ ಸೇರಿದ ವಿದ್ಯಾರ್ಥಿಗಳು ಈ ಸೌಲಭ್ಯ ಪಡೆದುಕೊಳ್ಳಬಹುದಾಗಿದೆ.

ಮೆಟ್ರಿಕ್ ಪೂರ್ವ ವಿದ್ಯಾರ್ಥಿನಿಲಯಗಳಿಗೆ (ಶಾಲಾ ವಿದ್ಯಾರ್ಥಿಗಳಿಗೆ) ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಲು ಜೂನ್ 08 ರವರೆಗೆ ಕಾಲಾವಕಾಶವಿರುತ್ತದೆ. ಮೆಟ್ರಿಕ್ ನಂತರದ ವಿದ್ಯಾರ್ಥಿನಿಲಯಗಳಿಗೆ (ಕೇವಲ ಪಿಯುಸಿ ವಿದ್ಯಾರ್ಥಿಗಳಿಗೆ) ಅರ್ಜಿ ಸಲ್ಲಿಸಲು ಜೂನ್ 15 ಕೊನೆಯ ದಿನವಾಗಿದೆ.*ಪೋಷಕರ ವಾರ್ಷಿಕ ಆದಾಯ ಮಿತಿ:*

ಪ್ರವರ್ಗ-1, ಎಸ್.ಸಿ ಮತ್ತು ಎಸ್.ಟಿ ವಿದ್ಯಾರ್ಥಿಗಳಿಗೆ ವಾರ್ಷಿಕ ಆದಾಯದ ಮಿತಿ ರೂ.2.50 ಲಕ್ಷ.

ಪ್ರವರ್ಗ-2ಎ, 2ಬಿ, 3ಎ, 3ಬಿ ಹಾಗೂ ಇತರೆ ಹಿಂದುಳಿದ ವರ್ಗದವರಿಗೆ ವಾರ್ಷಿಕ ಆದಾಯದ ಮಿತಿ ರೂ.1 ಲಕ್ಷ ನಿಗದಿಪಡಿಸಲಾಗಿದೆ.

ಅರ್ಹ ವಿದ್ಯಾರ್ಥಿಗಳು ಇಲಾಖೆಯ ಅಧಿಕೃತ ತಂತ್ರಾಂಶವಾದ (https://shp.karnataka.gov.in)ಮುಖಾಂತರ ಆನ್‌ಲೈನ್‌ನಲ್ಲಿ ಅರ್ಜಿಗಳನ್ನು ಸಲ್ಲಿಸಬಹುದಾಗಿದೆ.

ಅರ್ಜಿ ಸಲ್ಲಿಸುವಾಗ ಯಾವುದೇ ತಾಂತ್ರಿಕ ತೊಂದರೆಗಳು ಎದುರಾದಲ್ಲಿ ಅಗತ್ಯ ದಾಖಲೆಗಳೊಂದಿಗೆ ಜಿಲ್ಲಾ/ತಾಲ್ಲೂಕು ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿಗಳ ಕಚೇರಿಯನ್ನು ಸಂಪರ್ಕಿಸಬಹುದು.

ಹೆಚ್ಚಿನ ಮಾಹಿತಿಗಾಗಿ ಇಲಾಖೆಯ ಸಹಾಯವಾಣಿ ಸಂಖ್ಯೆ 8050770004 ಅನ್ನು ಸಂಪರ್ಕಿಸಬಹುದಾಗಿದೆ ಎಂದು ಜಿಲ್ಲಾ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಜಿಲ್ಲಾ ಅಧಿಕಾರಿ ಜಲಾಲಪ್ಪ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಸಿರುಗುಪ್ಪ: ವಿದ್ಯಾರ್ಥಿನಿಲಯಗಳ ಪ್ರವೇಶಾತಿಗೆ ಆನ್‌ಲೈನ್ ಅರ್ಜಿ ಆಹ್ವಾನ

• ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ

ಸಿರುಗುಪ್ಪ ತಾಲೂಕಿನ ಸಮಾಜ ಕಲ್ಯಾಣ ಇಲಾಖೆ ವ್ಯಾಪ್ತಿಯಲ್ಲಿ ಬರುವ ಸರ್ಕಾರಿ ಮೆಟ್ರಿಕ್ ಪೂರ್ವ ಮತ್ತು ಮೆಟ್ರಿಕ್ ನಂತರದ ಬಾಲಕರ ಹಾಗೂ ಬಾಲಕಿಯರ ವಿದ್ಯಾರ್ಥಿನಿಲಯಗಳಲ್ಲಿ 2026-27ನೇ ಸಾಲಿನ ಪ್ರವೇಶಕ್ಕಾಗಿ ಅರ್ಹ ವಿದ್ಯಾರ್ಥಿಗಳಿಂದ ಆನ್‌ಲೈನ್ ಮೂಲಕ ಅರ್ಜಿಗಳನ್ನು ಆಹ್ವಾನಿಸಲಾಗಿದೆ.

ಸಿರುಗುಪ್ಪ ತಾಲೂಕಿನ ವಿವಿಧ ಶಾಲೆ ಮತ್ತು ಕಾಲೇಜುಗಳಲ್ಲಿ ವಿದ್ಯಾಭ್ಯಾಸ ಮಾಡುತ್ತಿರುವ ಪರಿಶಿಷ್ಟ ಜಾತಿ, ಪರಿಶಿಷ್ಟ ವರ್ಗ ಹಾಗೂ ಇತರೆ ಹಿಂದುಳಿದ ವರ್ಗಗಳ ಆಸಕ್ತ ವಿದ್ಯಾರ್ಥಿಗಳು ಈ ಸೌಲಭ್ಯ ಪಡೆದುಕೊಳ್ಳಬಹುದಾಗಿದೆ.

ಮೆಟ್ರಿಕ್ ಪೂರ್ವ ನಿಲಯಗಳು (ಒಟ್ಟು 06): ಡಾ.ಬಿ.ಆರ್. ಅಂಬೇಡ್ಕರ್ ಸರ್ಕಾರಿ ಮೆಟ್ರಿಕ್ ಪೂರ್ವ ಬಾಲಕರ ವಿದ್ಯಾರ್ಥಿನಿಲಯ (ನಂ.1 ಸಿರುಗುಪ್ಪ, ನಂ.2 ಸಿರುಗುಪ್ಪ, ತೆಕ್ಕಲಕೋಟೆ, ಶಿರಿಗೇರಿ ಮತ್ತು ರಾರಾವಿ) ಹಾಗೂ ಬಾಲಕಿಯರ ವಿದ್ಯಾರ್ಥಿನಿಲಯ (ಸಿರುಗುಪ್ಪ).

ಮೆಟ್ರಿಕ್ ನಂತರದ ನಿಲಯಗಳು (ಒಟ್ಟು 03): ಡಾ. ಬಿ.ಆರ್. ಅಂಬೇಡ್ಕರ್ ಸರ್ಕಾರಿ ಮೆಟ್ರಿಕ್ ನಂತರದ ಬಾಲಕರ ವಿದ್ಯಾರ್ಥಿನಿಲಯ (ನಂ.1 ಸಿರುಗುಪ್ಪ, ನಂ.2 ಸಿರುಗುಪ್ಪ) ಹಾಗೂ ಬಾಲಕಿಯರ ವಿದ್ಯಾರ್ಥಿನಿಲಯ (ಸಿರುಗುಪ್ಪ).

ಮೆಟ್ರಿಕ್ ಪೂರ್ವ ವಿದ್ಯಾರ್ಥಿನಿಲಯಗಳಿಗೆ (5 ರಿಂದ 10ನೇ ತರಗತಿ ವಿದ್ಯಾರ್ಥಿಗಳಿಗೆ) ಅರ್ಜಿ ಸಲ್ಲಿಸಲು ಜೂನ್ 30 ಕೊನೆಯ ದಿನವಾಗಿದೆ. ಮೆಟ್ರಿಕ್ ನಂತರದ ವಿದ್ಯಾರ್ಥಿನಿಲಯಗಳಿಗೆ (ಕಾಲೇಜು ವಿದ್ಯಾರ್ಥಿಗಳಿಗೆ) ಅರ್ಜಿ ಸಲ್ಲಿಸಲು ಜುಲೈ 31 ಕೊನೆಯ ದಿನವಾಗಿರುತ್ತದೆ.

ಅರ್ಹ ವಿದ್ಯಾರ್ಥಿಗಳು ಇಲಾಖೆಯ ಅಧಿಕೃತ ವೆಬ್‌ಸೈಟ್ (https://swdhmis.karnataka.gov.in/#/login) ಮೂಲಕ ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಬಹುದಾಗಿದೆ.

ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಿದ ನಂತರ, ಅದರ ಸ್ವೀಕೃತಿ ಪ್ರತಿಯೊಂದಿಗೆ ಅಗತ್ಯ ದಾಖಲೆಗಳನ್ನು ಲಗತ್ತಿಸಿ ಸಿರುಗುಪ್ಪದ ಸಮಾಜ ಕಲ್ಯಾಣ ಇಲಾಖೆಯ ಸಹಾಯಕ ನಿರ್ದೇಶಕರ ಕಚೇರಿ ಅಥವಾ ಸಂಬಂಧಪಟ್ಟ ನಿಲಯಪಾಲಕರಿಗೆ (ವಾರ್ಡನ್) ಸಲ್ಲಿಸಬಹುದಾಗಿದೆ.

*ಅಗತ್ಯವಿರುವ ದಾಖಲೆಗಳು:*

ಜಾತಿ ಪ್ರಮಾಣ ಪತ್ರ, ಆದಾಯ ಪ್ರಮಾಣ ಪತ್ರ, ಆಧಾರ್ ಕಾರ್ಡ್, ಬ್ಯಾಂಕ್ ಖಾತೆ ಪುಸ್ತಕದ ಪ್ರತಿ, ಹಿಂದಿನ ತರಗತಿಯ ಅಂಕಪಟ್ಟಿ, 03 ಇತ್ತೀಚಿನ ಭಾವಚಿತ್ರಗಳು, ಹಾಗೂ ಇತರೆ ಪೂರಕ ದಾಖಲಾತಿಗಳು.

ಹೆಚ್ಚಿನ ವಿವರಗಳಿಗಾಗಿ ವಿದ್ಯಾರ್ಥಿಗಳು ಹಾಗೂ ಪೋಷಕರು ಸಹಾಯಕ ನಿರ್ದೇಶಕರ ಕಛೇರಿ ಅಥವಾ ಸಂಬಂಧಪಟ್ಟ ವಿದ್ಯಾರ್ಥಿನಿಲಯದ ನಿಲಯಪಾಲಕರನ್ನು (ವಾರ್ಡನ್) ಹಾಗೂ ಕಚೇರಿ ಮೊ.9480843078 ಗೆ ಸಂಪರ್ಕಿಸಬಹುದಾಗಿದೆ ಎಂದು ಸಿರುಗುಪ್ಪದ ಸಮಾಜ ಕಲ್ಯಾಣ ಇಲಾಖೆಯ ಸಹಾಯಕ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಚರಿತ್ರೆ ಅರಿಯಲು ವಸ್ತುಸಂಗ್ರಹಾಲಯಗಳು ಸಹಕಾರಿ: ಟಿ.ಜಿ.ವಿಠ್ಠಲ



• ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ

ಮೇ 20:ಚರಿತ್ರೆಯನ್ನು ಸುಲಭವಾಗಿ ಅರ್ಥೈಸಿಕೊಳ್ಳಲು ಮತ್ತು ಅರಿಯಲು ವಸ್ತುಸಂಗ್ರಹಾಲಯಗಳು ಅತ್ಯಂತ ಸಹಕಾರಿಯಾಗಿವೆ ಎಂದು ಗಾಂಧಿ ಭವನ ಹಾಗೂ ಮಲ್ಲಸಜ್ಜನ ವ್ಯಾಯಾಮ ಶಾಲೆಯ ಕಾರ್ಯದರ್ಶಿ ಟಿ.ಜಿ. ವಿಠ್ಠಲ ಅವರು ಅಭಿಪ್ರಾಯಪಟ್ಟರು.

ನಗರದ ರಾಬರ್ಟ್ ಬ್ರೂಸ್ ಫುಟ್ ಸಂಗನಕಲ್ಲು ಪ್ರಾಕ್ತನ ವಸ್ತುಸಂಗ್ರಹಾಲಯದಲ್ಲಿ ಸೋಮವಾರ ಆಯೋಜಿಸಲಾಗಿದ್ದ 'ಅಂತಾರಾಷ್ಟ್ರೀಯ ವಸ್ತುಸಂಗ್ರಹಾಲಯ ದಿನ' ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ಇತಿಹಾಸದ ಆಸಕ್ತರು ಪಠ್ಯಪುಸ್ತಕಗಳನ್ನು ಓದುವುದು ಮತ್ತು ಪಳೆಯುಳಿಕೆಗಳ ಚಿತ್ರಗಳನ್ನು ನೋಡುವುದು ಅನಿವಾರ್ಯವಿರಬಹುದು. ಆದರೆ ವಸ್ತುಸಂಗ್ರಹಾಲಯಕ್ಕೆ ನೇರವಾಗಿ ಭೇಟಿ ನೀಡಿದಾಗ, ಇತಿಹಾಸದ ಕುರುಹುಗಳನ್ನು ಸಾಕ್ಷಾತ್ ಕಣ್ಣಾರೆ ನೋಡಿ ಮಾಹಿತಿ ಪಡೆದುಕೊಳ್ಳುವ ಅನುಭವವೇ ಬೇರೆಯಾಗಿರುತ್ತದೆ ಎಂದು ತಿಳಿಸಿದರು.

ಕೃಷಿ ಇಲಾಖೆಯ ನಿವೃತ್ತ ಅಧಿಕಾರಿ ಮಹಾಬಲೇಶ್ವರಪ್ಪ ಅವರು ಮಾತನಾಡಿ, ವಸ್ತುಸಂಗ್ರಹಾಲಯಗಳ ಮೂಲಕ ಸಾವಿರಾರು ವರ್ಷಗಳ ಹಿಂದಿನ ಮಾನವನ ಜನಜೀವನ ಮತ್ತು ಆಹಾರ ಪದ್ಧತಿಯ ಬಗ್ಗೆ ವಿವರವಾದ ಮಾಹಿತಿ ಪಡೆಯಬಹುದು. ನಮ್ಮ ಭಾಗದ ಊರುಗಳ ಹೆಸರುಗಳನ್ನು ಸೂಕ್ಷ್ಮವಾಗಿ ಅವಲೋಕಿಸಿದರೆ, ಅವು ಅಂದು ಬೆಳೆದ ದವಸ-ಧಾನ್ಯಗಳು ಹಾಗೂ ಸಗಣಿ ಸುಟ್ಟ ಬೂದಿಯ ದಿಬ್ಬಗಳ ಹಿನ್ನೆಲೆಯನ್ನು ಅವಲಂಬಿಸಿ ಇಟ್ಟಿರುವುದು ತಿಳಿಯುತ್ತದೆ ಎಂದು ವಿವರಿಸಿದರು.ರುಕ್ಮಿಣಿಯಮ್ಮ ಚೆಂಗರೆಡ್ಡಿ ಸ್ಮಾರಕ ಸರ್ಕಾರಿ ವಾಣಿಜ್ಯ ಹಾಗೂ ಮ್ಯಾನೇಜ್ಮೆಂಟ್ ಕಾಲೇಜಿನ ಉಪನ್ಯಾಸಕ ಒಬ್ಬಯ್ಯ ಅವರು ಮಾತನಾಡಿ, ಯುವಕರು ಮತ್ತು ವಿದ್ಯಾರ್ಥಿಗಳು ತಮ್ಮ ಬಿಡುವಿನ ವೇಳೆಯಲ್ಲಿ ತಮ್ಮ ಊರುಗಳ ಸುತ್ತಮುತ್ತ ಚಾರಣ ಕೈಗೊಂಡರೆ ಇತಿಹಾಸದ ಹೊಸ ಕುರುಹುಗಳನ್ನು ಪತ್ತೆಹಚ್ಚಲು ಸಾಧ್ಯವಾಗುತ್ತದೆ ಎಂದರು.ವಸ್ತುಸಂಗ್ರಹಾಲಯದ ತಾಂತ್ರಿಕ ಸಹಾಯಕಿ ಗೌರಿ ಅವರು ಮಾತನಾಡಿ, ಬಳ್ಳಾರಿಯಲ್ಲಿರುವ ಈ ವಸ್ತುಸಂಗ್ರಹಾಲಯವು ಇಡೀ ಭಾರತದಲ್ಲೇ ಪ್ರಾಗೈತಿಹಾಸಿಕ ಕಾಲಕ್ಕೆ ಮೀಸಲಿಟ್ಟ ಏಕೈಕ ವಿಶಿಷ್ಟ ವಸ್ತುಸಂಗ್ರಹಾಲಯವಾಗಿದೆ. ಇದು ಇತಿಹಾಸದ ಕುರಿತು ಹೆಚ್ಚಿನ ಸಂಶೋಧನೆ ಹಾಗೂ ಅಧ್ಯಯನ ಮಾಡಲು ವಿದ್ಯಾರ್ಥಿಗಳಿಗೆ ಉತ್ತಮ ಅವಕಾಶ ಕಲ್ಪಿಸಿಕೊಟ್ಟಿದೆ ಎಂದು ತಿಳಿಸಿದರು.

ಇದೇ ವೇಳೆ ಕಲ್ಬುರ್ಗಿಯ ಕೇಂದ್ರೀಯ ವಿಶ್ವವಿದ್ಯಾಲಯದ ಸಂಶೋಧನಾ ವಿದ್ಯಾರ್ಥಿನಿಯರಾದ ರೋಹಿಣಿ ಮತ್ತು ಅಶ್ವಿನಿ ಅವರು ಉನ್ನತ ಸಂಶೋಧನೆಗಳಲ್ಲಿ ವಸ್ತುಸಂಗ್ರಹಾಲಯಗಳ ಪಾತ್ರದ ಕುರಿತು ಬೆಳಕು ಚೆಲ್ಲಿದರು.ಕಾರ್ಯಕ್ರಮದಲ್ಲಿ ವಸ್ತುಸಂಗ್ರಹಾಲಯ ಸಮಿತಿ ಸದಸ್ಯ ಎಂ.ಅಹಿರಾಜ ಅವರು ಸ್ವಾಗತಿಸಿ, ಪ್ರಾಸ್ತಾವಿಕ ನುಡಿಗಳನ್ನಾಡಿದರು.

ಈ ವೇಳೆ ಶ್ರೀಮತಿ ಸರಳಾದೇವಿ ಸತೀಶ್ಚಂದ್ರ ಅಗರ್ವಾಲ್ ಸರ್ಕಾರಿ ಪ್ರಥಮ ದರ್ಜೆ ಕಾಲೇಜು ಹಾಗೂ ರುಕ್ಮಿಣಿಯಮ್ಮ ಚೆಂಗರೆಡ್ಡಿ ಸ್ಮಾರಕ ಕಾಲೇಜಿನ ಉಪನ್ಯಾಸಕರು ಮತ್ತು ನೂರಾರು ವಿದ್ಯಾರ್ಥಿಗಳು ಉಪಸ್ಥಿತರಿದ್ದರು.



ಚಿಟಗುಪ್ಪ: ಕರ್ನಾಟಕ ಪ್ರದೇಶ ಜನತಾದಳ (ಜಾತ್ಯತೀತ) ಪಕ್ಷದ ಹಿಂದುಳಿದ ವರ್ಗಗಳ ವಿಭಾಗದ ಅಧ್ಯಕ್ಷರಾಗಿ ಆಯ್ಕೆಯಾದ ಶಿವಕುಮಾರ ನಾಟೀಕಾರ ಅವರನ್ನು ಬುಧವಾರ ಬೆಂಗಳೂರಿನಲ್ಲಿ ಚಿಟಗುಪ್ಪ ತಾಲೂಕ ಟೋಕರಿ ಕೋಳಿ ಸಮಾಜದ ವತಿಯಿಂದ ಸನ್ಮಾನಿಸಿ ಶುಭ ಕೋರಿದರು. ಈ ಸಂದರ್ಭದಲ್ಲಿ ಟೋಕರಿ ಕೋಳಿ ಸಮಾಜದ ತಾಲುಕಾಧ್ಯಕ್ಷ ನರಸಪ್ಪ ನರನಾಳ, ಸಂಘಟನಾ ಕಾರ್ಯದರ್ಶಿ ಅಶೋಕ ಕಾಗೆ ಸೇರಿದಂತೆ ಇತರರು ಉಪಸ್ಥಿತರಿದ್ದರು.



ಭಾಲ್ಕಿ: ಡಿವೈಎಸ್ಪಿ ಕಚೇರಿಯಲ್ಲಿ ನೂತನ ಡಿವೈಎಸ್ಪಿ ಆಗಿ ಅಧಿಕಾರಿ ವಹಿಸಿಕೊಂಡಿರುವ ಬಾಲಪ್ಪ ಅವರನ್ನು ನಮ್ಮ ಕರ್ನಾಟಕ ಸೇನೆ ಜಿಲ್ಲಾ ಘಟಕದ ವತಿಯಿಂದ ಸನ್ಮಾನಿಸಲಾಯಿತು. ಸಂಘಟನೆಯ ಜಿಲ್ಲಾಧ್ಯಕ್ಷ ಗಣೇಶ ಪಾಟೀಲ್, ಯುವ ಘಟಕದ ಅಧ್ಯಕ್ಷ ಸುದೀಪ ತೂಗಾಂವೆ, ತಾಲೂಕು ಅಧ್ಯಕ್ಷ ಬಸವರಾಜ ಕಾರಬಾರಿ, ಉಪಾಧ್ಯಕ್ಷ ಜಗದೀಶ ಪಾಟೀಲ್, ಪ್ರಮುಖರಾದ ಮಹೇಶ ರಾಜಟ್ಟೆ, ಸಂಗಮೇಶ ಮಾರ್ಗೆ, ಮಹೇಶ ರಾಚೋಟೆ ಇದ್ದರು.

# ಬಳ್ಳಾರಿ ನಗರದಲ್ಲಿ ಪೆಟ್ರೋಲ್, ಡೀಸೆಲ್ ಕೊರತೆ ಇಲ್ಲ ಸುಳ್ಳು ಸುದ್ದಿಗಳಿಗೆ ಕಿವಿಗೊಡದಂತೆ ಇಲಾಖೆ ಮನವಿ

• ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ

ನಗರದ ಎಲ್ಲಾ ಪೆಟ್ರೋಲ್ ಬಂಕ್‌ಗಳಲ್ಲಿ ಸಾರ್ವಜನಿಕರ ಬಳಕೆಗೆ ಬೇಕಾಗುವಷ್ಟು ಅಗತ್ಯ ಇಂಧನ ದಾಸ್ತಾನು ಲಭ್ಯವಿದೆ. ನಗರದಲ್ಲಿ ಯಾವುದೇ ರೀತಿಯ ಪೆಟ್ರೋಲ್ ಅಥವಾ ಡೀಸೆಲ್ ಕೊರತೆ ಇರುವುದಿಲ್ಲ ಎಂದು ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಇಲಾಖೆಯ ಉಪನಿರ್ದೇಶಕ ದೇವರಾಜ ಅವರು ತಿಳಿಸಿದ್ದಾರೆ.

ಇತ್ತೀಚೆಗೆ ಬಳ್ಳಾರಿ ನಗರದ ಕೂಲ್ ಕಾರ್ನರ್ ಬಳಿ ಇರುವ ಪೆಟ್ರೋಲ್ ಬಂಕ್‌ನಲ್ಲಿ ಇಂಧನ ದಾಸ್ತಾನು ಇಲ್ಲ ಹಾಗೂ ಇಡೀ ನಗರಾದ್ಯಂತ ದಾಸ್ತಾನು ಕೊರತೆ ಎದುರಾಗಿದೆ ಎಂದು ಪತ್ರಿಕೆಗಳಲ್ಲಿ ವರದಿಯಾಗಿತ್ತು.

ಹಾಗಾಗಿ ಸಾರ್ವಜನಿಕರು ಹಾಗೂ ಗ್ರಾಹಕರು ಇಂಧನ ಕೊರತೆ ಕುರಿತಾದ ಯಾವುದೇ ರೀತಿಯ ಸುಳ್ಳು ಸುದ್ದಿ ಅಥವಾ ವದಂತಿಗಳಿಗೆ ಕಿವಿಗೊಡಬಾರದು ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಇಂಗಳೇಶ್ವರ ಅಕ್ಕನಾಗಮ್ಮ ಕೆರೆಯಲ್ಲಿ ರೋಜಗಾರ ದಿವಸ ಆಚರಣೆ



• ಮಲ್ಲಮ್ಮ ನುಡಿ ವಾರ್ತೆಬಸವನಬಾಗೇವಾಡಿ

ತಾಲೂಕಿನ ಇಂಗಳೇಶ್ವರ ಗ್ರಾಮ ಪಂಚಾಯಿತಿಯ ವ್ಯಾಪ್ತಿಯಲ್ಲಿ ಮನರೇಗಾ ಅಕ್ಕನಾಗಮ್ಮ ಅಮೃತ ಸರೋವರ ಕಾಮಗಾರಿಗೆ ತಾ ಪಂ ಇಓ ವೆಂಕಟೇಶ ವಂದಾಲ ಭೇಟಿ ನೀಡಿ ಕಾಮಗಾರಿ ಪರಿಶೀಲಿಸಿದರು.

ಕಾಮಗಾರಿ ಸ್ಥಳದಲ್ಲಿ ಕೆಲಸದಲ್ಲಿ ತೊಡಗಿ, ಕಾಮಗಾರಿಯ ಪರಿಶೀಲನೆ ಮಾಡಿದರು. ಯೋಜನೆಯ ಬಗ್ಗೆ ತಿಳಿಸುವುದರ ಮೂಲಕ ಕೂಲಿಕಾರರೊಂದಿಗೆ ಸಂವಾದ ನಡೆಸಿ, ಯೋಜನೆಯ ಮಹತ್ವ, ಹೆಚ್ಚಿನ ಸಂಖ್ಯೆಯಲ್ಲಿ ಕೂಲಿಕಾರರು ಕೆಲಸಕ್ಕೆ ಆಗಮಿಸುವಂತೆ ಪ್ರೇರೇಪಿಸಿ, ಕೆಲಸದ ಬೇಡಿಕೆ ಪಡೆದು ಉದ್ಯೋಗ ಒದಗಿಸುವ ಕಾರ್ಯವನ್ನು ಸಮರ್ಪಕವಾಗಿ ನಿರ್ವಹಿಸಬೇಕು ಹಾಗೂ ಯೋಜನೆಯ ಉದ್ದೇಶ, ಕೂಲಿಕಾರರ ಹಕ್ಕುಗಳು, ಸರ್ಕಾರದಿಂದ ದೊರೆಯುವ ಸೌಲಭ್ಯಗಳು ಹಾಗೂ ಕೆಲಸದ ಸ್ಥಳದಲ್ಲಿ ಪಾಲಿಸಬೇಕಾದ ನಿಯಮಗಳ ಕುರಿತು ಮಾಹಿತಿ ನೀಡಿದರು.

ಕೂಲಿಕಾರರ ಹಾಜರಾತಿ ದಾಖಲಾತಿಯನ್ನು ಸಮರ್ಪಕವಾಗಿ ನಿರ್ವಹಿಸುವಂತೆ ಅಧಿಕಾರಿಗಳಿಗೆ ಮತ್ತು ಕಾಯಕ ಬಂಧುಗಳಿಗೆ ಸೂಚಿಸಿದರು.

ಕೂಲಿಕಾರರಿಗೆ ಅಗತ್ಯವಾದ ಕುಡಿಯುವ ನೀರು, ನೆರಳು ಹಾಗೂ ಮೂಲಭೂತ ಸೌಲಭ್ಯಗಳನ್ನು ಸಮರ್ಪಕವಾಗಿ ಒದಗಿಸುವಂತೆ ಹಾಗೂ ಕಾಮಗಾರಿ ಗುಣಮಟ್ಟ ಕಾಪಾಡುವ ಜೊತೆಗೆ ಸಮಯಕ್ಕೆ ಸರಿಯಾಗಿ ಪೂರ್ಣಗೊಳಿಸುವಂತೆ ಅಧಿಕಾರಿಗಳಿಗೆ ಮಾರ್ಗದರ್ಶನ ನೀಡಿದರು. ತಮಗೆ ನೀಡಿರುವ ಕೆಲಸವನ್ನು ಜವಾಬ್ದಾರಿಯಿಂದ ನಿರ್ವಹಿಸಿ, ಬೆಳಗ್ಗೆ ಬೇಗ ಕೆಲಸಕ್ಕೆ ಹಾಜರಾಗಿ ಬಿಸಿಲಿನ ತಾಪ ಹೆಚ್ಚುವುದರೊಳಗೆ ಕೆಲಸ ಮುಗಿಸಿ ಎಂದು ಸಲಹೆ ನೀಡಿದರು.

# ಮೇ 28 ರಂದು ಅಂಚೆ ಜೀವ ವಿಮೆ ಏಜೆಂಟರ್ ನೇಮಕಾತಿಗಾಗಿ ನೇರ ಸಂದರ್ಶನ

• ಮಲ್ಲಮ್ಮ ನುಡಿ ವಾರ್ತೆ ಕಲಬುರಗಿ

ಮೇ.20-ಕಲಬುರಗಿ ವಿಭಾಗದ ಅಂಚೆ ಕಚೇರಿಯಿಂದ ಅಂಚೆ ಜೀವ ವಿಮೆ (ಪಿ.ಎಲ್.ಐ.) ಹಾಗೂ ಗ್ರಾಮೀಣ ಅಂಚೆ ಜೀವ ವಿಮೆ (ಆರ್.ಪಿ.ಎಲ್.ಐ.)

ಉತ್ಪನ್ನಗಳನ್ನು ಮಾರಾಟ ಮಾಡಲು ನೇರ ಪ್ರತಿನಿಧಿಗಳ (ಏಜೆ-ಂಟರ್) ನಿಯುಕ್ತಿಗಾಗಿ 2026ರ ಮೇ 28 ರಂದು ಬೆಳಿಗ್ಗೆ 10 ಗಂಟೆಗೆ ಕಲಬುರಗಿ ಜವಳಿ ಕಾಂಪ್ಲೆಕ್ಸ್ ಎದುರುಗಡೆಯಿರುವ ಅಂಚೆ ಅಧೀಕ್ಷಕರ ಕಚೇರಿಯಲ್ಲಿ ನೇರ ಸಂದರ್ಶನವನ್ನು ಹಮ್ಮಿಕೊಳ್ಳಲಾಗಿದೆ ಎಂದು ಕಲಬುರಗಿ ವಿಭಾಗದ ಅಂಚೆ ಅಧೀಕ್ಷಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಜೇವರ್ಗಿ, ಕಲಬುರಗಿ, ಕಮಲಾಪೂರ, ಆಳಂದ, ಕಾಳಗಿ, ಅಫಜಲಪುರ ಹಾಗೂ ಚಿಂಚೋಳಿ ತಾಲೂಕಿನ ವಯೋಮಿತಿ 18 ರಿಂದ 50 ವರ್ಷದೊಳಗಿನ ಅಭ್ಯರ್ಥಿಗಳು ನೇರ ಸಂದರ್ಶನದಲ್ಲಿ ಭಾಗವಹಿಸಬಹುದಾಗಿದೆ. ಅಭ್ಯರ್ಥಿಗಳು ಕನಿಷ್ಠ 10ನೇ ತರಗತಿ ಹಾಗೂ ತತ್ಸಮಾನ ಪರೀಕ್ಷೆಯಲ್ಲಿ ಉತ್ತೀರ್ಣರಾಗಿರಬೇಕು. ಕಲಬುರಗಿ ಜಿಲ್ಲೆಯ ವಾಸಸ್ಥಳ ಪ್ರಮಾಣಪತ್ರ ಹೊಂದಿರಬೇಕು. ಬೇರೆ ಯಾವುದೇ ವಿಮಾ ಸಂಸ್ಥೆ, ಕಂಪನಿ ಅಥವಾ ಸಂಘಗಳ ನೇರ ಪ್ರತಿನಿಧಿಯಾಗಿರಬಾರದು.

ಆಯ್ಕೆಯಾದ ನೇರ ಪ್ರತಿನಿಧಿಗಳಿಗೆ ಯಾವುದೇ ವೇತನ ಅಥವಾ ಭತ್ಯೆ ಇರುವುದಿಲ್ಲ.

ಜೀವ ವಿಮೆಗಳ ವ್ಯವಹಾರವನ್ನಾಧರಿಸಿ ಸೂಕ್ತ ಕಮಿಷನ್ ಕೊಡಲಾಗುತ್ತದೆ.

ಅಭ್ಯರ್ಥಿಗಳು ತಮ್ಮ ಜನ್ಮ ದಿನಾಂಕ ಪ್ರಮಾಣಪತ್ರ, ಶೈಕ್ಷಣಿಕ ಪ್ರಮಾಣಪತ್ರಗಳ ನಕಲು ಹಾಗೂ ಇತ್ತೀಚಿನ ಭಾವಚಿತ್ರದೊಂದಿಗೆ ಮೇಲ್ಕಂಡ ದಿನದಂದು ನಡೆಯುವ ನೇರ ಸಂದರ್ಶನದಲ್ಲಿ ಭಾಗವಹಿಸಬೇಕು.

ನೇರ ಸಂದರ್ಶನದಲ್ಲಿ ಆಯ್ಕೆಯಾದ ಅಭ್ಯರ್ಥಿಗಳು ರೂ. 5,000 ಎನ್.ಎಸ್.ಸಿ. ಅಥವಾ ಕೆ.ವಿ.ಪಿ. ಖರೀದಿಸಿ ಅಂಚೆ ಅಧೀಕ್ಷಕರು ಕಲಬುರಗಿ ವಿಭಾಗ ಇವರ ಹೆಸರಿನಲ್ಲಿ Pledge ಮಾಡಬೇಕು.

ಹೆಚ್ಚಿನ ಮಾಹಿತಿಗಾಗಿ ಹತ್ತಿರದ ಅಂಚೆ ಕಚೇರಿಯನ್ನು ಹಾಗೂ ದೂರವಾಣಿ ಸಂಖ್ಯೆ 08472-263800 ಹಾಗೂ ಮೊಬೈಲ್ ಸಂಖ್ಯೆ 7353351111 ಗಳಿಗೆ ಸಂಪರ್ಕಿಸಲು ಕೋರಲಾಗಿದೆ.

# ವಿಪ್ರ ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ



• **ಮಲ್ಲಮ್ಮ ನುಡಿ ವಾರ್ತೆ ಹುಣಸಗಿ**

ಪಟ್ಟಣದ ಮಧ್ವಭವನದಲ್ಲಿ ವರಹಳ್ಳೇರಾಯ ಸೇವಾ ಸಮಿತಿಯಿಂದ ತಾಲ್ಲೂಕಿನ ಎಸ್ಎಸ್ಎಲ್‌ಸಿ ಹಾಗೂ ಪಿಯುಸಿ ಪ್ರತಿಭಾವಂತ ವಿಪ್ರ ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ ನೀಡಿ ಗೌರವಿಸಲಾಯಿತು.

ಕಾರ್ಯಕ್ರಮದಲ್ಲಿ ಮಾತನಾಡಿದ ಕೂಡಲಗಿ ಶಾಂತಾನಂದ ಸರಸ್ವತಿ ಬಾಬಾ ಮಹಾರಾಜರ ಮಠದ ಗಜಾನನ ಮಹಾರಾಜ, ನಿರಂತರ ಅಭ್ಯಾಸ ಮತ್ತು ವಿಷಯ ಜ್ಞಾನದಲ್ಲಿ ಶ್ರದ್ಧೆ ಇದ್ದರೆ ಸಾಧನೆ ಸಾಧ್ಯವಾಗುತ್ತದೆ ಎಂದು ಹೇಳಿದರು. ವಿದ್ಯಾರ್ಥಿಗಳು ಉತ್ತಮ ಸಂಸ್ಕಾರ ಬೆಳೆಸಿಕೊಳ್ಳಬೇಕು ಹಾಗೂ ಗುರುಹಿರಿಯರ ಭಕ್ತಿ, ನಿತ್ಯ ಉಪಾಸನೆ ಜೀವನದಲ್ಲಿ ನೆಮ್ಮದಿ ತರುತ್ತದೆ ಎಂದು ತಿಳಿಸಿದರು.

ವಿಪ್ರ ಸಮಾಜದ ಹಿರಿಯ ಮನೋಹರರಾವ್ ದ್ಯಾಮನಾಳ ಮಾತನಾಡಿ, ಇಂದಿನ ಸ್ಪರ್ಧಾತ್ಮಕ ಯುಗದಲ್ಲಿ ಸಮಯದ ಸದ್ಬಳಕೆ ಅತ್ಯಂತ ಮುಖ್ಯ. ವಿದ್ಯಾರ್ಥಿಗಳು ತಂದೆತಾಯಿಗಳ ಗೌರವ ಉಳಿಸುವಂತೆ ನಡೆದುಕೊಳ್ಳಬೇಕು ಎಂದು ಸಲಹೆ ನೀಡಿದರು.

ಕಾರ್ಯಕ್ರಮದಲ್ಲಿ ಪಿಯುಸಿ 9 ಹಾಗೂ ಎಸ್ಎಸ್ಎಲ್‌ಸಿ 10 ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ ನೀಡಿ ಸನ್ಮಾನಿಸಲಾಯಿತು. ವೇದಿಕೆಯಲ್ಲಿ ರಾಘವೇಂದ್ರಾಚಾರ್ಯ ಮಾರಲಬಾವಿ, ಜಗನ್ನಾಥಾಚಾರ್ಯ ಕೊಡೇಕಲ್ಲ, ಟ್ರಸ್ಟ್ ಗೌರವಾಧ್ಯಕ್ಷ ರವೀಂದ್ರ ಜಮದರಖಾನ ಸೇರಿದಂತೆ ಹಲವು ಗಣ್ಯರು ಉಪಸ್ಥಿತರಿದ್ದರು.

ಪ್ರಾಸ್ತಾವಿಕವಾಗಿ ಗುರುರಾಜ ಜೋಶಿ ಮಾತನಾಡಿದರು. ಶಾಮಸುಂದರ ದೇಶಪಾಂಡೆ ಸ್ವಾಗತಿಸಿದರು. ಭೀಮಶೇನರಾವ್ ಕುಲಕರ್ಣಿ ನಿರೂಪಿಸಿ, ಪ್ರಾಣೇಶ ದೇಶಪಾಂಡೆ ವಂದಿಸಿದರು

# ಅರ್ಹ ಫಲಾನುಭವಿಗಳಿಗೆ ಗೃಹಲಕ್ಷ್ಮೀ ಹಣ ಬಿಡುಗಡೆ

• **ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ**

ಜಿಲ್ಲೆಯ 2,94,857 ಅರ್ಹ ಗೃಹಲಕ್ಷ್ಮಿ ಫಲಾನುಭವಿಗಳಿಗಾಗಿ ಕರ್ನಾಟಕ ಸರ್ಕಾರದಿಂದ ಮಾರ್ಚ್ ತಿಂಗಳ ಕಂತು ರೂ 58,97,14000 ಬಿಡುಗಡೆ ಆಗಿದ್ದು, ಖಜಾನೆಯಿಂದ ನೇರವಾಗಿ ಗೃಹಲಕ್ಷ್ಮಿಯರ ಖಾತೆಗೆ ಹಣ ಬಿಡುಗಡೆ ಪ್ರಾರಂಭವಾಗಿದ್ದು, ಪ್ರತಿದಿನ ಸುಮಾರು ಮೂವತ್ತು ಸಾವಿರ ಜನರಿಗೆ ಹಣ ತಲುಪಲಿದ್ದು 10 ದಿನಗಳ ಒಳಗಾಗಿ ಜಿಲ್ಲೆಯ ಎಲ್ಲಾ ಫಲಾನುಭವಿಗಳ ಖಾತೆಗೆ ರೂ 2000 ಹಣ ಜಮಾ ಆಗಲಿದೆ.

ಶೇಕಡಾ ನೂರರಷ್ಟು ಸಾಧನೆ ಮಾಡಲು ಬಳ್ಳಾರಿ ಜಿಲ್ಲಾ ಗ್ಯಾರಂಟಿ ಪ್ರಾಧಿಕಾರ ಮತ್ತು ಅಧಿಕಾರಿಗಳು ಶ್ರಮಿಸುತ್ತಿದ್ದು, 305732 ಒಟ್ಟು ಅರ್ಜಿದಾರರು ಪೈಕಿ 3921 ಆದಾಯ ಮತ್ತು ವಾಣಿಜ್ಯ ತೆರಿಗೆ ಪಾವತಿದಾರರಿದ್ದು ಅವರಿಗೆ ಗೃಹಲಕ್ಷ್ಮಿ ಹಣ ಕೊಡಲು ಸಾಧ್ಯವಿಲ್ಲ. 602 ಜನರು ಆದಾಯ ಮತ್ತು ವಾಣಿಜ್ಯ ತೆರಿಗೆ ಪಾವತಿದಾರರು ಅಲ್ಲವೆಂದು ನಾವು ಯಾವುದೇ ತೆರಿಗೆ ಪಾವತಿಸುತ್ತಿಲ್ಲವೆಂದು ಪ್ರಮಾಣ ಪತ್ರ ಸಲ್ಲಿಸಿದ್ದರೂ, ಅವುಗಳನ್ನು ರಾಜ್ಯದ ವಾಣಿಜ್ಯ ಮತ್ತು ಆದಾಯ ತೆರಿಗೆ ಇಲಾಖೆ ಬೆಂಗಳೂರು ಇವರಿಗೆ ಪರಿಶೀಲನೆಗೆ ಕಳಿಸಿದ್ದು, ಅವರು ಪ್ರಮಾಣ ಪತ್ರವನ್ನು ಪರಿಶೀಲಿಸಿ ರಾಜ್ಯದ ಗ್ಯಾರಂಟಿ ಪ್ರಾಧಿಕಾರಕ್ಕೆ ನಿರಪೇಕ್ಷಣ ಪತ್ರ ಸಲ್ಲಿಸಿರುವುದಿಲ್ಲ .

ಇವುಗಳು ಅಲ್ಲದೆ ಕೆಲವು ತಾಂತ್ರಿಕ ಕಾರಣಗಳಿಂದ ಹಾಗೂ ಮೃತರ ಕುಟುಂಬದ ವಾರಸುದಾರರು ಸೌಲಭ್ಯದಿಂದ ವಂಚಿತರಾಗಿದ್ದು,

ಈ ಅರ್ಜಿದಾರರು ಕೂಡ ಸೂಕ್ತ ದಾಖಲೆ ಒದಗಿಸಿದರೆ ಬಳ್ಳಾರಿ ಜಿಲ್ಲೆ ಗೃಹಲಕ್ಷ್ಮಿ ಪಾವತಿಯಲ್ಲಿ ಶೇಕಡ ನೂರರಷ್ಟು ಸಾಧನೆ ಮಾಡಲು ಸಹಾಯವಾಗುತ್ತದೆ ಎಂದು ಮನವಿ ಮಾಡಿಕೊಳ್ಳುತ್ತಿದ್ದೇನೆ.



ಸನ್ಮಾನ್ಯ ಸಿದ್ದರಾಮಯ್ಯನವರು ಮತ್ತು ಉಪಮುಖ್ಯಮಂತ್ರಿಗಳಾದ ಸನ್ಮಾನ್ಯ ಶ್ರೀ ಡಿಕೆ ಶಿವಕುಮಾರ್ ಅವರ ನೇತೃತ್ವದ ಕರ್ನಾಟಕ ಸರ್ಕಾರ ನುಡಿದಂತೆ ನಡೆವ ಸರ್ಕಾರ ಆಗಿದ್ದು, ಈಗ ಬಿಡುಗಡೆ ಆಗಿರುವ 30 ನೇ ಕಂತು ಫಲಾನುಭವಿಗಳ ಖಾತೆಗೆ ಜಮಾ ಆದ ನಂತರ. ಪ್ರತಿ ಫಲಾನುಭವಿ ಮಹಿಳೆಯರ ಖಾತೆಗೆ ನಮ್ಮ ಸರ್ಕಾರ ಮೂರು ವರ್ಷಗಳಲ್ಲಿ 30 ಕಂತುಗಳಲ್ಲಿ ಒಟ್ಟು ರೂ 60,000 ಗಳನ್ನು ತಲುಪಿಸಿದ ಹೆಮ್ಮೆ ರಾಜ್ಯ ಸರ್ಕಾರದ್ದು ಆಗಲಿದೆ. ವಿರೋಧ ಪಕ್ಷಗಳ ಟೀಕೆ, ವಿರೋಧ, ಅಸಹಕಾರದ ಮಧ್ಯೆಯೂ ರಾಜ್ಯದ ಅಭಿವೃದ್ಧಿ ಮತ್ತು ಗ್ಯಾರಂಟಿಗಳಿಗೆ ಹಣ ಒದಗಿಸಲಾಗಿದೆ.

ಬೆಲೆಏರಿಕೆಯಿಂದ ತತ್ತರಿಸಿರುವ ಕುಟುಂಬಗಳ, ಅಗತ್ಯ ವಸ್ತುಗಳ ಖರೀದಿಗೆ, ಮಕ್ಕಳ ವಿದ್ಯಾಭ್ಯಾಸ, ಆರೋಗ್ಯ, ಸಣ್ಣ ವ್ಯಾಪಾರಕ್ಕೆ ಈ ಹಣವು ಸಹಾಯವಾಗಿದೆ ಎಂದು ಜಿಲ್ಲೆಯ ಎಲ್ಲಾ ಫಲಾನುಭವಿ ಮಹಿಳೆಯರು ರಾಜ್ಯ ಸರ್ಕಾರಕ್ಕೆ, ಮುಖ್ಯಮಂತ್ರಿಗಳಿಗೆ ಉಪಮುಖ್ಯಮಂತ್ರಿಗಳಿಗೆ ಸಚಿವರು ಮತ್ತು ಶಾಸಕರಿಗೆ ಧನ್ಯವಾದಗಳು ಹೇಳುತ್ತಿರುವುದು ನನ್ನ ಗಮನಕ್ಕೆ ಬಂದಿದೆ. ಆದ್ದರಿಂದ ಅವರೆಲ್ಲರ ಪರವಾಗಿ ನಾನು ಕೂಡ ಅವರಿಗೆ ರಾಜ್ಯ ಸರ್ಕಾರಕ್ಕೆ ಶಾಸಕರಿಗೆ ಧನ್ಯವಾದಗಳು ಸಲ್ಲಿಸುತ್ತಿದ್ದೇನೆ ಎಂದು ಕೆ.ಇ.ಚಿದಾನಂದಪ್ಪ, ಅಧ್ಯಕ್ಷರು, ಬಳ್ಳಾರಿ ಜಿಲ್ಲಾ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರ ತಿಳಿಸಿದ್ದಾರೆ.

# ಅಂಕೋಲಾದ ಕರಿಇಶಾಡ ಮಾವಿನ ಹಣ್ಣಿಗೆ ಹೆಚ್ಚಿದ ಬೇಡಿಕೆ

ನಾಗರಾಜ ಮಂಜಗುಣಿ

• **ಮಲ್ಲಮ್ಮ ನುಡಿ ವಾರ್ತೆ ಅಂಕೋಲಾ**



ಅಂಕೋಲಾದ ಕರಿ ಇಷಾಡ ಮಾವಿನಹಣ್ಣು ಕರ್ನಾಟಕದ ಕರಾವಳಿ ಭಾಗದ ಅತ್ಯಂತ ರುಚಿಕರ ಮತ್ತು ಅಪರೂಪದ ಮಾವಿನ ತಳಿಗಳಲ್ಲಿ ಒಂದಾಗಿದೆ. ಇದು ಮುಖ್ಯವಾಗಿ ಉತ್ತರ ಕನ್ನಡ ಜಿಲ್ಲೆಯ ಅಂಕೋಲಾಕ್ಕೆ ಸೀಮಿತವಾಗಿದೆ. ಅಂಕೋಲಾದ ಮಣ್ಣಿನ ಗುಣಗಳಿಂದಾಗಿಯೇ ಇಲ್ಲಿ ಹೆಚ್ಚಿನ ಪ್ರಮಾಣದಲ್ಲಿ ಬೆಳೆಯುತ್ತವೆ. ಬ್ರಿಟಿಷರ ಆಡಳಿತದ ಕಾಲದಲ್ಲಿ ದೊಡ್ಡ ಮಾರುಕಟ್ಟೆಗೆ ತೆರಳುತ್ತಿತ್ತು. ಆದರೆ ಈಗ ಹುಬ್ಬಳ್ಳಿ ಸೇರಿದಂತೆ ವಿವಿಧ ಭಾಗಗಳಲ್ಲಿ ಪ್ರಮುಖ ಬೇಡಿಕೆಗಳಿವೆ.

ಜಿಐ ಟ್ಯಾಗ್: ಅಂಕೋಲಾದ ಕರಿ ಇಷಾಡ ಮಾವು 2023ರಲ್ಲಿ ಪ್ರತಿಷ್ಠಿತ ಭೌಗೋಳಿಕ ಗುರುತು ಮಾನ್ಯತೆಯನ್ನು ಪಡೆದಿದೆ. ರುಚಿ ಮತ್ತು ಸುವಾಸನೆ, ಈ ಮಾವಿನಹಣ್ಣಿನ ವಿಶೇಷ ಗುಣವಾಗಿದೆ. ದಪ್ಪನೆಯ ತಿರುಳು ಮತ್ತು ಅತ್ಯಂತ ರುಚಿಕರವಾದ ಸಿಹಿಗೆ ಹೆಸರುವಾಸಿಯಾಗಿದೆ.

ಬೆಳೆಯುವ ಪ್ರದೇಶ: ಅಂಕೋಲಾದ ನಂತರ ಸಣ್ಣ ಪ್ರಮಾಣದಲ್ಲಿ ಕಾರವಾರ ಮತ್ತು ಕುಮಟಾದ ಕೆಲವು ಭಾಗಗಳಲ್ಲಿ ಕರಿಇಶಾಡ ಮಾವಿನಹಣ್ಣು ಬೆಳೆಯಲಾಗುತ್ತದೆ. ಹಾಲಕ್ಕಿ ಸಮುದಾಯದವರು ಈ ಹಣ್ಣನ್ನು ಸಾಂಪ್ರದಾಯಿಕವಾಗಿ ಬೆಳೆಯುತ್ತಾರೆ. ಬಣ್ಣ ಮತ್ತು ಗಾತ್ರ ಹಣ್ಣು ಬಲಿತಾಗ ಕಡು ಹಸಿರು ಅಥವಾ ಕಪ್ಪು ಮಿಶ್ರಿತ ಹಸಿರು ಬಣ್ಣದಲ್ಲಿರುತ್ತದೆ, ಗಾತ್ರದಲ್ಲಿ ಮಧ್ಯಮದಿಂದ ದೊಡ್ಡದಾಗಿರುತ್ತದೆ. ಈ ಕರಿಇಶಾಡ ಮಾವಿನಹಣ್ಣು ಮೇ-ಜೂನ್ ನಲ್ಲಿ ಹೆಚ್ಚಿನ ಪ್ರಮಾಣದಲ್ಲಿ ದೊರೆಯುತ್ತದೆ.

ತಾಲೂಕಿನ ಸುಮಾರು 537 ಎಕರೆ ಪ್ರದೇಶದಲ್ಲಿ ಮಾವು ಬೆಳೆಯಲಾಗುತ್ತಿದೆ. ಇದರಿಂದಾಗಿ ಪ್ರತಿ ವರ್ಷ ಸುಮಾರು 2 ಕೋಟಿ 93 ಲಕ್ಷ ರೂಪಾಯಿಗಳ ಆದಾಯವನ್ನು ಮಾವು ಬೆಳೆಗಾರರು ಪಡೆದುಕೊಳ್ಳುತ್ತಿದ್ದಾರೆ. ಆದರೆ ಕೆಲವೊಮ್ಮೆ ವಾತಾವರಣಗಳ ಬದಲಾವಣೆಯಿಂದಾಗಿ ನಿರೀಕ್ಷಿತ ಆದಾಯವನ್ನು ಪಡೆದುಕೊಳ್ಳಲು ಸಾಧ್ಯವಾಗುತ್ತಿಲ್ಲ.

ಮಾರುಕಟ್ಟೆ : ಇಲ್ಲಿ ಬೆಳೆದ ಮಾವನ್ನು ಬಿದಿರಿನ ಬುಟ್ಟಿಯಲ್ಲಿ ತುಂಬಿ ಅದನ್ನು ಗೋವಾ ಮತ್ತು ಹುಬ್ಬಳ್ಳಿ ಮಾರುಕಟ್ಟೆಗೆ ಸಾಗಿಸಲಾಗುತ್ತದೆ. ಬೆಳೆಗಾರರಿಂದ ನೇರವಾಗಿಯೇ ಏಜೆಂಟರು ಖರೀದಿಸಿ ಅದನ್ನು ಬೇರೆ ಬೇರೆ ಸ್ಥಳಗಳಲ್ಲಿ ಮಾರುಕಟ್ಟೆಗೆ ಸ್ಥಳಾಂತರಿಸಲಾಗುತ್ತಿದೆ. ಹೀಗಾಗಿ ಬೆಳೆಗಾರರಿಗೂ ಕೂಡ ಇದು ಅನುಕೂಲ. ಆದರೆ ಈ ವರ್ಷ ಮೋಡ ಮುಸುಕಿದ ವಾತಾವರಣ ಮತ್ತು ವಿಪರೀತ ಬಿಸಿಲಿನಿಂದಾಗಿ ಬಹುತೇಕ ಮಾವಿನ ಬೆಳೆಯು ನೆಲಕಚ್ಚಿದಂತಾಗಿದೆ. ದರ : ಅಂಕೋಲಾ ಮಾರುಕಟ್ಟೆಯಲ್ಲಿ ಈಗ ಒಂದು ಡಜನ್ ಮಾವಿನ ಹಣ್ಣಿಗೆ 400 ರಿಂದ 300 ರವರೆಗೆ ದರವಿದೆ. ಆದರೂ ಕೂಡ ಮಾವು ಪ್ರಿಯರು ಇದನ್ನು ಖರೀದಿಸುತ್ತಾರೆ. ಕೆಲವು ಹಾಲಕ್ಕಿ ಮಹಿಳೆಯರು ಸ್ಥಳೀಯ ಬೆಳೆಗಾರರಿಂದ ಮಾವು ಖರೀದಿಸಿ ಪಟ್ಟಣದ ಮಾರುಕಟ್ಟೆಯಲ್ಲಿ ಹೆಚ್ಚಿನ ಬೆಲೆ ಮಾರುತ್ತಾರೆ. ಕಳೆದ ನಾಲ್ಕು ವರ್ಷಗಳಿಂದ ಬೆಳೆಗಾರರ ಸಮಿತಿಯ ಪ್ರಮುಖರಾದ ನಾಗರಾಜ ನಾಯಕ ಅವರು ಮಾವು ಮೇಳವನ್ನು ಹಮ್ಮಿಕೊಳ್ಳುತ್ತ ಬಂದಿದ್ದಾರೆ. ಇದ-ರಿಂದಾಗಿ ಮಾವು ಮೇಳದಲ್ಲಿ ಅಂಕೋಲಾದಲ್ಲಿ ಬೆಳೆದ ವಿವಿಧ ಪ್ರಬೇಧದ ಮಾವುಗಳು ಕೂಡ ಆಗಮಿಸುತ್ತವೆ. ಏನೆ ಆಗಲಿ ಅಂಕೋಲಾ ಕರಿ ಇಶಾಡ ಮಾವಿನಹಣ್ಣಿಗೆ ಬಾರಿ ಡಿಮಾಂಡ್ ಇದ್ದು, ತನ್ನ ಘನತೆಯನ್ನು ಟ್ಯಾಗ್ ಮೂಲಕ ಇನ್ನಷ್ಟು ಇಮ್ಮಡಿಗೊಳಿಸಿಕೊಂಡಿದೆ.

> ಕರಿಇಶಾಡ ಮಾವಿನ ಬೆಳೆ ನಮಗೆ ವರದಾನವಾಗಿದೆ. ಆದರೆ ಕೆಲವು ವರ್ಷಗಳಲ್ಲಿ ಲಾಭದ ಪ್ರಮಾಣವು ತಗ್ಗುತ್ತಿದೆ. ಹವಾಮಾನ ವೈಪರಿತ್ಯದಿಂದಾಗಿ ಮಾವಿನ ಬೆಳೆಯು ನಿರ್ಧಾರವಾಗುತ್ತದೆ. ಈ ವರ್ಷ ಕರಿಇಶಾಡ ಮಾವಿನಹಣ್ಣು ತಾಲೂಕಿನಲ್ಲಿ ಸ್ವಲ್ಪ ಕಡಿಮೆ ಇಳುವರಿ ಬಂದಿದೆ.
>
> **ಸೋಮು ಗೌಡ**
> **ಮಾವು ಬೆಳೆಗಾರ, ಹೊಸಗದ್ದೆ**

# ಇಂಧನ ಉಳಿತಾಯ:ಪ್ರಧಾನಿ ಜನಪ್ರತಿನಿಧಿಗಳಿಗೆ ಅರಿವು ಮೂಡಿಸಲಿ



ಮೊಹಮ್ಮದ್ ರಫೀಕ್

• **ಮಲ್ಲಮ್ಮ ನುಡಿ ವಾರ್ತೆ ಹುಣಸೂರು**

:ಇಂಧನ ಬಳಕೆ ಕಡಿಮೆ ಮಾಡುವುದು ಸೇರಿದಂತೆ ಮಿತವ್ಯಯದ ವಿವಿಧ ಕ್ರಮಗಳನ್ನು ಪಾಲಿಸುವಂತೆ ಪ್ರಧಾನಿ ನರೇಂದ್ರ ಮೋದಿಯವರು ದೇಶವಾಸಿಗಳಿಗೆ ಕರೆ ನೀಡಿದ ಕೆಲವೇ ದಿನಗಳಲ್ಲಿ ಪೆಟ್ರೋಲ್ ಡೀಸೆಲ್ ಮತ್ತು ಸಿಎನ್‌ಜಿ ಬೆಲೆ ಹೆಚ್ಚಿಸಲಾಗಿದೆ. ಇಂಧನ ಉಳಿಸಲು ರಾಜಕೀಯ ಪಕ್ಷಕ್ಕೊಂದು ನ್ಯಾಯ, ಜನಸಾಮಾನ್ಯರಿಗೆ ಒಂದು ನ್ಯಾಯ ವಿಧಿಸಿರುವ ಪ್ರಧಾನಿ ನರೇಂದ್ರ ಮೋದಿ: ಸತ್ಯಪ್ಪ ವಿಷಾದ*ವ್ಯಕ್ತಪಡಿಸಿದ್ದಾರೆ

ನಂತರ ಪತ್ರಿಕ ಹೇಳಿಕೆ ಮಾತನಾಡಿ ವಿವಿಧ ಪಕ್ಷಗಳ ಜನಪ್ರತಿನಿಧಿಗಳು ಸಾರ್ವಜನಿಕ ಸಭೆಯ ಸಮಾರಂಭಗಳನ್ನು ಏರ್ಪಡಿಸುವುದು ಎಂದರೆ ಸಾವಿರಾರು ವಾಹನಗಳನ್ನು ಸಹ ಬಳಸಿಕೊಳ್ಳುತ್ತಾರೆ. ಈ ವಾಹನಗಳಿಗೆ ಡೀಸೆಲ್ ಪೆಟ್ರೋಲ್ ಉಪಯೋಗಿಸುವ ಮೂಲಕ ದುಂದು ವೆಚ್ಚ ಮಾಡುತ್ತಿದ್ದಾರೆ. ಬಿಜೆಪಿ ಸರ್ಕಾರದ ಪ್ರಧಾನ ಮಂತ್ರಿಗಳು ಅಂಗ ಪಕ್ಷವಾದ ಜೆಡಿಎಸ್ ಇರಬಹುದು ರಾಜ್ಯ ಕಾಂಗ್ರೆಸ್ಸಾಗಲಿ ಇನ್ನಿತರ ಯಾವುದೇ ಪಕ್ಷಗಳ ಸಭೆ ಸಮಾರಂಭಗಳಿಗೆ ಲಕ್ಷಾಂತರ ಲೀಟರ್ ಡೀಸೆಲ್ ಪೆಟ್ರೋಲ್ ಬಳಸುವ ಮೂಲಕ ದುಂದು ವೆಚ್ಚ ಮಾಡುತ್ತಿದ್ದಾರೆ.

ಪ್ರಧಾನಿಗಳು ಇಂಧನ ಉಳಿಸಲು ದೇಶಕ್ಕೆ ಕರೆ ನೀಡಿರುವುದು ಸ್ವಾಗತಾರ್ಹ. ಆದರೆ ಜನಪ್ರತಿನಿಧಿಗಳಿಗೆ ಈ ಬಗ್ಗೆ ಅರಿವು ಮೂಡಿಸುವ ಕಾರ್ಯವನ್ನು ಪ್ರಧಾನಿಗಳು ಮಾಡಬೇಕು.

ದುರ್ದೈವದ ಸಂಗತಿ ಎಂದರೆ ಎಲ್ಲಾ ಪಕ್ಷಗಳ ಫ್ಲೆಕ್ಸ್‌ಗಳು, ಎಲ್ಲಾ ಪಕ್ಷಗಳ ಮುಖಂಡರುಗಳು ಫ್ಲೆಕ್ಸ್‌ಗಳನ್ನು ಹಾಕುವ ಮೂಲಕ ವೆಚ್ಚ ಮಾಡುತ್ತಾರೆ. ಅದೇ ಹಣವನ್ನು ಬಡಜನರ ಅನುಕೂಲತೆಗೆ, ಅಂಗವಿಕಲರು ವೃದ್ಧರು ವಿಧವೆಯರು ಹಾಗೂ ರೋಗಿಗಳಿಗೆ ಸಹಾಯ ಮಾಡಿದರೆ ಅನುಕೂಲವಾಗುತ್ತದೆ. ಫ್ಲೆಕ್ಸ್ ಹಾಕಿ ಒಂದೆರಡು ದಿನಗಳ ನಂತರ ಸಾರ್ವಜನಿಕರಿಗೆ ಕಿರಿಕಿರಿ ಉಂಟು ಮಾಡುವ ಮೂಲಕ ಹಾಗೂ ಸರ್ಕಾರಿ ಬೊಕ್ಕಸಕ್ಕೂ ಇದು ನಷ್ಟ ಉಂಟು ಮಾಡುತ್ತಿರುವುದರಿಂದ ಜನಪ್ರತಿನಿಧಿಗಳು ಫ್ಲೆಕ್ಸ್ ಹಾಕುವ ಬದಲಾಗಿ ಬಡ ಜನರಿಗೆ ಅವಶ್ಯಕತೆ ಸವಲತ್ತುಗಳನ್ನು ಅವರಿರುವಲ್ಲಿಗೆ ತಲುಪಿಸುವುದು, ವಿದ್ಯಾರ್ಥಿ ವಿದ್ಯಾರ್ಥಿನಿಯರಿಗೆ, ಶಾಲೆಗಳಿಗೆ ವಿದ್ಯಾಭ್ಯಾಸಕ್ಕೆ ಅನುಕೂಲವಾಗುವ ಆಗುವಂತಹ ಸಾಮಗ್ರಿಗಳ ವಿತರಣೆ ಮಾಡುವ ಮೂಲಕ ಕೈಜೋಡಿಸಬಹುದು. ಈ ಸಂಕಷ್ಟದ ಕಾಲದಲ್ಲಿ ರೈತರು ಸಹ ಅತಿ ಹೆಚ್ಚಿನ ಸಮಸ್ಯೆಗಳನ್ನು ಎದುರಿಸುತ್ತಿದ್ದು ಇಲಾಖೆಗಳಿಂದ ವಿತರಿಸಲಾಗುವ ಕೃಷಿ ಪಂಪುಸೆಟ್ಗಳನ್ನು ಸಕಾಲಕ್ಕೆ ವಿತರಿಸುವಂತಹ ಆಗಬೇಕು.

ಯುದ್ಧವು ತಕ್ಷಣಕ್ಕೆ ಕೊನೆಗೊಂಡರು ಜಾಗತಿಕ ಮಟ್ಟದಲ್ಲಿ ಕಚ್ಚಾ ತೈಲ ಪೂರೈಕೆ ವ್ಯವಸ್ಥೆಯು ಮುಂದಿನ ಕೆಲವು ತಿಂಗಳುಗಳವರೆಗೆ ಹತ್ತಿರವಾಗಿರುವ ಸಾಧ್ಯತೆ ಇದೆ. ಹೀಗಾಗಿ ಇಂಧನ ಬೆಲೆಯೂ ಈ ವರ್ಷದುದ್ದಕ್ಕೂ ಹೆಚ್ಚಿನ ಮಟ್ಟದಲ್ಲಿ ಉಳಿಯಬಹುದು. ಇಂಧನ ಬೆಲೆ ಏರಿಕೆಯ ಪರಿಣಾಮವು ದೇಶದ ಅರ್ಥ ವ್ಯವಸ್ಥೆಯ ಎಲ್ಲಾ ಕ್ಷೇತ್ರಗಳಲ್ಲೂ ಪ್ರಭಾವ ಬೀರಲಿದೆ.

ಈ ನಿಟ್ಟಿನಲ್ಲಿ ಪ್ರಧಾನ ಮಂತ್ರಿಗಳು ಈಗಾಗಲೇ ಕರೆ ನೀಡಿರುವ ಕೋವಿಡ್ ಸಂದರ್ಭದಲ್ಲಿ ಇದ್ದಂತೆ ಜನರು ಆದಷ್ಟು ಓಡಾಟವನ್ನು ಕಡಿಮೆಗೊಳಿಸಿ ಇಂಧನ ದುಂದು ವೆಚ್ಚಕ್ಕೆ ಕಡಿವಾಣ ಹಾಕಬೇಕು ಹಾಗೂ ಮತ್ತಿತರೆ 9 ಅಂಶಗಳನ್ನು ಪಾಲಿಸುವಂತೆ ದೇಶವಾಸಿಗಳಿಗೆ ಕರೆ ನೀಡಿದ್ದಾರೆ.

ಆದರೆ ಕೆಲವೊಂದು ಕಡೆ ಈಗಾಗಲೇ ಚುನಾವಣಾ ಪ್ರಚಾರದ ಕಾವು ಏರುತ್ತಿದ್ದು ಅನಗತ್ಯ ಚುನಾವಣಾ ಪ್ರಚಾರದ ಸಭೆ ಸಮಾರಂಭಗಳನ್ನು ಮಾಡುವುದು ಈ ಸಭೆಗಳಿಗೆ ಜನರನ್ನು ಕರೆತರುವುದು, ಇವರನ್ನು ಕರೆ ತಂದ ವಾಹನಗಳಿಗೆ ಅನಗತ್ಯವಾಗಿ ಇಂಧನಗಳನ್ನು ತುಂಬಿಸುವುದು ಇದೆಲ್ಲವೂ ದುಂದು ವೆಚ್ಚವೇ ಆಗಿದೆ.

ಪ್ರಧಾನಮಂತ್ರಿಗಳು ದೇಶದ ಬಗ್ಗೆ ಸ್ಪಷ್ಟ ಕಾಳಜಿ ಹೊಂದಿದ್ದಲ್ಲಿ ಜನಸಾಮಾನ್ಯರಿಗೆ ಒಂದು ನ್ಯಾಯ, ಜನಪ್ರತಿನಿಧಿಗಳಿಗೆ ಒಂದು ನ್ಯಾಯ ಎಂಬ ನಿಟ್ಟಿನಲ್ಲಿ ನಡೆದುಕೊಳ್ಳದೆ ಬಿಜೆಪಿ ಜೆಡಿಎಸ್ ಕಾಂಗ್ರೆಸ್ ಮತ್ತಿತರೆ ಯಾವುದೇ ಪಕ್ಷಗಳ ಚುನಾವಣಾ ಪೂರ್ವಭಾವಿ ಸಭೆ ಸಮಾರಂಭಗಳನ್ನು ಆಯೋಜಿಸಿ ಜನರನ್ನು ಕರೆತರುವ ಕ್ರಮಕ್ಕೆ ಕಡಿವಾಣ ಹಾಕಲು ಆದೇಶ ನೀಡಬೇಕು.

ಈ ರೀತಿ ಮಾಡಿದಾಗ ಮಾತ್ರವೇ ದೇಶದ ಆರ್ಥಿಕ ಸಬಲತೆಗೆ ಒಂದಿಷ್ಟು ಸಹಾಯ ಮಾಡಿದಂತಾಗುವುದು. ಈ ನಿಟ್ಟಿನಲ್ಲಿ ಪ್ರಧಾನಮಂತ್ರಿಗಳು ಆಯಾಯ ರಾಜ್ಯಗಳಿಗೆ ನಿರ್ದೇಶನ ನೀಡುವ ಮೂಲಕ ಕ್ರಮ ಕೈಗೊಳ್ಳಬೇಕೆಂದು ಮಾಧ್ಯಮದ ಮುಖಾಂತರ ಒತ್ತಾಯಿಸಿದರು.

# ಕಲೆಯೇ ನಮ್ಮ ಸಂಸ್ಕೃತಿಯ ಕನ್ನಡಿಯಾಗಿದೆ -ಡಾ. ಜಗನ್ನಾಥ್ ಹೆಬ್ಬಾಳೆ

• **ಮಲ್ಲಮ್ಮ ನುಡಿ ವಾರ್ತೆ ಬೀದರ**





ಮೇ 20:– ಜಾನಪದ ಸಂಗೀತವು ಸಮಾಜದ ಬದುಕಿನ ಪ್ರತಿಬಿಂಬವಾಗಿದ್ದು, ನಮ್ಮ ಸಂಸ್ಕೃತಿ, ಪರಂಪರೆ ಹಾಗೂ ಗ್ರಾಮೀಣ ಜೀವನದ ನೈಜ ಚಿತ್ರಣವನ್ನು ಜನತೆಗೆ ಪರಿಚಯಿಸುವ ಶಕ್ತಿಯುತ ಮಾಧ್ಯಮವಾಗಿದೆ ಕರ್ನಾಟಕ ಸಾಹಿತ್ಯ ಸಂಘದ ಅಧ್ಯಕ್ಷರಾದ ಡಾ.ಜಗನ್ನಾಥ್ ಹೆಬ್ಬಾಳೆ ಅವರು ಹೇಳಿದರು.

ಸೋಮವಾರ ಬೆಳಿಗ್ಗೆ ಬೀದರ್ ನಗರದ ಸರಸ್ವತಿ ಶಾಲೆ ಹತ್ತಿರದಲ್ಲಿರುವ ಸವಿತಾ ಸಮುದಾಯ ಭವನದಲ್ಲಿ ನಡೆದ ಜೈ ಭವಾನಿ ರಂಗಭೂಮಿ ಕಲಾವಿದರ ಸಂಘ(ರಿ) ಚಿಟ್ಟಾ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಬೆಂಗಳೂರು ಇವರ ಸಂಯುಕ್ತಾಶ್ರದಲ್ಲಿ 2025-26ನೇ ಸಾಲಿನ ಸಂಘ ಸಂಸ್ಥೆಗಳ ಧನ ಸಹಾಯದ ವಿಶೇಷ ಘಟಕಯೋಜನೆಯಡಿಯಲ್ಲಿ ಹಮ್ಮಿಕೊಂಡಿದ್ದ "ಜಿಲ್ಲಾ ಮಟ್ಟದ ರಂಗಭೂಮಿ ಕಲಾವಿದರ ಸಾಹಿತ್ಯ ಸಾಂಸ್ಕೃತಿಕ ಜಾನಪದ ಸಂಭ್ರಮ" ಕಾರ್ಯಕ್ರಮವು ಡೊಳ್ಳು ಬಾರಿಸುವ ಮೂಲಕ ಉದ್ಘಾಟಿಸಿ ಮಾತನಾಡಿದರು.

ಮುಂದುವರೆದು ಮಾತನಾಡುತ್ತಾ, ಕಲಾವಿದರು ವೇದಿಕೆಗೆ ಬಂದಾಗ ತಮ್ಮ ಕಲಾತಂಡದ ಉಡುಪುಗಳನ್ನು ಆಕರ್ಷಕವಾಗಿ ಹಾಗೂ ಸಂಪ್ರದಾಯಬದ್ಧವಾಗಿ ಧರಿಸಬೇಕು, ಕಲಾವಿದರೊಳಗಿನ ಭಿನ್ನಾಭಿಪ್ರಾಯ, ಟೀಕೆ ಟಿಪ್ಪಣಿಗಳನ್ನು ಬಿಟ್ಟು ಎಲ್ಲರೂ ಒಗ್ಗಟ್ಟಿನಿಂದ ಸಾಗಬೇಕೆಂದು ಸಲಹೆ ನೀಡಿದರು.

ನಮ್ಮೊಳಗಿನ ಏಕತೆಯೇ ಕಲೆಯನ್ನು ಉಳಿಸುವ ದೊಡ್ಡ ಶಕ್ತಿ. ಪರಸ್ಪರ ಪ್ರೋತ್ಸಾಹ ನೀಡಿದಾಗ ಮಾತ್ರ ಜಾನಪದ ಕಲೆಗಳು ಇನ್ನಷ್ಟು ಬೆಳೆಯುತ್ತವೆ ಎಂದು ಹೇಳಿದರು.

ಕರ್ನಾಟಕ ಗಡಿ ಪ್ರದೇಶ ಅಭಿವೃದ್ಧಿ ಪ್ರಾಧಿಕಾರದ ಸದಸ್ಯರಾದ ಡಾ.ಸಂಜೀವಕುಮಾರ್ ಅತಿವಾಳೆ ಅವರು ಮಾತನಾಡಿ, ಗಡಿ ಜಿಲ್ಲೆ ಬೀದರನಲ್ಲಿ ವೈವಿಧ್ಯಮಯ ಕಲೆ, ಸಂಸ್ಕೃತಿ ಹಾಗೂ ಪ್ರತಿಭಾವಂತ ಕಲಾವಿದರ ತಾಣವಾಗಿದ್ದು, ಇಲ್ಲಿ ಅನೇಕ ರೀತಿಯ ಜಾನಪದ, ಸಾಂಸ್ಕೃತಿಕ ಹಾಗೂ ಪರಂಪರೆಯ ಕಲೆಯನ್ನು ಉಳಿಸಿಕೊಂಡು ಬಂದಿರುವ ಕಲಾವಿದರು ಇದ್ದಾರೆ ಎಂದು ಅವರು ಹೇಳಿದರು,

ಕಲಾವಿದರಿಗೆ ಲಭಿಸಿರುವ ಪ್ರಶಸ್ತಿಗಳು, ಸನ್ಮಾನಗಳು, ಭಾಗವಹಿಸಿದ ಕಾರ್ಯಕ್ರಮಗಳ ವಿವರಗಳು ಹಾಗೂ ಪ್ರಮಾಣ ಪತ್ರಗಳನ್ನು ಸರಿಯಾದ ರೀತಿಯಲ್ಲಿ ದಾಖಲಾತಿ ಮಾಡಿಕೊಳ್ಳುವುದು ಅತ್ಯಂತ ಮುಖ್ಯವಾಗಿದೆ ಎಂದು ತಿಳಿಸಿದರು. ಇಂತಹ ದಾಖಲೆಗಳು ಮುಂದಿನ ದಿನಗಳಲ್ಲಿ ಕಲಾವಿದರಿಗೆ ಸರ್ಕಾರದಿಂದ ದೊರೆಯುವ ಮಾಶಾಸನ, ಸೌಲಭ್ಯಗಳು ಹಾಗೂ ವಿವಿಧ ಯೋಜನೆಗಳ ಪ್ರಯೋಜನ ಪಡೆಯಲು ತುಂಬಾ ಅನುಕೂಲವಾಗುತ್ತವೆ ಎಂದು ಅಭಿಪ್ರಾಯ ಪಟ್ಟರು.

ಹಿರಿಯ ಸಾಹಿತಿ ಎಂ.ಜಿ.ದೇಶಪಾಂಡೆ, ಎಂ.ಎಸ್.ಮನೋಹರ್, ಶಂಭುಲಿಂಗ್ ವಾಲ್ದೊಡ್ಡಿ, ನಾಗರಾಜ್ ಕರ್ಪೂರ್ ಇತರರು ಮಾತನಾಡಿದರು, ಜೈ ಭವಾನಿ ರಂಗಭೂಮಿ ಕಲಾವಿದರ ಸಂಘದ ಅಧ್ಯಕ್ಷರಾದ ಶೇಷಪ್ಪಾ ಚಿಟ್ಟಾ ಅವರು ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡಿದರು. ಯುವ ಮುಖಂಡರ ಶೇಕ್ ಖಾಲೇದ್, ಇತರರು ವೇದಿಕೆ ಮೇಲಿದ್ದರು. ಪ್ರಾರಂಭದಲ್ಲಿ ಸಾಹಿತಿ ಸುಬ್ಬಣ್ಣ ಕರಕನಳ್ಳಿ ಸ್ವಾಗತಿಸಿದರು, ಸುನೀತಾ ಬಿಕ್ಲೆ ನಿರೂಪಿಸಿ, ದೇವಿದಾಸ್ ಚಿಮಕೋಡ ವಂದಿಸಿದರು. ಭಾಗವಹಿಸಿದ ಕಲಾತಂಡಗಳು ಕು. ಶ್ರೇಯಾ ಸುನೀಲ ತಂಡದಿಂದ ನಾಡಗೀತೆ, ಶ್ರೀಮತಿ ಅರ್ಚನಾ ಸಂತೋಷ ಸ್ವಾಮಿ ತಂಡದಿಂದ ಭಕ್ತಿ ಗೀತೆ, ಶ್ರೀಮತಿ ಶಾರದಾಬಾಯಿ ತಂಡದಿಂದ ಲಮಾಣಿ ನೃತ್ಯ, ಶ್ರೀಮತಿ ಚಿನ್ನಮ್ಮ ಲಾಧಾ ತಂಡದಿಂದ ಮಹಿಳಾ ಡೊಳ್ಳು ಕುಣಿತ, ಶ್ರೀಮತಿ ಜಗದೇವಿ ತಂಡದಿಂದ ಪರಶುರಾಮ ನಾಟಕ, ಶ್ರೀಮತಿ ಜೂಲಿ ತಂಡದಿಂದ ಜಾನಪದ ಗೀತೆ, ಉಮೇಶ ತಂಡದಿಂದ ಹಲಗಿ ನೃತ್ಯ, ಶ್ರೀಮತಿ ಲಕ್ಷ್ಮಿ ತಂಡದಿಂದ ಶ್ರೀಮತಿ ಮಾರ್ತಾ ನಾಗೇಶ ಕನ್ನಡ ಗೀತೆ, ಅಫ್ರಾಜ್ ಶೇರಿಕಾರ್ ತಂಡದಿಂದ ರಂಗಗೀತೆ, ಮಾರುತಿ ಅಲ್ಲಾಪೂರೆ ತಂಡದಿಂದ ಮೊಹರಂ ಪದ, ರಾಚಯ್ಯಾ ಸ್ವಾಮಿ ತಂಡದಿಂದ ಏಕಭಿನಯ ಪಾತ್ರ, ಮಾಡಿ ನೋಡುಗರ ಕಣ್ಮನ ಸೆಳೆದವು. ಅದೇ ಸಂದರ್ಭದಲ್ಲಿ ಕಲಾವಿದರಾದ ಸುನೀಲ್ ಕಡ್ಡೆ, ಸಿದ್ದಲಿಂಗ, ಯಲ್ಲಾಲಿಂಗ, ಹಿರಿಯರು, ಮಹಿಳೆಯರು, ಮಕ್ಕಳು ಉಪಸ್ಥಿತರಿದ್ದರು,

# ಔಷಧಿ ಅಂಗಡಿಗಳು ಬಂದ್ ಮಾಡಿ ಪ್ರತಿಭಟನೆ

• **ಮಲ್ಲಮ್ಮ ನುಡಿ ವಾರ್ತೆ ಕಲಬುರಗಿ**

ಮೇ.20– ದೇಶಾದ್ಯಂತ ಅಕ್ರಮ ಹಾಗೂ ಅನಿಯಂತ್ರಿತ ಆನ್‌ಲೈನ್ ಔಷಧಿ ಮಾರಾಟವನ್ನು ಖಂಡಿಸಿ ಅಖಿಲ ಭಾರತ ಔಷಧ ವ್ಯಾಪಾರಿ ಮತ್ತು

ಔಷಧ ವ್ಯಾಪಾರಿಗಳ ಸಂಘಟನೆ ಕರೆ ನೀಡಿದ ರಾಷ್ಟ್ರವ್ಯಾಪಿ ಒಂದು ದಿನದ ಮುಷ್ಕರಕ್ಕೆ ಬೆಂಬಲ ಸೂಚಿಸಿ, ಜಿಲ್ಲೆಯ ಔಷಧ ವ್ಯಾಪಾರಿಗಳು ಬುಧವಾರ ತಮ್ಮ ಮೆಡಿಕಲ್ ಅಂಗಡಿಗಳನ್ನು ಬಂದ್ ಮಾಡಿ ಜಿಲ್ಲಾಧಿಕಾರಿಗಳ ಕಚೇರಿಯವರೆಗೆ ಮೆರವಣಿಗೆ ಮಾಡಿದರು.


**CHANGE OF NAME**

**I PREMKUMAR (OLD NAME)** R/o Handikera tq:Humnabad -585330. Have changedmynameas**PREMKUMARVEERANNA MORE S/o VEERANNA (NEW NAME)** R/o Handikera tq:Humnabad Dist:Bidar-585330 sworn Before affidavit

**patil Prabhushetty**
**notary Humnabad govt of Karnataka.**


# ಜನರ ಸಮಸ್ಯೆ ಕೇಳಲು 'ವಾರದ ದಿನ' ಮೀಸಲು :ಎಂಎಲ್ಸಿ ಭೀಮರಾವ ಪಾಟೀಲ್

• **ಮಲ್ಲಮ್ಮ ನುಡಿ ವಾರ್ತೆ ಔರಾದ**



ತಾಲೂಕಿನ ಜನರ ಸಮಸ್ಯೆಗಳನ್ನು ಸ್ಥಳದಲ್ಲಿಯೇ ಆಲಿಸಿ ತ್ವರಿತವಾಗಿ ಬಗೆಹರಿಸುವ ಉದ್ದೇಶದಿಂದ ಪ್ರತಿ ವಾರ ಒಂದು ದಿನ ಔರಾದ್ ಕಚೇರಿಯಲ್ಲಿಯೇ ಉಳಿದು ಸಾರ್ವಜನಿಕರೊಂದಿಗೆ ನೇರ ಸಂಪರ್ಕ ಸಾಧಿಸುವುದಾಗಿ ವಿಧಾನ ಪರಿಷತ್ ಸದಸ್ಯ ಭೀಮರಾವ ಪಾಟೀಲ್ ತಿಳಿಸಿದ್ದಾರೆ. ಪಟ್ಟಣದಲ್ಲಿ ಸಾರ್ವಜನಿಕರ ಕುಂದುಕೊರತೆಗಳನ್ನು ಪರಿಹರಿಸಲು ತೆರೆಯಲಾದ ತಮ್ಮ ಕಚೇರಿಯನ್ನು ಉದ್ಘಾಟಿಸಿ ಮಾತನಾಡಿದ ಅವರು, ಔರಾದ್‌ನಲ್ಲಿ ಕಚೇರಿ ನೀಡುವಂತೆ ಹಲವು ಬಾರಿ ಮನವಿ ಮಾಡಿದರೂ ವಿಳಂಬವಾಗಿತ್ತು. ಬಳಿಕ ಈ ವಿಷಯವನ್ನು ಸರ್ಕಾರದ ಗಮನಕ್ಕೆ ತರಲಾಗಿದ್ದು, ಸರ್ಕಾರದ ಆದೇಶದ ಮೇರೆಗೆ ಇದೀಗ ಕಚೇರಿ ದೊರೆತಿದೆ ಎಂದು ತಿಳಿಸಿದರು."ಇಲ್ಲಿನ ಜನರ ಧ್ವನಿಯಾಗಿ ಕಾರ್ಯನಿರ್ವಹಿಸುತ್ತೇನೆ. ಸಾರ್ವಜನಿಕರ ಸಮಸ್ಯೆಗಳಿಗೆ ಸ್ಪಂದಿಸುವುದು ನನ್ನ ಪ್ರಥಮ ಆದ್ಯತೆ," ಎಂದು ಹೇಳಿದರು. ಕಾಂಗ್ರೆಸ್ ಸರ್ಕಾರದ ವಿವಿಧ ಯೋಜನೆಗಳನ್ನು ಬಡವರ ಮನೆಬಾಗಿಲಿಗೆ ತಲುಪಿಸುವ ಜವಾಬ್ದಾರಿ ಕಾರ್ಯಕರ್ತರ ಮೇಲಿದೆ. ಈ ಯೋಜನೆಗಳ ಬಗ್ಗೆ ಜನರಲ್ಲಿ ಜಾಗೃತಿ ಮೂಡಿಸುವ ಕೆಲಸ ಕಾರ್ಯಕರ್ತರು ಮಾಡಬೇಕು ಎಂದು ಕರೆ ನೀಡಿದರು. ಕಾರ್ಯಕರ್ತರು ಯಾವುದೇ ರೀತಿಯ ಭಯವಿಲ್ಲದೆ ಜನರ ನಡುವೆ ಕೆಲಸ ಮಾಡಬೇಕು. ನಾನು ನಿಮ್ಮೊಂದಿಗೇ ಕ್ಷೇತ್ರದಲ್ಲಿ ಉಳಿದು ಸೇವೆ ಸಲ್ಲಿಸುತ್ತೇನೆ ಎಂದು ಭರವಸೆ ನೀಡಿದರು.

ಬಳಿಕ ಪಟ್ಟಣದ ಸಾರ್ವಜನಿಕ ಆಸ್ಪತ್ರೆಗೆ ಭೇಟಿ ನೀಡಿದ ಅವರು ರೋಗಿಗಳ ಸಮಸ್ಯೆಗಳನ್ನು ಆಲಿಸಿದರು. ವೈದ್ಯರಿಂದ ಆಸ್ಪತ್ರೆಯ ಮಾಹಿತಿ ಪಡೆದರು. ಈ ವೇಳೆ ಆಸ್ಪತ್ರೆಯಲ್ಲಿ ಔಷಧಿ ಕೊರತೆ ಕಂಡುಬಂದಿದ್ದು, ಡಿಎಚ್‌ಒ ಅವರಿಗೆ ದೂರವಾಣಿ ಮೂಲಕ ಸಂಪರ್ಕಿಸಿ ರೋಗಿಗಳಿಗೆ ಔಷಧಿ ಕೊರತೆಯಾಗದಂತೆ ಕ್ರಮ ಕೈಗೊಳ್ಳುವಂತೆ ಸೂಚಿಸಿದರು. ಇವಿಎಂ ಯಂತ್ರ ರದ್ದುಪಡಿಸುವಂತೆ ಆಗ್ರಹಿಸಿ ಉಪವಾಸ ಸತ್ಯಾಗ್ರಹ ನಡೆಸುತ್ತಿರುವ ಸಾಮಾಜಿಕ ಕಾರ್ಯಕರ್ತ ಗೋಪಾಲ್ ಸಿಂಗ್ ರಾಠೋಡ್ ಅವರ ಆರೋಗ್ಯದಲ್ಲಿ ಏರುಪೇರಾಗಿರುವ ಹಿನ್ನೆಲೆ ಆಡಳಿತ ಯಂತ್ರ ಎಚ್ಚೆತ್ತುಕೊಂಡಿದೆ. ವಿಷಯ ತಿಳಿದು ಸ್ಥಳಕ್ಕೆ ಭೇಟಿ ನೀಡಿದ ಜಿಲ್ಲಾ ಉಸ್ತುವಾರಿ ಸಚಿವ ಈಶ್ವರ ಖಂಡ್ರೆ ಅವರು, ಅವರ ಆರೋಗ್ಯ ಸ್ಥಿತಿಯನ್ನು ಪರಿಶೀಲಿಸಿ ಡಿಸಿ ಅವರ ಗಮನಕ್ಕೂ ತಂದಿರುವುದಾಗಿ ತಿಳಿಸಿದ್ದಾರೆ. ಜೊತೆಗೆ ಈ ವಿಷಯವನ್ನು ಸರಕಾರದ ಮಟ್ಟಕ್ಕೂ ತಲುಪಿಸಿರುವುದಾಗಿ ಹೇಳಿದರು. ಬಳಿಕ ಗೋಪಾಲ್ ಸಿಂಗ್ ರಾಠೋಡ್ ಅವರಿಗೆ ಮನವೊಲಿಸಿ ಜ್ಯೂಸ್ ಕುಡಿಸಿ ಉಪವಾಸ ಮುರಿಯುವಂತೆ ಮನವಿ ಮಾಡಿದರು.

ಈ ಸಂದರ್ಭದಲ್ಲಿ ಟಿಎಚ್‌ಒ ಅನಿಲಕುಮಾರ ಎಕಲಾರೆ, ಪ್ರಮುಖರಾದ ಬ್ಲಾಕ್ ಅಧ್ಯಕ್ಷ ರಾಜಕುಮಾರ ಹಲಬರ್ಗೆ, ಗ್ರಾಮೀಣ ಘಟಕದ ಅಧ್ಯಕ್ಷ ಆನಂದ ಚವ್ಹಾಣ, ರಾಮಣ್ಣ ವಡಿಯಾರ್, ಶಿವರಾಜ ದೇಶಮುಖ, ಸುಧಾಕಾರ ಕೊಳ್ಳುರ್, ರಮೇಶ ಪಾಟೀಲ್, ಚಂದ್ರಶೇಖರ ಪಾಟೀಲ್, ಶಿವಶಂಕರ ಎಕಲಾರೆ, ವಿದ್ಯಾಸಾಗರ ಬ್ಯಾಳೆ, ಮನೋಜ ಬಿರಾದಾರ್, ರಾಜಕುಮಾರ ಹೇಡೆ, ಚಂದು ಡಿಕೆ ರತ್ನದೀಪ ಕಸ್ತೂರೆ, ಸುನಿಲ ಮೀತ್ರಾ ಸೇರಿದಂತೆ ಅನೇಕರಿದ್ದರು.

# ಬಸವನಬಾಗೇವಾಡಿಯಲ್ಲಿ ಔಷಧ ಅಂಗಡಿಗಳ ಬಂದ್ ಯಶಸ್ವಿ

• ಮಲ್ಲಮ್ಮ ನುಡಿ ವಾರ್ತೆಬಸವನಬಾಗೇವಾಡಿ

ಇ– ಫಾರ್ಮಸಿಗಳು, ಆನ್‌ಲೈನ್ ಔಷಧ ಮಾರಾಟ ಹಾಗೂ ಅತಿಯಾದ ರಿಯಾಯಿತಿ ವಿರೋಧಿಸಿ ಎಐಒಸಿಡಿ ಪ್ರಕಾರ ದೇಶವ್ಯಾಪಿ 24 ಗಂಟೆಗಳ ಬಂದ್ ಹಿನ್ನಲೆಯಲ್ಲಿ ಪಟ್ಟಣದ ಎಲ್ಲಾ ಖಾಸಗಿ ಮೆಡಿಕಲ್ ಶಾಪ್‌ಗಳು ಬಂದ್ ಮಾಡಿದ ಮಾಲೀಕರು ಬುಧುವಾರ ಬೆಳಿಗ್ಗೆ ಬೆಂಬಲ ಸೂಚಿಸಿ ಪಿಎಂ ನರೇಂದ್ರ ಮೋದಿ ಅವರಿಗೆ ಆನ್‌ಲೈನ್‌ನಲ್ಲಿ ಔಷಧ ಮಾರಾಟಕ್ಕೆ ಕೇಂದ್ರ ಸರ್ಕಾರ ಅನುಮತಿ ಕೊಟ್ಟಿರುವುದನ್ನು ವಾಪಸ್ ಪಡೆಯಬೇಕು ಎಂದು ಒತ್ತಾಯಿಸಿ ಪಟ್ಟಣದ ಶ್ರೀ ಬಸವೇಶ್ವರ ವೃತ್ತದಲ್ಲಿ ತಾಲೂಕಾ ಔಷಧ ವ್ಯಾಪಾರಸ್ಥರ ಸಂಘದ ಸದಸ್ಯರು ಜಮಾಯಿಸಿ ಕೇಂದ್ರ ಸರಕಾರದ ವಿರುದ್ಧ ದಿಕ್ಕಾರ ಕೂಗಿ ಶಿರಸ್ತೆದಾರ್ ರಾಜು ಹಾದಿಮನಿ ಮೂಲಕ ಮನವಿ ಸಲ್ಲಿಸಿದರು. ಜಿಲ್ಲಾ ಔಷಧ ಮಾರಾಟಗಾರರ ಸಂಘದ ಜಿಲ್ಲಾಧ್ಯಕ್ಷ ರಮೇಶ ಯಳಮೇಲಿ ಮಾತನಾಡಿ, ಈ–ಫಾರ್ಮಸಿಗಳ ಮೂಲಕ ಔಷಧ ಮಾರಾಟ ಮಾಡುವುದು ಕಾನೂನಿನಲ್ಲಿ ಅವಕಾಶ ಇಲ್ಲ. ನಮಗೆ ಹೈಕೋರ್ಟ ಆದೇಶಗಳೂ ಇವೆ ಎಂದರು.



ಶ್ರೀಕಾಂತ ಕೊಟ್ರಶೆಟ್ಟಿ ಮಾತನಾಡಿ, ಕೋವಿಡ್–19 ಸಾಂಕ್ರಾಮಿಕ ಸಮಯದಲ್ಲಿ ಆನ್ ಲೈನ್ ಔಷಧ ವಿತರಣೆಗೆ ಸರ್ಕಾರ ನೀಡಿದ್ದ ತಾತ್ಕಾಲಿಕ ಸಡಿಲಿಕೆಗಳನ್ನು ಈಗಲೂ ಮುಂದುವರೆಸಲಾಗುತ್ತಿದ್ದು. ಆನ್‌ಲೈನ್ ಕಂಪನಿಗಳು ಇದರ ದುರುಪಯೋಗ ಮಾಡಿಕೊಳ್ಳುತ್ತಿವೆ ಎಂದರು.

**ಪಟ್ಟಣ ಸುತ್ತು ಹಾಕಿದ ಔಷಧ ವ್ಯಾಪಾರಸ್ಥರು**

**ಪಟ್ಟಣದ ಔಷಧ ವ್ಯಾಪಾರಸ್ಥರು ಶ್ರೀ ಬಸವೇಶ್ವರ ವೃತ್ತದಲ್ಲಿ ಪಿಎಂ ಅವರಿಗೆ ಕಂದಾಯ ಅಧಿಕಾರಿ ಮೂಲಕ ಮನವಿ ಅರ್ಪಿಸಿ ಪಟ್ಟಣದ ಸುತ್ತ ಕೇಂದ್ರ ಸರ್ಕಾರದ ವಿರುದ್ಧ ದಿಕ್ಕಾರ ಕೂಗುತ್ತಾ ಬಂದರು.**

ಜಿಲ್ಲಾ ಜಂಟಿ ಕಾರ್ಯದರ್ಶಿ ಶ್ರೀಕಾಂತ ಕೋರಿ ಮಾತನಾಡಿ, ದೊಡ್ಡ ಕಾರ್ಪೋರೇಟ್ ಆನ್‌ಲೈನ್ ಸಂಸ್ಥೆಗಳು ಶೇ.20ರಿಂದ 50 ರಷ್ಟು ಭಾರಿ ರಿಯಾಯಿತಿಗಳನ್ನು ನೀಡುತ್ತಿರುವುದರಿಂದ ಸಣ್ಣ ಮತ್ತು ಸ್ಥಳೀಯ ಮೆಡಿಕಲ್ ಸ್ಟೋರ್‌ಗಳ ವ್ಯವಹಾರಕ್ಕೆ ಭಾರಿ ಹೊಡೆತ ಬಿದ್ದಿದೆ ಎಂದರು.

ಪಿಕೆಪಿಎಸ್ ಅಧ್ಯಕ್ಷ ಸಂಗನಗೌಡ ಚಿಕ್ಕೊಂಡ ಮಾತನಾಡಿ, ಆನ್‌ಲೈನನಲ್ಲಿ ಮಾರಾಟಕ್ಕೆ ಅವಕಾಶ ನೀಡುವುದರಿಂದ ಮೆಡಿಕಲ್ ಶಾಪಗಳಲ್ಲಿ ವ್ಯಾಪಾರ ಕುಸಿದಿದೆ. ಬರುವ ದಿನಗಳಲ್ಲಿ ಸಾರ್ವಜನಿರೊಂದಿಗೆ ಹೋರಾಟಕ್ಕೆ ಮುಂದಾಗಲಾಗುವುದು ಎಂದು ಹೇಳಿದರು.

ಈ ಸಂದರ್ಭದಲ್ಲಿ ಔಷಧ ಮಾಲೀಕರಾದ ಮಲ್ಲಿಕಾರ್ಜುನ ಮಠ, ಮಹಾವೀರ ಹೊಸಮನಿ, ರುದ್ರಗೌಡ ಪಾಟೀಲ, ಅಶೋಕ ಮುಳವಾಡ, ಪ್ರಭು ಪಟ್ಟಣಶೆಟ್ಟಿ, ವಿದ್ಯಾಧರ ಉಪಾಧ್ಯೆ, ಸುರೇಶ ಗಬ್ಬೂರ, ನೀಲಕಂಠ ಬೇವನೂರ, ರಾಘವೇಂದ್ರ ಸೋಮನಕಟ್ಟಿ, ಎಸ್.ಎ ನದಾಫ್, ಶೇಖರ ಹೂಗಾರ, ಸಿದ್ದು ಬಿದರಿ, ಆನಂದ ಶಿರಸಂಗಿಮಠ, ಸಂಗನಗೌಡ ಹೊಸಗೌಡರ ಸೇರಿದಂತೆ ಪಟ್ಟಣದ ಹಾಗೂ ಸುತ್ತಲಿನ ಅನೇಕ ಮೆಡಿಕಲ್ ಶಾಪ್ ಮಾಲೀಕರು ಮುಷ್ಕರದಲ್ಲಿ ಭಾಗಿಯಾಗಿದ್ದರು.

# ಆರೋಗ್ಯವಂತ ಸಿಬ್ಬಂದಿಯಿಂದ ದಕ್ಷ ಆಡಳಿತ ಸೇವೆ ಸಾಧ್ಯ: ಜಿಲ್ಲಾಧಿಕಾರಿ ಕವಿತಾ ಎಸ್ ಮನ್ನಿಕೇರಿ

• ಮಲ್ಲಮ್ಮ ನುಡಿ ವಾರ್ತೆ ವಿಜಯನಗರ(ಹೊಸಪೇಟೆ)

ಮೇ 20:ಸಾರ್ವಜನಿಕ ಸೇವೆಯಲ್ಲಿ ನಿರಂತರವಾಗಿ ತೊಡಗಿಸಿಕೊಳ್ಳುವ ಅಧಿಕಾರಿಗಳು ಮತ್ತು ಸಿಬ್ಬಂದಿಗಳು ಇಂದಿನ ಒತ್ತಡದ ಬದುಕಿನಲ್ಲಿ ದೈಹಿಕ ಹಾಗೂ ಮಾನಸಿಕ ಆರೋಗ್ಯವನ್ನು ಕಾಪಾಡಿಕೊಂಡಾಗ ಮಾತ್ರ ಸಾರ್ವಜನಿಕರಿಗೆ ದಕ್ಷತೆಯಿಂದ ಸೇವೆ ನೀಡಲು ಸಾಧ್ಯ ಎಂದು ಜಿಲ್ಲಾಧಿಕಾರಿ ಕವಿತಾ ಎಸ್ ಮನ್ನಿಕೇರಿ ತಿಳಿಸಿದರು.



ನಗರದ ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಜಿಲ್ಲಾ ಅಂಧತ್ವ ನಿಯಂತ್ರಣ ಸಂಘ ಹಾಗೂ ರೋಟರಿ ಕ್ಲಬ್ ಆಫ್ ಹಂಪಿ ಪರ್ಲ್ಸ್ ಹೊಸಪೇಟೆ ಇವರ ಸಹಯೋಗದಲ್ಲಿ ಬುಧವಾರ ಜಿಲ್ಲಾಡಳಿತ ಮತ್ತು ಜಿಲ್ಲಾ ಪಂಚಾಯತ್‌ನ ಅಧಿಕಾರಿಗಳು ಹಾಗೂ ಸಿಬ್ಬಂದಿಗಳಿಗೆ ಹಮ್ಮಿಕೊಳ್ಳಲಾಗಿದ್ದ 'ಉಚಿತ ಆರೋಗ್ಯ ಮತ್ತು ಕಣ್ಣಿನ ತಪಾಸಣಾ ಶಿಬಿರಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು.

ಬೆಳಗ್ಗೆಯಿಂದ ಸಂಜೆಯವರೆಗೆ ಸಾರ್ವಜನಿಕರ ಅಹವಾಲು ಆಲಿಸುವುದು, ಕಡತಗಳ ವಿಲೇವಾರಿ ಹಾಗೂ ಸರ್ಕಾರದ ಯೋಜನೆಗಳ ಅನುಷ್ಠಾನದಂತಹ ದೈನಂದಿನ ಒತ್ತಡದ ಕೆಲಸದ ನಡುವೆ ನೌಕರರು ತಮ್ಮ ಆರೋಗ್ಯದ ಕಡೆಗೆ ಗಮನ ಹರಿಸುವುದನ್ನೇ ಮರೆತುಬಿಡುತ್ತಾರೆ. ಆದ್ದರಿಂದ ಆರೋಗ್ಯ ಕೈಕೊಟ್ಟಾಗ ಆಸ್ಪತ್ರೆಗೆ ಓಡುವುದಕ್ಕಿಂತ, ಮುಂಜಾಗ್ರತೆಯಾಗಿ ವರ್ಷಕ್ಕೊಮ್ಮೆಯಾದರೂ ಸಂಪೂರ್ಣ ಆರೋಗ್ಯ ತಪಾಸಣೆ ಮಾಡಿಸಿಕೊಳ್ಳುವುದು ಉತ್ತಮ. ಇಂತಹ ಉಚಿತ ಶಿಬಿರಗಳನ್ನು ಕೇವಲ ಔಪಚಾರಿಕ ಎನ್ನದೆ, ಪ್ರತಿಯೊಬ್ಬ ಮುಂಚೂಣಿ ಸಿಬ್ಬಂದಿಯೂ ಇದರ ಸದುಪಯೋಗ ಪಡಿಸಿಕೊಳ್ಳಬೇಕು ಎಂದು ಸಲಹೆ ನೀಡಿದ ಅವರು, ಜಿಲ್ಲಾಡಳಿತದ ಯಶಸ್ಸು ಸಿಬ್ಬಂದಿ ವರ್ಗದ ಕಾರ್ಯದಕ್ಷತೆಯ ಮೇಲೆ ನಿಂತಿರುತ್ತದೆ. ಸಿಬ್ಬಂದಿಗಳು ಆರೋಗ್ಯವಾಗಿದ್ದರೆ ಮಾತ್ರ ಜಿಲ್ಲೆಯ ಪ್ರಗತಿ ಸಾಧ್ಯ ಎಂದು ಆಶಯ ವ್ಯಕ್ತಪಡಿಸಿದರು.

ರೋಟರಿ ಕಣ್ಣಿನ ಆಸ್ಪತ್ರೆಯ ನುರಿತ ತಜ್ಞ ವೈದ್ಯರ ತಂಡವು ಅತ್ಯಾಧುನಿಕ ಡಿಜಿಟಲ್ ಉಪಕರಣಗಳ ಮೂಲಕ ಸಿಬ್ಬಂದಿಗಳ ಉಚಿತ ಕಣ್ಣಿನ ತಪಾಸಣೆ ಜೊತೆಗೆ ರಕ್ತದೊತ್ತಡ, ಮಧುಮೇಹ ಹಾಗೂ ಸಾಮಾನ್ಯ ದೈಹಿಕ ತಪಾಸಣೆ ನಡೆಸಲಾಯಿತು. ತಪಾಸಣೆಯ ನಂತರ ಅಗತ್ಯವಿದ್ದ ಸಿಬ್ಬಂದಿಗಳಿಗೆ ಸ್ಥಳದಲ್ಲೇ ಉಚಿತವಾಗಿ ಅಗತ್ಯ ಔಷಧಿ ಮತ್ತು ಮಾತ್ರೆಗಳನ್ನು ವಿತರಿಸಲಾಯಿತು.

ಸ್ವತಃ ಡಿಸಿ, ಸಿಇಓ ಆರೋಗ್ಯ ತಪಾಸಣೆ: ಇದೇ ಸಂದರ್ಭದಲ್ಲಿ ಜಿಲ್ಲಾಧಿಕಾರಿ ಕವಿತಾ ಎಸ್ ಮನ್ನಿಕೇರಿ ಹಾಗೂ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯ ನಿರ್ವಾಹಕಾಧಿಕಾರಿ ನೊಂಗ್ಜಾಯ್ ಮಹ್ಮದ್ ಅಲಿ ಅಕ್ರಮ್ ಷಾ ಅವರು ಸ್ವತಃ ಆರೋಗ್ಯ ಮತ್ತು ಕಣ್ಣಿನ ತಪಾಸಣೆಯಲ್ಲಿ ಭಾಗಿಯಾದರು. ಆರೋಗ್ಯ ತಪಾಸಣಾ ಶಿಬಿರದಲ್ಲಿ ರೋಟರಿ ಕ್ಲಬ್ ಆಫ್ ಹಂಪಿ ಪರ್ಲ್ಸ್ ನ ಅಧ್ಯಕ್ಷೆ ಅನ್ನಪೂರ್ಣ ಸದಾಶಿವ, ಕಾರ್ಯದರ್ಶಿ ದೀಪಾ ಅಗರ್ವಾಲ್ ಸೇರಿದಂತೆ ಇತರರು ಇದ್ದರು.

# ವಕೀಲ ವೃತ್ತಿ ಅತ್ಯಂತ ಪವಿತ್ರ




• ಮಲ್ಲಮ್ಮ ನುಡಿ ವಾರ್ತೆ ಭಾಲ್ಕಿ

ಮೇ.20:ವಕೀಲ ವೃತ್ತಿಯು ಅತ್ಯಂತ ಪವಿತ್ರ ಮತ್ತು ಜವಾಬ್ದಾರಿಯುತ ಕಾನೂನು ಸೇವೆಯಾಗಿದೆ ಎಂದು ಹಿರಿಯ ಶ್ರೇಣಿಯ ನ್ಯಾಯಾಧೀಶ ರಾಘವೇಂದ್ರ ವೈಜಿನಾಥ ಹೇಳಿದರು. ನಗರದ ವಕೀಲರ ಸಂಘದ ಸಭಾಂಗಣದಲ್ಲಿ ತಾಲೂಕು ವಕೀಲರ ಸಂಘದ ವತಿಯಿಂದ ಬುಧವಾರ ಆಯೋಜಿಸಿದ್ದ ಬೀಳ್ಕೊಡುಗೆ ಮತ್ತು ವಕೀಲರ ಪ್ರತಿಭಾವಂತ ಮಕ್ಕಳ ಪ್ರತಿಭಾ ಪುರಸ್ಕಾರ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು. ನ್ಯಾಯವಾದಿಗಳು ನೊಂದವರಿಗೆ ನ್ಯಾಯ ಒದಗಿಸುವ ಕೆಲಸ ಮಾಡಬೇಕು ಅಂದಾಗ ಜನರಿಗೆ ನ್ಯಾಯಾಂಗದ ಮೇಲೆ ಗೌರವ, ವಿಶ್ವಾಸರ್ಹತೆ ಮತ್ತಷ್ಟು ಹೆಚ್ಚಾಗುತ್ತದೆ. ಸುಮಾರು ಮೂರು ವರ್ಷಗಳ ಕಾಲ ಎಲ್ಲರ ಸಹಕಾರದೊಂದಿಗೆ ಉತ್ತಮ ಸೇವೆ ಸಲ್ಲಿಸುವ ಪ್ರಯತ್ನ ಮಾಡಿದ್ದೇನೆ. ಶೈಕ್ಷಣಿಕ ಕ್ಷೇತ್ರದಲ್ಲಿ ಸಾಧನೆಗೈದ ನ್ಯಾಯವಾದಿಗಳ ಮಕ್ಕಳನ್ನು ಗುರುತಿಸಿ, ಸನ್ಮಾನಿಸುತ್ತಿರುವುದು ಸಂತಸದ ಸಂಗತಿ. ಇದರಿಂದ ಮಕ್ಕಳು ಮತ್ತಷ್ಟು ಸಾಧನೆ ಮಾಡಲು ಪ್ರೇರಣೆ ಸಿಗುತ್ತದೆ ಎಂದು ತಿಳಿಸಿದರು.

ಅಧ್ಯಕ್ಷತೆ ವಹಿಸಿದ್ದ ತಾಲೂಕು ವಕೀಲರ ಸಂಘದ ಅಧ್ಯಕ್ಷ ಮಹೇಶ ರಾಚೋಟೆ ಮಾತನಾಡಿ, ಸ್ಥಳೀಯ ನ್ಯಾಯಾಲಯದಲ್ಲಿ ಹಿರಿಯ ಶ್ರೇಣಿ ನ್ಯಾಯಾಧೀಶ ರಾಘವೇಂದ್ರ ವೈಜಿನಾಥ ಅವರು ಮೂರು ವರ್ಷಗಳ ಕಾಲ ದಕ್ಷತೆ, ನಿಷ್ಪಕ್ಷಪಾತವಾಗಿ ಸೇವೆ ಸಲ್ಲಿಸಿದ್ದಾರೆ. ಕಿರಿಯ ನ್ಯಾಯವಾದಿಗಳಿಗೆ ಸದಾ ಮಾರ್ಗದರ್ಶನ ಮತ್ತು ಪ್ರೋತ್ಸಾಹ ನೀಡುವ ಕೆಲಸ ಮಾಡಿದ್ದಾರೆ. ಅವರ ಸೇವೆಯನ್ನು ಎಂದಿಗೂ ಮರೆಯುವುದಿಲ್ಲ ಎಂದ ತಿಳಿಸಿದರು. ಕಿರಿಯ ಶ್ರೇಣಿ ನ್ಯಾಯಾಧೀಶ ದೇಷಭೂಷಣ ಕೌಜಲಗಿ ಮಾತನಾಡಿದರು.

**ಪ್ರತಿಭಾವಂತ ಮಕ್ಕಳಿಗೆ ಸನ್ಮಾನ**

ಇದೇವೇಳೆ 2025–26ನೇ ಸಾಲಿನಲ್ಲಿ ಎಸ್ಸೆಸ್ಸೆಲ್ಸಿ, ಪಿಯುಸಿ, ನವೋದಯ ಮತ್ತು ಸೈನಿಕ ಶಾಲೆಗಳ ಪರೀಕ್ಷೆಯಲ್ಲಿ ಉತ್ತಮ ಸಾಧನೆಗೈದ ನ್ಯಾಯವಾದಿಗಳ ಸುಮಾರು 19 ಪ್ರತಿಭಾವಂತ ಮಕ್ಕಳನ್ನು ವಕೀಲರ ಸಂಘದ ವತಿಯಿಂದ ಸನ್ಮಾನಿಸಲಾಯಿತು. ಬಸವಪ್ರಣವ ಅಷ್ಟೂರೆ, ಸುಜಲ ಪಾಟೀಲ, ಸುಮೀತ ಪಾಟೀಲ, ಶ್ರೇಯಾ ಪಾಟೀಲ, ಕೃತಿ ತಿವಾರಿ, ಸಂಧ್ಯಾರಾಣಿ ತುಕದೆ, ವಿವೇಕಾನಂದ ನೆಲವಾಡೆ, ಜ್ಞಾನೇಶ್ವರಿ ಪರಶನೆ, ಅನುಷ್ಕ ಮಸ್ಕಲೆ, ಅನುಷ್ಕಾ ಬಿರಾದಾರ, ಆಶೀಶ ನೆಲವಡೆ, ರೋಹಿತ ಪುರಿ, ವಿಜಯಲಕ್ಷ್ಮಿ ಶೀರ್ಶೆ, ಎಲಿಜಬೆತ ರಾಣಿ ಶರ್ಮಾ, ಅಭಿಷೇಕ ಬಿರಾದಾರ, ಸೌರ್ಯ ಪಾಟೀಲ, ಫರಿಯಾ ನವಾಜ, ನೈತಿಕ ಸ್ವಾಮಿ ಮತ್ತು ಸ್ವರಾಜ ತುಕದೆ ಅವರನ್ನು ಸನ್ಮಾನಿಸಿ, ಗೌರವಿಸಲಾಯಿತು.

ಈ ಸಂದರ್ಭದಲ್ಲಿ ತಾಲೂಕು ವಕೀಲರ ಸಂಘದ ಜಂಟಿ ಕಾರ್ಯದರ್ಶಿ ನೀಲಕಂಠ ಬಿರಾದಾರ್ ಸೇರಿದಂತೆ ಹಲವರು ಇದ್ದರು.

ವಕೀಲರ ಸಂಘದ ಉಪಾಧ್ಯಕ್ಷ ಮಕರಂದ ಮಾನಕಾರಿ ಸ್ವಾಗತಿಸಿದರು. ದಯಾನಂದ ಪವಾರ ನಿರೂಪಿಸಿದರು. ಪ್ರಧಾನ ಕಾರ್ಯದರ್ಶಿ ವಾಗೇಶ ಪಾಟೀಲ್ ವಂದಿಸಿದರು.

# ಎಸ್ ಸಿ ಪಿ – ಟಿ ಎಸ್ ಪಿ ಯೋಜನೆಗಳು ಅರ್ಹ ಶೋಷಿತ ವರ್ಗದ ಫಲಾನುಭವಿಗಳಿಗೆ ತಲುಪಲಿ : ಡಾ. ಎಲ್. ಮೂರ್ತಿ

• ಮಲ್ಲಮ್ಮ ನುಡಿ ವಾರ್ತೆ ವಿಜಯನಗರ(ಹೊಸಪೇಟೆ)



ಮೇ 20:ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡ ಸಮುದಾಯಗಳ ಕಲ್ಯಾಣಕ್ಕಾಗಿ ಮೀಸಲಿಟ್ಟಿರುವ ಪರಿಶಿಷ್ಟ ಜಾತಿ ಉಪಯೋಜನೆ ಮತ್ತು ಗಿರಿಜನ ಉಪಯೋಜನೆ ಅನುದಾನ ಹಾಗೂ ಯೋಜನೆಗಳು ಯಾವುದೇ ಕಾರಣಕ್ಕೂ ದುರುಪಯೋಗವಾಗಬಾರದು. ಸಮುದಾಯದ ಅತ್ಯಂತ ಹಿಂದುಳಿದ, ಶೋಷಿತ ವರ್ಗದ ಕಟ್ಟಕಡೆಯ ಫಲಾನುಭವಿಗೆ ಈ ಸೌಲಭ್ಯಗಳು ತಲುಪುವಂತೆ ಅಧಿಕಾರಿಗಳು ಸಂಪೂರ್ಣ ಜವಾಬ್ದಾರಿಯಿಂದ ಶ್ರಮವಹಿಸಬೇಕು ಎಂದು ಅನುಸೂಚಿತ ಜಾತಿ ಮತ್ತು ಅನುಸೂಚಿತ ಬುಡಕಟ್ಟು ಆಯೋಗದ ಅಧ್ಯಕ್ಷ ಡಾ.ಎಲ್. ಮೂರ್ತಿ ಕಟ್ಟುನಿಟ್ಟಿನ ಸೂಚನೆ ನೀಡಿದರು. ನಗರದ ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ಮಂಗಳವಾರ ಇಲಾಖಾವಾರು ಅಧಿಕಾರಿಗಳೊಂದಿಗೆ ಪ್ರಗತಿ ಪರಿಶೀಲನಾ ಸಭೆ ನಡೆಸಿ ಅವರು ಮಾತನಾಡಿದರು.

ಎಸ್‌ಸಿ, ಎಸ್‌ಟಿ ಸಮುದಾಯಗಳ ಸಾಂವಿಧಾನಿಕ ಹಕ್ಕುಗಳಿಗೆ ಹಾಗೂ ಅವರಿಗೆ ಸಿಗಬೇಕಾದ ಕಾನೂನಾತ್ಮಕ ಸೌಲತ್ತುಗಳಿಗೆ ಧಕ್ಕೆ ತರುವದನ್ನು ಯಾವುದೇ ಕಾರಣಕ್ಕೂ ಸಹಿಸುವುದಿಲ್ಲ. ಯೋಜನೆಗಳ ಅನುಷ್ಠಾನದಲ್ಲಿ ವಿಳಂಬ ಧೋರಣೆ ಅನುಸರಿಸುವ ಅಥವಾ ನಿರ್ಲಕ್ಷ್ಯ ತೋರುವ ಅಧಿಕಾರಿಗಳ ವಿರುದ್ಧ ಕಠಿಣ ಕಾನೂನು ಕ್ರಮ ಕೈಗೊಳ್ಳಲಾಗುವುದು ಎಂದು ಎಚ್ಚರಿಸಿದರು. ಯೋಜನೆಗಳು ಕೇವಲ ಕಾಗದದ ಲೆಕ್ಕಗಳಿಗೆ ಸೀಮಿತವಾಗಬಾರದು. ಬದಲಾಗಿ ಅವು ಶೋಷಿತರ ಬದುಕಿನಲ್ಲಿ ಬೆಳಕಾಗಬೇಕು. ಈ ನಿಟ್ಟಿನಲ್ಲಿ ಮಧ್ಯವರ್ತಿಗಳ ಹಾವಳಿಯನ್ನು ತಪ್ಪಿಸಿ, ನಿಜವಾದ ಶೋಷಿತ ಹಾಗೂ ವಂಚಿತ ಸಮಾಜದ ಕಟ್ಟ ಕಡೆಯ ವ್ಯಕ್ತಿಗೂ ಯೋಜನೆಗಳ ತಲುಪಿಸುವಲ್ಲಿ ಶ್ರಮವಿಸಬೇಕು ಎಂದು ತಿಳಿಸಿದರು.

ಇಲಾಖೆಯ ಟೆಂಡರ್ ಪ್ರಕ್ರಿಯೆ ಅಥವಾ ಬೃಹತ್ ಯೋಜನೆಯಲ್ಲಿ ಕಾಮಗಾರಿ ಹಂಚಿಕೆ ಮಾಡಬೇಕಾದರೆ ಸ್ಥಳೀಯ ಶೋಷಿತ ವರ್ಗದ ಕಾರ್ಮಿಕರಿಗೆ ಪ್ರಥಮಾದ್ಯತೆ ನೀಡಬೇಕು. ಈ ಮೂಲಕ ಸಾಮಾಜಿಕ, ಆರ್ಥಿಕ ಮತ್ತು ಶಿಕ್ಷಣಿಕವಾಗಿ ಸಮಾಜದ ಮುನ್ನಲೆಗೆ ತರಬೇಕಿದೆ ಎಂದರು. ಇದಕ್ಕೆ ಪ್ರತಿಕ್ರಿಯಿಸಿದ ಲೋಕೋಪಯೋಗಿ ಇಲಾಖೆ ಅಧಿಕಾರಿಗಳು ಕೂಡ್ಲಿಗಿ ತಾಲೂಕಿನ ವ್ಯಾಪ್ತಿಗೆ ಒಳಪಡುವ ಗೋವಿಂದಗಿರಿ ತಾಂಡಾದ ಸಮಗ್ರ ನವೀಕರಣಕ್ಕಾಗಿ ಪ್ರಸಕ್ತ ಸಾಲಿನಲ್ಲಿ ವಿವಿಧ ಯೋಜನೆಗಳ ಅನುದಾನದಡಿ ಒಟ್ಟು 3.5 ಕೋಟಿ ರೂಪಾಯಿಗಳ ಬೃಹತ್ ಪ್ಯಾಕೇಜ್ ಮಂಜೂರಾಗಿದೆ. ಈ ಕಾಮಗಾರಿಯ ಇ–ಪ್ರೊಕ್ಯೂರ್‌ಮೆಂಟ್ ಹಾಗೂ ಟೆಂಡರ್ ಪ್ರಕ್ರಿಯೆ ಸಹ ಈಗಾಗಲೇ ಪೂರ್ಣಗೊಂಡಿದ್ದು, ರಾವತ್ ಎಂಬುವವರಿಗೆ ಗುತ್ತಿಗೆ ವಹಿಸಲಾಗಿದೆ ಎಂದು ಮಾಹಿತಿ ನೀಡಿದರು.

ವಿಂಡ್ ಮಿಲ್ ಅಕ್ರಮಕ್ಕೆ ಜಂಟಿ ಕಾರ್ಯಾಚರಣೆ: ಭೂಮಿ ಹಾಗೂ ಪಟ್ಟಾ ಭೂಮಿ ರಕ್ಷಣೆ ನಿಯಮಗಳ ಪ್ರಕಾರ ಜನವಸತಿ ಪ್ರದೇಶದಿಂದ ಕನಿಷ್ಠ 500 ಮೀಟರ್ ದೂರ ಇರಬೇಕಾದ ವಿಂಡ್ ಮಿಲ್‌ಗಳು ನಿಯಮಬಾಹಿರವಾಗಿ ಕೇವಲ 70 ರಿಂದ 100 ಮೀಟರ್ ಅಂತರದಲ್ಲಿ ನಿರ್ಮಾಣವಾಗಿವೆ. ವಿದ್ಯಾರ್ಥಿಗಳ ನೆಮ್ಮದಿ ಕೆಡಿಸುತ್ತಿರುವುದರ ಜೊತೆಗೆ ಅವರ ವಿದ್ಯಾಭಾಸಕ್ಕೆ ಕುತ್ತು ತರುತ್ತಿವೆ ಎಂದು ಆಯೋಗಕ್ಕೆ ದೂರು ಬಂದಿವೆ. ಸಂಬಂಧಪಟ್ಟ ಅಧಿಕಾರಿಗಳು ಸ್ಥಳ ಪರಿಶೀಲನೆ ನಡೆಸಿ ವರದಿ ನೀಡಲು ಸೂಚನೆ ನೀಡಿದರು. ಇದರೊಂದಿಗೆ ಎಸ್‌ಸಿ, ಎಸ್‌ಟಿ ಸಮುದಾಯದ ಸ್ವಂತ ಪಟ್ಟಾ ಜಮೀನು ಹಾಗೂ ಮಂಜೂರಾತಿ ಭೂಮಿಯನ್ನು ಬಲವಂತವಾಗಿ ಕಬಳಿಸುತ್ತಿರುವ ಬಗ್ಗೆಯೂ ಸಾಕಷ್ಟು ದೂರುಗಳು ಕೇಳಿಬರುತ್ತಿವೆ.

ಇಂತಹ ರಿಯಲ್ ಎಸ್ಟೇಟ್ ಮಾಫಿಯಾ ವಿರುದ್ಧ ದೌರ್ಜನ್ಯ ತಡೆ ಕಾಯ್ದೆಯಡಿ ಕ್ರಮ ಕೈಗೊಳ್ಳಲು ಸಂಬಂಧಪಟ್ಟ ಅಧಿಕಾರಿಗಳಿಗೆ ನಿರ್ದೇಶಿನ ನೀಡಿದರು.

ಹೊಸಪೇಟೆಯ 253 ಪೌರಕಾರ್ಮಿಕರಿಗೆ ಸಕಾಲದಲ್ಲಿ ವೇತನ ಪಾವತಿಸಲಾಗುತ್ತಿದೆ. ಇಎಸ್‌ಐ, ಪಿಎಫ್ ಹಾಗೂ ಗೃಹಭಾಗ್ಯ ಯೋಜನೆಯಡಿ 88 ಮನೆ ವಿತರಣೆ ಮಾಡಲಾಗಿದೆ. ಆದರೆ ಮರಿಯಮ್ಮನಹಳ್ಳಿಯಲ್ಲಿ ಪೌರಕಾರ್ಮಿಕರಿಗೆ 11 ತಿಂಗಳ ವೇತನ ಬಾಕಿ ಉಳಿಸಿಕೊಂಡಿದ್ದಕ್ಕೆ ಅಧಿಕಾರಿಗಳನ್ನು ತೀವ್ರವಾಗಿ ತರಾಟೆಗೆ ತೆಗೆದುಕೊಂಡ ಅವರು ತಕ್ಷಣ ವೇತನ ಬಿಡುಗಡೆಗೊಳಿಸಬೇಕು ಎಂದು ಕಡಕ್ ಸೂಚನೆ ನೀಡಿದರು.

ಜಿಲ್ಲೆಯ ಜಿಂದಾಲ್ ಸೇರಿ 4–5 ಪ್ರಮುಖ ಖಾಸಗಿ ಕಂಪನಿಗಳಲ್ಲಿ ಭೂಮಿ ಕಳೆದುಕೊಂಡ ಸ್ಥಳೀಯ ಶೋಷಿತ ವರ್ಗದ ಕನಿಷ್ಠ 200–300 ನಿರುದ್ಯೋಗಿ ಯುವಕ, ಯುವತಿಯರಿಗೆ ಉದ್ಯೋಗ ಕಲ್ಪಿಸಿಕೊಡುವ ವ್ಯವಸ್ಥೆ ಮಾಡಬೇಕು. ಅದಕ್ಕಾಗಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ ಜಂಟಿಯಾಗಿ ವಿಶೇಷ ಬೃಹತ್ ಉದ್ಯೋಗ ಮೇಳ ಆಯೋಜಿಸಲು ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ಪಂಚಾಯತ್ ಸಿಇಒ ಅವರಿಗೆ ಸೂಚನೆ ನೀಡಿದರು. ಅದಕ್ಕೆ ಅಧಿಕಾರಿಗಳು ಸಕರಾತ್ಮಕವಾಗಿ ಸ್ಪಂದಿಸಿದರು.

ಮೊರಾರ್ಜಿ ಮತ್ತು ಸರ್ಕಾರಿ ಹಾಸ್ಟೆಲ್‌ಗಳಿಗೆ ಬರುವ ವಿದ್ಯಾರ್ಥಿಗಳಿಗೆ ಪ್ರವೇಶಾವಕಾಶ ಕಲ್ಪಿಸಬೇಕು. ಸಣ್ಣ ಪುಟ್ಟ ಲೋಪದೋಷಗಳಿದ್ದಲ್ಲಿ ಸರಿಪಡಿಸಕೊಂಡು ವಸತಿ ಶಾಲೆ, ನಿಲಯಗಳ ಪ್ರವೇಶಕ್ಕೆ ಅನುವು ಮಾಡಿಕೊಡುವಂತೆ ತಿಳಿಸಿದರು,

ಸುಪ್ರೀಂ ಕೋರ್ಟ್ ಅಂತಿಮ ಆದೇಶ ಬರುವವರೆಗೆ ಅರಣ್ಯ ಪ್ರದೇಶಗಳಲ್ಲಿ ವಾಸಿಸುವ ಅಲೆಮಾರಿ, ಅರೆ ಅಲೆಮಾರಿ ಮತ್ತು ಎಸ್‌ಸಿ, ಎಸ್‌ಟಿ ಕುಟುಂಬಗಳನ್ನು ಒಕ್ಕಲೆಬ್ಬಿಸದಂತೆ ಅರಣ್ಯ ಸಂರಕ್ಷಣಾಧಿಕಾರಿಗಳಿಗೆ ತಿಳಿಸಿದ ಅವರು, ಸಮುದಾಯದ ಅಭಿವೃದ್ಧಿಯೇ ಆಯೋಗದ ಮುಖ್ಯ ಗುರಿಯಾಗಿದ್ದು, ಅಧಿಕಾರಿಗಳು ಕೇವಲ ಅಂಕಿ–ಅಂಶಗಳನ್ನು ನೀಡುವುದ ಬಿಟ್ಟು, ತಳಮಟ್ಟದಲ್ಲಿ ಬದಲಾವಣೆ ತರಲು ಪ್ರಾಮಾಣಿಕವಾಗಿ ಕೆಲಸ ನಿರ್ವಹಿಸಲು ಕಾರ್ಯಪ್ರವೃತ್ತರಾಗಬೇಕಿದೆ ಎಂದರು.

ಈ ವೇಳೆ ಜಿಲ್ಲಾಧಿಕಾರಿ ಕವಿತಾ ಎಸ್. ಮನ್ನಿಕೇರಿ ಪ್ರತಿಕ್ರಿಯಿಸಿ, ಆಯೋಗ ಸೂಚಿಸಲಾದ ಎಲ್ಲಾ ಕಾಮಗಾರಿ, ಕಲ್ಯಾಣ ಯೋಜನೆಗಳನ್ನು ಶೇ.100 ರಷ್ಟು ಅನುಷ್ಠಾನಗೊಳಿಸಲಾಗುವುದು ಮತ್ತು ಸಮಾಜದ ಕಟ್ಟ ಕಡೆಯ ವ್ಯಕ್ತಿಗೂ ಯೋಜನೆಗಳ ತಲುಪಿಸಲು ಪ್ರಾಮಾಣಿಕವಾಗಿ ಪ್ರಯತ್ನಿಸಲಾಗುವುದು ಎಂದು ಭರವಸೆ ನೀಡಿದರು.

ಸಭೆಯಲ್ಲಿ ಆಯೋಗದ ಕಾರ್ಯದರ್ಶಿ ಡಾ.ಹೆಚ್. ಎಸ್.ಶಿವರಾಮ್, ಸದಸ್ಯರಾ ಗೀತಾ ಥಾವಂಶಿ, ಎನ್.ದಿನಕರ್, ಸುನೀಲ್ ಎಂ ಉಕ್ಕಲಿ, ಜಿಲ್ಲಾಧಿಕಾರಿ ಕವಿತಾ ಎಸ್ ಮನ್ನಿಕೇರಿ, ಜಿಲ್ಲಾ ಪಂಚಾಯತ್ ಸಿ ಇ ಓ ನೊಂಗ್ಜಾಯ್ ಮಹ್ಮದ್ ಅಲಿ ಅಕ್ರಮ್ ಷಾ, ಅರಣ್ಯ ಇಲಾಖೆ ಉಪ ಸಂರಕ್ಷಣಾಧಿಕಾರಿ ಅನುಪಮ ಸೇರಿದಂತೆ ವಿವಿಧ ಇಲಾಖೆಯ ತಾಲ್ಲೂಕು ಮತ್ತು ಜಿಲ್ಲಾ ಮಟ್ಟದ ಅಧಿಕಾರಿಗಳು ಇದ್ದರು.

# ಶಾಲಾ ದಾಖಲಾತಿ ಆಂದೋಲನಕ್ಕೆ ಚಾಲನೆ



• ಮಲ್ಲಮ್ಮ ನುಡಿ ವಾರ್ತೆ ಹುಣಸೂರು

ಮೇ 20:ಸರ್ಕಾರೀ ಶಾಲೆಗಳಿಗೆ ಮಕ್ಕಳನ್ನು ಸೇರಿಸಿ ಎಂಬ ಶಾಲಾ ದಾಖಲಾತಿ ಆಂದೋಲನಕ್ಕೆ ತಾಲೂಕಿನ ಶಿಕ್ಷಣಾಧಿಕಾರಿ ಕಾಳನಾಯಕರು ನಗರದ ಚಿಕ್ಕಹುಣಸೂರು ಸರ್ಕಾರೀ ಶಾಲಾ ವ್ಯಾಪ್ತಿಯ ಬಡಾವಣೆಗಳಲ್ಲಿ ಚಾಲನೆ ನೀಡಿದರು.

ಮಕ್ಕಳು, ಶಿಕ್ಷಕರು, ಎಸ್ ಡಿ ಎಂ ಸಿ ಸದಸ್ಯರು, ಇಲಾಖೆಯ ಸಿಬ್ಬಂದಿಗಳು ಒಡಗೂಡಿ ಪಾದಯಾತ್ರೆ ನಡೆಸಿದರು. ಚಾಲನೆ ನೀಡಿ ಮಾತನಾಡಿದ ಶಿಕ್ಷಣಾಧಿಕಾರಿಗಳು ಸರ್ಕಾರೀ ಶಾಲೆಗೆ ಮಕ್ಕಳನ್ನು ಸೇರಿಸಿ. ಚಿಕ್ಕ ಹುಣಸೂರು ಸರ್ಕಾರೀ ಶಾಲೆಯಲ್ಲಿ ಉಚಿತ ಪಠ್ಯ ಪುಸ್ತಕ, ಸಮವಸ್ತ್ರ, ಶೂ, ಬಿಸಿಯೂಟ, ಕಂಪ್ಯೂಟರ್ ಶಿಕ್ಷಣ, ಸ್ಮಾರ್ಟ್ ಕ್ಲಾಸ್, ಇಂಗ್ಲಿಷ್ ಕಲಿಕೆ, ಒಳ್ಳೆ ಪರಿಸರ ಮುಂತಾದವನ್ನು ನುರಿತ ಶಿಕ್ಷಕರಿಂದ ಒದಗಿಸಲಾಗುವುದು. ಮಕ್ಕಳ ಶಿಕ್ಷಣಕ್ಕಾಗಿ ಜನರು ಸರ್ಕಾರೀ ಶಾಲೆಯ ಕಡೆಗೆ ಮುಖ ಮಾಡಲು ಮನವಿ ಮಾಡಿದರು. ಈ ಸಂದರ್ಭದಲ್ಲಿ

ಬಿ ಆರ್ ಸಿ ಹೇಮಲತಾ, ಬಿ ಆರ್ ಪಿ ಆನಂದ್, ಸಿ ಆರ್ ಪಿ ಅನಿಲ್, ವಿವಿಧ ಸರ್ಕಾರೀ ಶಾಖೆಗಳ ಮುಖ್ಯ ಉಪಾಧ್ಯಾಯರು, ಪಾಲ್ಗೊಂಡಿದ್ದರು. ಚಿಕ್ಕ ಹುಣಸೂರು ಸರ್ಕಾರೀ ಶಾಖೆಯ ಮುಖ್ಯ ಉಪಾಧ್ಯಾಯರು ಕರಿಯಪ್ಪ, ಎಚ್ ಪಿ ಬಿ ಎಸ್ ಶಾಲೆಯ ಮುಖ್ಯ ಶಿಕ್ಷಕರಾದ ಸುರೇಶ್ ಸಾಹಿತಿ ಡಾಕ್ಟರ್ ಹಾಗೂ ಶಿಕ್ಷಕ ಮಾಧುಪ್ರಸಾದ್ ಜಯರಾಮೇಗೌಡ ವ ಕಾರ್ಯಕ್ರಮ .ಘೋಷಣೆ ಪಲಕ ಹಿಡಿದು ಬ್ಯಾಂಡ್ ಬಾರಿಸುತ್ತ ಮಕ್ಕಳು ಮೆರವಣಿಗೆ ಯಲ್ಲಿ ಸಾಗುತ್ತಾ ಸರ್ಕಾರೀ ಶಾಲೆಗೆ ಮಕ್ಕಳನ್ನು ಸೇರಿಸಿ ಎಂಬ ಮನೆಮನೆಗೆ ಮುಂದೆ ಸಾಗಿ ಪ್ರಚಾರ ಮುಟ್ಟಿಸುತ್ತ ಶಿಕ್ಷಕರು ಹಾಗೂ ಎಸ್ ಡಿ ಎಂ ಸಿ ಸಮಿತಿಯ ಸದಸ್ಯರು ಸಾಗಿದರು

# ಮೇ ೩೦ ರಂದು ಮಾಹಿತಿ ಹಕ್ಕು ಕಾಯ್ದೆ ಕುರಿತು ಒಂದು ದಿನದ ಕಾರ್ಯಗಾರ

• ಮಲ್ಲಮ್ಮ ನುಡಿ ವಾರ್ತೆ ವಿಜಯನಗರ(ಹೊಸಪೇಟೆ)

ಮೇ.20:ಜಿಲ್ಲೆಯ ಎಲ್ಲಾ ಇಲಾಖೆಯ ಜಿಲ್ಲಾ ಮತ್ತು ತಾಲ್ಲೂಕು ಮಟ್ಟದ ಸಾರ್ವಜನಿಕ ಮಾಹಿತಿ ಅಧಿಕಾರಿಗಳಿಗೆ ಇದೇ ಮೇ 30 ರಂದು ನಗರದ ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ಮಾಹಿತಿ ಹಕ್ಕು ಕಾಯ್ದೆ ಕುರಿತು ಒಂದು ದಿನದ ಕಾರ್ಯಗಾರ ಹಾಗೂ ಸಂವಾದ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ. ಕಾರ್ಯಗಾರಕ್ಕೆ ಜಿಲ್ಲೆಯ ಎಲ್ಲಾ ಇಲಾಖೆಗಳ ಜಿಲ್ಲಾ ಹಾಗೂ ತಾಲೂಕು ಮಟ್ಟದ ಅಧಿಕಾರಿಗಳು, ಪೊಲೀಸ್ ಇಲಾಖೆ ಅಧಿಕಾರಿಗಳು,

ಗ್ರಾಮ ಪಂಚಾಯತ್ ಅಭಿವೃದ್ಧಿ ಅಧಿಕಾರಿಗಳು, ಸಾರ್ವಜನಿಕ ಮಾಹಿತಿ ಅಧಿಕಾರಿಗಳು ತಪ್ಪದೇ ಹಾಜರಾಗುವಂತೆ ಜಿಲ್ಲಾಧಿಕಾರಿ ಕವಿತಾ ಎಸ್. ಮನ್ನಿಕೇರಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಪರಿಶಿಷ್ಟ ಸಮುದಾಯಗಳ ಶ್ರೇಯೋಭಿವೃದ್ಧಿಗಾಗಿ ಜನ್ ಭಾಗೀದಾರಿ ಕಾರ್ಯಕ್ರಮ

• ಮಲ್ಲಮ್ಮ ನುಡಿವಾರ್ತೆವಿಜಯನಗರ (ಹೊಪೇಟೆ)

ಮೇ.20:ಧರ್ತಿ ಆಬಾ ಜನಜಾತೀಯ ಗ್ರಾಮ ಉತ್ಕರ್ಷ ಅಭಿಯಾನದಡಿ ಜನ್ ಭಾಗೀದಾರಿ–ಸಬ್ಸೆ ಡೋರ್ ಸಬ್ಸೆ ಪೆಹ್ಲೆ ಅಭಿಯಾನವನ್ನು ಕೇಂದ್ರ ಹಾಗೂ ರಾಜ್ಯ ಸರ್ಕಾರ ಪರಿಶಿಷ್ಟ ಪಂಗಡದ ಸಮುದಾಯಗಳ ಶ್ರೇಯೋಭಿವೃದ್ಧಿಗಾಗಿ 'ಜನ್ ಭಾಗೀದಾರಿ' ಕಾರ್ಯಕ್ರಮ ಆಯೋಜಿಸಲಾಗಿದೆ. ಕೇಂದ್ರ ಬುಡಕಟ್ಟು ವ್ಯವಹಾರಗಳ ಮಂತ್ರಾಲಯದ ವತಿಯಿಂದ ಜಿಲ್ಲೆಯಾದ್ಯಂತ ಇದೇ ಮೇ 25 ರವರೆಗೆ "ಜನ್ ಭಾಗೀದಾರಿ– ಸಬ್ಸೆ ಡೋರ್, ಸಬ್ಸೆ ಪೆಹ್ಲೆ" ಎಂಬ ಐಇಸಿ ಅಭಿಯಾನ ಹಮ್ಮಿಕೊಳ್ಳಲಾಗಿದೆ.

ಬುಡಕಟ್ಟು ಸಮುದಾಯದ ಜನರಿಗೆ ಕೇಂದ್ರ ಹಾಗೂ ರಾಜ್ಯ ಸರ್ಕಾರಗಳ ವಿವಿಧ ಯೋಜನೆಗಳ ಪ್ರಯೋಜನಗಳನ್ನು ತಲುಪಿಸುವುದು ಮತ್ತು ಅದಕ್ಕೆ ಬೇಕಾಗುವ ಅಗತ್ಯ ದಾಖಲಾತಿಗಳನ್ನು ಒದಗಿಸುವ ನಿಟ್ಟಿನಲ್ಲಿ ಗ್ರಾಮ ಮಟ್ಟದಲ್ಲಿ ಜಾಗೃತಿ ಮತ್ತು ಪ್ರಯೋಜನ ಶುದ್ಧತ್ವ ಶಿಬಿರ, ಆರೋಗ್ಯ ತಪಾಸಣಾ ಶಿಬಿರ ಹಾಗೂ ಬುಡಕಟ್ಟು ಜನರಲ್ಲಿ ಕಂಡುಬರುವ ಸಿಕಲ್ ಸೆಲ್ ಅನೀಮಿಯಾ ಕುರಿತು ಜಾಗೃತಿ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗುತ್ತಿದೆ.

# ರಸಗೊಬ್ಬರ ಹೆಚ್ಚಿನ ಪ್ರಮಾಣದಲ್ಲಿ ಪೂರೈಸುವಂತೆ ಕೃಷಿ ಪತ್ತಿನ ಸಹಕಾರ ಸಂಘಕ್ಕೆ ರೈತ ಸಂಘದ ಮನವಿ

• ಮಲ್ಲಮ್ಮ ನುಡಿ ವಾರ್ತೆ ಕಮಲನಗರ



ಮುಂಗಾರು ಹಂಗಾಮು ಆರಂಭವಾಗುತ್ತಿರುವ ಹಿನ್ನೆಲೆಯಲ್ಲಿ ಕಮಲನಗರ ತಾಲ್ಲೂಕಿನ ರೈತರಿಗೆ ಈ ವರ್ಷ ಹೆಚ್ಚಿನ ಪ್ರಮಾಣದಲ್ಲಿ ರಸಗೊಬ್ಬರವನ್ನು ಸರಬರಾಜು ಮಾಡಬೇಕೆಂದು ಕರ್ನಾಟಕ ರಾಜ್ಯ ರೈತ ಸಂಘ ಹಾಗೂ ಹಸಿರು ಸೇನೆ ತಾಲ್ಲೂಕು ಘಟಕ ಕಮಲನಗರ ವತಿಯಿಂದ ಮನವಿ ಪತ್ರ ನೀಡಿ ಒತ್ತಾಯಿಸಿದರು.

ಈ ಕುರಿತು ರೈತ ಸಂಘದ ಪದಾಧಿಕಾರಿಗಳು ಕಮಲನಗರದ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘದ (PKPS) ಅಧ್ಯಕ್ಷರಿಗೆ ಬುಧವಾರ (ಮೇ) ಲಿಖಿತ ಮನವಿ ಪತ್ರ ಸಲ್ಲಿಸಿದರು.

ಈ ವೇಳೆ ರೈತ ಮುಖಂಡರಾದ ಪ್ರವೀಣ ಕುಲಕರ್ಣಿ ಅವರು ಮಾತನಾಡಿ, ಮುಂಬರುವ ಬಿತ್ತನೆ ಹಂಗಾಮಿಗೆ ಕಮಲನಗರ ತಾಲ್ಲೂಕಿನ ವ್ಯಾಪ್ತಿಯಲ್ಲಿ ರಸಗೊಬ್ಬರದ ಬೇಡಿಕೆ ಹೆಚ್ಚಾಗುವ ಸಾಧ್ಯತೆ ಇದೆ. ಆದ್ದರಿಂದ ರೈತರಿಗೆ ಯಾವುದೇ ರೀತಿಯ ತೊಂದರೆಯಾಗದಂತೆ ಮುನ್ನೆಚ್ಚರಿಕೆ ಕ್ರಮವಾಗಿ ಈ ವರ್ಷ ಕಮಲನಗರ ತಾಲ್ಲೂಕಿಗೆ ಹೆಚ್ಚಿನ ಪ್ರಮಾಣದಲ್ಲಿ ರಸಗೊಬ್ಬರವನ್ನು ಮಂಜೂರು ಮಾಡಿ, ಸಕಾಲದಲ್ಲಿ ವಿತರಿಸಲು ವ್ಯವಸ್ಥೆ ಮಾಡಬೇಕು ಎಂದು ಹೇಳಿದರು. ಪಿ.ಕೆ.ಪಿ.ಎಸ್. ಕಾರ್ಯದರ್ಶಿ ಶಾಂತಪ್ಪ ಬಿರಾದಾರ ಮಾತನಾಡಿ, ಈ ರಸಗೊಬ್ಬರ ಹೆಚ್ಚಿನ ಪ್ರಮಾಣದಲ್ಲಿ ಪೂರೈಸುವಂತೆ ಮೇಲಧಿಕಾರಿಗಳ ಗಮನಕ್ಕೆ ತಂದಿದ್ದೇವೆ, ಸದ್ಯ ಅರ್ಗ್ಯಾನಿಕ ರಸ ಗೊಬ್ಬರ ಲಭ್ಯವಿದು. ಕೆಲವು ದಿನಗಳಲ್ಲಿ ಡಿ.ಎ.ಪಿ ಹಾಗೂ ಅವಶ್ಯಕ ರಸ ಗೊಬ್ಬರ ತರಿಸಿಕೊಂಡು ರೈತರಿಗೆ ವಿತರಿಸಲಾಗಿವುದು ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ಕರ್ನಾಟಕ ರಾಜ್ಯ ರೈತ ಸಂಘ ಹಾಗೂ ಹಸಿರು ಸೇನೆಯ ಪದಾಧಿಕಾರಿಗಳಾದ ಗುಂಡಪ್ಪ ದಾರಾ, ವಿಜಯಕುಮಾರ ಪಾಟೀಲ, ರಾಮೇಶ್ವರ ಶಿವಣಕರ ಹಾಗೂ ಸಂಘದ ಇತರ ಪ್ರಮುಖ ಮುಖಂಡರು ಉಪಸ್ಥಿತರಿದರು.

# ಮನೆಯಲ್ಲಿರುವ ಗ್ರಂಥಾಲಯಗಳು ಪುಸ್ತಕದ ಕಟ್ಟುಗಳಲ್ಲ, ಜ್ಞಾನದ ಸಂಕೇತ : ಡಾ.ಮಾನಸ

• ಮಲ್ಲಮ್ಮ ನುಡಿ ವಾರ್ತೆಕಾರವಾರ




ಮೇ.20: ಮನೆಗಳಲ್ಲಿ ಸ್ಥಾಪಿಸಿರುವ ಪುಸ್ತಕಗಳ ಗ್ರಂಥಾಲಯಗಳು ಕೇವಲ ಪುಸ್ತಕದ ಕಟ್ಟುಗಳಲ್ಲ, ಅವುಗಳು ಆ ಮನೆಯ ನಿವಾಸಿಗಳ ಜ್ಞಾನದ, ಸ್ವಾಭಿಮಾನದ ಮತ್ತು ಅರಿವಿನ ಸಂಕೇತ ಎಂದು ಕನ್ನಡ ಪುಸ್ತಕ ಪ್ರಾಧಿಕಾರದ ಅಧ್ಯಕ್ಷ ಡಾ.ಮಾನಸ ಹೇಳಿದರು.

ಅವರು ಮಂಗಳವಾರ ಕಾರವಾರದ ಕನ್ನಡ ಭವನದಲ್ಲಿ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಕನ್ನಡ ಪುಸ್ತಕ ಪ್ರಾಧಿಕಾರ, ಬೆಂಗಳೂರು, ಮನೆಗೊಂದು ಗ್ರಂಥಾಲಯ ಜಿಲ್ಲಾ ಜಾಗ್ರತಿ ಸಮಿತಿ ವತಿಯಿಂದ ಆಯೋಜಿಸಲಾದ ಮನೆಗೊಂದು ಗ್ರಂಥಾಲಯ ಅನುಷ್ಠಾನ ಸಮಾರಂಭ ಉದ್ಘಾಟಿಸಿ ಮಾತನಾಡಿದರು.

ಮನೆಗೊಂದು ಗ್ರಂಥಾಲಯ

ಕಾರ್ಯಕ್ರಮವು ಕನ್ನಡ ಪುಸ್ತಕ ಪ್ರಾಧಿಕಾರದ ಮಹತ್ವಾಕಾಂಕ್ಷೆಯ ಕಾರ್ಯಕ್ರಮವಾಗಿದ್ದು, ರಾಜ್ಯದಲ್ಲಿ 1 ಲಕ್ಷ ಮನೆಗಳಲ್ಲಿ ಗ್ರಂಥಾಲಯಗಳನ್ನು ತೆರೆಯುವ ಗುರಿ ಹೊಂದಲಾಗಿದೆ. ಪ್ರತೀ ಮನೆಯಲ್ಲಿ ಭಕ್ತಿಯ ಸಂಕೇತವಾಗಿ ಪೂಜಾ ಕೋಣೆ ಇರುವಂತೆ ಜ್ಞಾನದ ಸಂಕೇತವಾಗಿ ಪುಸ್ತಕ ಗ್ರಂಥಾಲಯಗಳು ಇರಬೇಕು, ಪುಸ್ತಕಗಳನ್ನು ಓದುವುದು ಧ್ಯಾನಕ್ಕೆ ಸಮನಾಗಿದ್ದು, ದೈನಂದಿನ ಒತ್ತಡಗಳಿಂದ ಮುಕ್ತಿ ದೊರೆಯಲಿದೆ ಎಂದರು.

ರಾಜ್ಯದಲ್ಲಿ ಮನೆಗಳಲ್ಲಿ ಸ್ಥಾಪನೆಯಾಗುವ ಗ್ರಂಥಾಲಯಗಳ ಬೆಳವಣಿಗೆಗೆ ಮತ್ತು ಅದರ ವಾರಿಸುದಾರರನ್ನು ಗೌರವಿಸುವ ಮತ್ತು ಉತ್ತೇಜಿಸುವ ಸಲುವಾಗಿ ಪ್ರಾಧಿಕಾರದಿಂದ ರಾಜ್ಯದ 4 ಕಂದಾಯ ವಿಭಾಗಗಲ್ಲಿ ವಾರ್ಷಿಕ ಪ್ರಶಸ್ತಿ ಮತ್ತು ರೂ.25000 ನೀಡಲಾಗುತ್ತಿದೆ. ರಾಜ್ಯದ ಎಲ್ಲಾ ಮನೆಗಳಲ್ಲಿಯೂ ಮನೆಗೊಂದು ಗ್ರಂಥಾಲಯ ತೆರೆಯುವ ಕಾರ್ಯಕ್ರಮಕ್ಕೆ ಪ್ರತಿಯೊಬ್ಬರ ಸಹಕಾರ ಅತ್ಯಗತ್ಯ ಎಂದರು.

ಕಾರ್ಯಕ್ರಮದಲ್ಲಿ ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ ಅಧ್ಯಕ್ಷ ಬಿ.ಎನ್. ವಾಸರೆ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕಿ ಮಂಗಲಾ ನಾಯಕ್, ತಾಲೂಕು ಕನ್ನಡ ಸಾಹಿತ್ಯ ಪರಿಷತ್ ಅಧ್ಯಕ್ಷ ರಾಮಾನಾಯ್ಕ, ಮನೆಗೊಂದು ಗ್ರಂಥಾಲಯದ ಜಿಲ್ಲಾ ಜಾಗೃತ ಸಮಿತಿ ಸಂಚಾಲಕ ಕೃಷ್ಣಾ ನಾಯಕ ಹಿಚ್ಕಡ, ಯಮುನಾ ಗಾಂವಕರ, ಶ್ರೀದೇವಿ ಕೆರೆಮನೆ, ಎನ್.ಜಿ.ನಾಯಕ ಮತ್ತಿತರರು ಇದ್ದರು.

ಕಾರ್ಯಕ್ರಮದಲ್ಲಿ ಜಿಲ್ಲೆಯಲ್ಲಿ ಮನೆಗೊಂದು ಗ್ರಂಥಾಲಯ ಆರಂಭಿಸಿರುವವರಿಗೆ ಅಭಿನಂದನಾ ಪತ್ರ ನೀಡಿ ಗೌರವಿಸಲಾಯಿತು.

ಮನೆಗೊಂದು ಗ್ರಂಥಾಲಯ ಅನುಷ್ಠಾನದಡಿ, ಕಾರವಾರದಲ್ಲಿ ಪ್ರೀತಿಪದ ಪುಸ್ತಕ ಮನೆ, ಸುಪ್ತಶ್ರೀ ಪುಸ್ತಕ ಮನೆ, ಹರ್ಷಗಿರಿ ಪುಸ್ತಕ ಮನೆಗಳಿಗೆ ಡಾ.ಮಾನಸ ಭೇಟಿ ನೀಡಿ, ಮೆಚ್ಚುಗೆ ವ್ಯಕ್ತಪಡಿಸಿದರು.

# ಮೇ 25ಕ್ಕೆ ಬಿತ್ತನೆ ಬೀಜ ವಿತರಣೆಗೆ ರೈತ ಸಂಘದ ಮನವಿ



• ಮಲ್ಲಮ್ಮ ನುಡಿ ವಾರ್ತೆ ಕಮಲನಗರ

ಮುಂಬರುವ ಮುಂಗಾರು ಹಂಗಾಮಿಗೆ ಮೇ 25 ರಿಂದಲೇ ತಾಲೂಕಿನಾದ್ಯಂತ ಬಿತ್ತನೆ ಬೀಜ ಮತ್ತು ರಸಗೊಬ್ಬರ ವಿತರಣೆ ಆರಂಭಿಸಬೇಕೆಂದು ಆಗ್ರಹಿಸಿ ಕರ್ನಾಟಕ ರಾಜ್ಯ ರೈತ ಸಂಘ ಹಾಗೂ ಹಸಿರು ಸೇನೆ ಪದಾಧಿಕಾರಿಗಳು ಕೃಷಿ ಅಧಿಕಾರಿ ಶತ್ರುಘ್ನ ಸರ ಅವರಿಗೆ ಮನವಿ ಸಲ್ಲಿಸಿದರು.

ಕಮಲನಗರ ಕೃಷಿ ಇಲಾಖೆ ಕಚೇರಿಯಲ್ಲಿ ಮನವಿ ಸಲ್ಲಿಸಿದ ಮುಖಂಡರು, "ರೈತ ಸಂಪರ್ಕ ಕೇಂದ್ರಗಳಲ್ಲಿ ನೂಕುನುಗ್ಗಲು ತಪ್ಪಿಸಲು ಹೆಚ್ಚುವರಿ ಉಪ ಕೇಂದ್ರಗಳನ್ನು ತೆರೆಯಬೇಕು ಹಾಗೂ ಕಳಪೆ ಬೀಜ ಪೂರೈಕೆಯಾಗದಂತೆ ನಿಗಾ ವಹಿಸಬೇಕು," ಎಂದು ಒತ್ತಾಯಿಸಿದರು.

ಈ ಸಂದರ್ಭದಲ್ಲಿ ರೈತ ಮುಖಂಡರಾದ ವೈಜೀನಾಥ ವಡ್ಡೆ, ಪ್ರವೀಣ ಕುಲಕರ್ಣಿ, ರಮೇಶ್, ವಿಜಯಕುಮಾರ ಪಾಟೀಲ, ರಾಮೇಶ್ವರ ಶಿವಣಕರ, ಗುಂಡಪ್ಪ ದಾನಾ ಸೇರಿದಂತೆ ಪ್ರಮುಖರು ಉಪಸ್ಥಿತರಿದ್ದರು

# ಕುಡಿತಿನಿ ಭೂ ಸಂತ್ರಸ್ತ ಹೋರಾಟಕ್ಕೆ 1251 ದಿನ ನ್ಯಾಯ ಸಿಗುವವರೆಗೆ ಹೊರಟ ನಿಲ್ಲದು: ಸಂಪತ್

• ಮಲ್ಲಮ್ಮ ನುಡಿ ವಾರ್ತೆಕುರುಗೋಡು



ಭೂಮಿ ಕಳೆದುಕೊಂಡ ರೈತರಿಗೆ ನ್ಯಾಯ ಒದಗಿಸುವಲ್ಲಿ ಸರ್ಕಾರ ಸಂಪೂರ್ಣವಾಗಿ ವಿಫಲವಾಗಿದ್ದು ಜನಪ್ರತಿನಿಧಿಗಳು ಹಾಗೂ ಕೆಐಎಡಿಬಿ ಅಧಿಕಾರಿಗಳು ಜಿಂದಾಲ್ ಕಾರ್ಖಾನೆ ಪಟ್ಟಾಭದ್ರ ಹಿತಾಸಕ್ತಿಗಳ ಮಾತು ಕೇಳಿ ಅವರ ಕೈಗೊಂಬೆಗಳಗಿ ಮಾತು ಕೇಳುತ್ತಿದ್ದಾರೆ, ಅವರ ವಿರುದ್ಧ ರೈತರು ಧ್ವನಿ ಎತ್ತಿದ್ದಾಗ ಪೋಲೀಸ್ ರನ್ನು ಬಿಟ್ಟು ಹೋರಾಟಕ್ಕೆ ಅಡಿಪಡಿಸುವ ಪ್ರಯತ್ನ ನಡೆಸಿದ್ದರು ಇದಕ್ಕೆ ಮುಂದಿನ ದಿನಗಳಲ್ಲಿ ಸರಿಯಾದ ಬೆಲೆ ತೆರಬೇಕಾಗುತ್ತದೆ, ಅದರೆ ಯಾವುದಕ್ಕೂ ನಾವು ಭಮಪಡೆದೆ ಪುನಃ ಹೋರಾಟ ಮುಂದುವರೆಸಿದ್ದೇವೆ, ಪುನಃ ಸರಣಿ ಉಪವಾಸ ಸತ್ಯಾಗ್ರಹ ಮುಂದುವರೆದಿದೆ ನ್ಯಾಯ ಸಿಗುವವರೆಗೆ ನಮ್ಮ ಹೊರಟ ನಿಲ್ಲದು ಎಂದು ನಮ್ಮ ಕರ್ನಾಟಕ ರಕ್ಷಣಾ ವೇದಿಕೆ (ಯುವಸೇನೆ) ಕುಡತೀನಿ ಘಟಕದ ಅಧ್ಯಕ್ಷರಾದ ಸಂಪತ್ ಎಚ್ಚರಿಕೆ ನೀಡಿದರು.

ಇಲ್ಲಿಗೆ ಸಮೀಪದ ಕುಡಿತಿನಿ ಪಟ್ಟಣ ಸೇರಿದಂತೆ ಸುತ್ತಮುತ್ತಲಿನ ಗ್ರಾಮಗಳ ಭೂ ಸಂತ್ರಸ್ತ ರೈತರು ಕೈಗಾರಿಕೆಗಳನ್ನು ಸ್ಥಾಪಿಸಬೇಕು ಇಲ್ಲವೇ ತಮ್ಮ ಭೂಮಿಯನ್ನು ಹಿಂತಿರುಗಿಸಬೇಕು ಎಂದು ಅಗ್ರಹಿಸಿ ಹಮ್ಮಿಕೊಂಡ ಅನಿರ್ಧಿಷ್ಠಾವದಿ ಧರಣಿಯಲ್ಲಿ ಅವರು ಮಾತನಾಡಿದರು. ಮುಂದುವರಿದ ರೈತರ ಸರಣಿ ಉಪವಾಸ ಸತ್ಯಾಗ್ರಹ..

1251ನೇ ದಿನಕ್ಕೆ ಕಾಲಿಟ್ಟಿದ್ದು 2022 ರಿಂದ ಮೂರು ಕಂಪನಿಗಳ ವಿರುದ್ಧ ಹೋರಾಟ ನಡೆಯುತ್ತಲೇ ಇದೆ, ಭೂ ಸ್ವಾಧೀನ ಕಾಯ್ದೆ ಗಾಳಿ ತೂರಿವೆ ಎಂದು ಕೆಐಎಡಿಬಿ ಹಾಗೂ ಸರ್ಕಾರ ವಿರುದ್ಧ ಕುಡತೀನಿ ಭೂ ಸಂತ್ರಸ್ತರ ಹೋರಾಟ ಇಂದಿಗೆ 1251ನೇ ದಿನಕ್ಕೆ ಮುಂದುವರೆದು ಮತ್ತು ಉಪವಾಸ ಸತ್ಯಾಗ್ರಹ ಇಂದಿಗೆ 9 ನೇ ದಿನ್ನಕ್ಕೆ ಮುಂದುವರೆದಿದ್ದು ಈ ದಿನದ ಉಪವಾಸ ಸತ್ಯಾಗ್ರಹವನ್ನು ಮೀರ್ ಶ್ರೀನಿವಾಸ.ಟಿ.ಜಮ್ಮಯ್ಯ. ಮುಗ್ಗು ಮಾರೇಶ್. ಟೈಗರ್. ಬಿ ಜಮ್ಮಯ್ಯ. ರವಿ ಮತ್ತು. ನಮ್ಮ ಕರ್ನಾಟಕ ಸೇನೆ ಅಧ್ಯಕ್ಷರಾದ ಭಾವಿ ಅಂಬರೀಶ್. ತಿಮ್ಮಪ್ಪ. ಎಂ ಗಂಗಾಧರ. ಭಾವಿ ಶಿವಕುಮಾರ್, ಕಾಸಿಂ, ರಾಮಣ್ಣ, ಮತ್ತು ಕರ್ನಾಟಕ ರಕ್ಷಣಾ ವೇದಿಕೆ ನಾರಾಯಣ ಗೌಡ ಬಣದ ಜಂಗ್ಲಿ ಸಾಬ್. ದಿವಾಕರಬಾಬು. ವೀರಭದ್ರ. ಬಿ ವಿವೇಕಾನಂದ. ಹಾಲಪ್ಪ ಗಿರೀಶ್. ಮತ್ತು ರೈತರು ಹಾಗೂ ಹಲವಾರು ಮಹಿಳೆಯರ ಸಮ್ಮುಖದಲ್ಲಿ ಹಾಗೂ ವಿವಿಧ ಸಂಘ ಸಂಸ್ಥೆಗಳ ಸಹಯೋಗದಲ್ಲಿ ಸರಣಿ ಉಪವಾಸ ಸತ್ಯಾಗ್ರಹವನ್ನು ಹಮ್ಮಿಕೊಂಡಿದ್ದು ಭೂ ಸಂತ್ರಸ್ತ ರೈತರ ಧರಣಿ ಸತ್ಯಾಗ್ರಹ ಇನ್ನಷ್ಟು ಕಾವು ಪಡೆದುಕೊಂಡಿದೆ.

ವೇಳೆ ಕುಡಿತಿನಿ ವೇಣಿವೀರಾಪುರ, ಹರಗಿನಡೋಣಿ ಹಾಗೂ ಸುತ್ತಮುತ್ತಲಿನ ಗ್ರಾಮಗಳ ರೈತರು ಹಾಗೂ ವಿವಿಧ ಸಂಘಟನೆಗಳ ಪದಾಧಿಕಾರಿಗಳು ಊರಿನ ಮುಖಂಡರು ಇತರರು ಇದ್ದರು.

# ಕುಡಿತಿನಿ : ಹೆಲ್ಮೆಟ್ ಕಡ್ಡಾಯ ಜಾಗೃತಿ ಪೋಲೀಸ್ ಬೈಕ್ ರ್ಯಾಲಿ



• ಮಲ್ಲಮ್ಮ ನುಡಿ ವಾರ್ತೆಕುರುಗೋಡು

ಹೆಚ್ಚುತ್ತಿರುವ ರಸ್ತೆ ಅಪಘಾತ ತಪ್ಪಿಸಲು, ಜನಜೀವ ಸುರಕ್ಷತೆಗಾಗಿ ದ್ವಿಚಕ್ರ ವಾಹನ ಸವಾರರಿಗೆ ಹೆಲ್ಮೆಟ್ ಕಡ್ಡಾಯಗೊಳಿಸಲು ನಿರ್ಧರಿಸಲಾಗಿದೆ ಸಾರ್ವಜನಿಕರು ತಮ್ಮ ಹಾಗೂ ಕುಟುಂಬದ ಹಿತದೃಷ್ಟಿಯಿಂದ ಹೆಲ್ಮೆಟ್ ಧರಿಸಿ ಸುರಕ್ಷಿತಗೆ ಆದ್ಯತೆ ನೀಡಬೇಕು ಎಂದು ಸಿಪಿಐ ಬಾಳನಗೌಡ ಕರೆ ನೀಡಿದರು.

ಇಲ್ಲಿಗೆ ಸಮೀಪದ ಕುಡಿತಿನಿ ಪಟ್ಟಣದಲ್ಲಿ ಹೆಲ್ಮೆಟ್ ಕಡ್ಡಾಯ ಅಭಿಯಾನಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು.

ನಂತರ ಪಿಎಸ್ಐ ಶಾಂತ ಮೂರ್ತಿ ಮಾತನಾಡಿ ಹೆಲ್ಮೆಟ್ ಧರಿಸದೆ ದ್ವಿಚಕ್ರ ವಾಹನಗಳನ್ನು ಓಡಿಸುವುದರಿಂದ ಪ್ರಾಣಕ್ಕೆ ಸಂಚಕಾರ ತಂದು–ಕೊಂಡಂತಾಗುತ್ತದೆ ಅದ್ದರಿಂದ ಯಾರು ಕೂಡ ಬೈಕ್ ಸವಾರಿ ಮಾಡುವ ಸಂದರ್ಭದಲ್ಲಿ ತಪ್ಪದೇ ಹೆಲ್ಮೆಟ್ ಧರಿಸಿ ಸುರಕ್ಷಿತಗೆ ಆದ್ಯತೆ ನೀಡಬೇಕು ಎಂದು ಹೇಳಿದರು.

ಪೊಲೀಸರು ಹೆಲ್ಮೆಟ್ ಧರಿಸಿ ಬೈಕ್ ಚಾಲನೆಯೊಂದಿಗೆ ಪಟ್ಟಣದಲ್ಲಿ ಪ್ರಮುಖ ರಸ್ತೆಗಳಲ್ಲಿ ಸಂಚಾರ ಮಾಡುವುದರ ಮೂಲಕ ಹೆಲ್ಮೆಟ್ ಕುರಿತು ಜಾಗೃತಿ ಮೂಡಿಸಿದರು. ಕುಡತಿನಿ ಪೊಲೀಸ್ ಠಾಣೆಯ ಪಿಎಸ್ಐ , ಠಾಣೆಯ ಪೊಲೀಸರು, ಸಿಬ್ಬಂದಿ ಹೆಲ್ಮೆಟ್ ಜಾಗೃತಿ ಅಭಿಯಾನದಲ್ಲಿ ಹಾಜರಿದ್ದರು.

# ಇಂದು ರಾಜೀವಗಾಂಧಿ ಪುಣ್ಯ ದಿನಾಚರಣೆ

• ಮಲ್ಲಮ್ಮ ನುಡಿ ವಾರ್ತೆ ಕಲಬುರಗಿ

ಮೇ.20– ಜಿಲ್ಲಾ ಕಾಂಗ್ರೆಸ್ ಸಮಿತಿ ಕಚೇರಿಯಲ್ಲಿ ಮೇ 21ರಂದು ಬೆಳಿಗ್ಗೆ ಹತ್ತು ಗಂಟೆಗೆ ಮಾಜಿ ಪ್ರಧಾನಿ ದಿ. ರಾಜೀವಗಾಂಧಿಯವರ ಪುಣ್ಯದಿನವನ್ನು ಆಚರಣೆ ಮಾಡಲಾಗುವುದು ಎಂದು ಪಕ್ಷದ ಜಿಲ್ಲಾಧ್ಯಕ್ಷ ಹಾಗೂ ರಾಜ್ಯ ವಿಧಾನ ಪರಿಷತ್ ಸದಸ್ಯ ಜಗದೇವ್ ಗುತ್ತೇದಾರ್ ಕಾಳಗಿ ಅವರು ತಿಳಿಸಿದ್ದಾರೆ.

ಕಾರ್ಯಕ್ರಮಕ್ಕೆ ಕಾಂಗ್ರೆಸ್ ಪಕ್ಷದ ಎಲ್ಲ ಹಾಲಿ ಹಾಗೂ ಮಾಜಿ ಸಂಸದರು, ಸಚಿವರು, ಶಾಸಕರು, ವಿಧಾನ ಪರಿಷತ್ ಸದಸ್ಯರು, ಕೆಪಿಸಿಸಿ ಹಾಗೂ ಡಿಸಿಸಿ ಪದಾಧಿಕಾರಿಗಳು, ಮುಖಂಡರು, ನಿಗಮ, ಮಂಡಳಿ, ಪ್ರಾಧಿಕಾರದ ಅಧ್ಯಕ್ಷರು ಹಾಗೂ ಸದಸ್ಯರು, ಜಿಲ್ಲಾ ಕಾಂಗ್ರೆಸ್ ಸಮಿತಿ ಮಾಜಿ ಅಧ್ಯಕ್ಷರು, ಡಿಸಿಸಿ ಡೆಲಿಗೇಟ್ ಸದಸ್ಯರು, ಬ್ಲಾಕ್ ಕಾಂಗ್ರೆಸ್ ಸಮಿತಿ ಅಧ್ಯಕ್ಷರು ಹಾಗೂ ಪದಾಧಿಕಾರಿಗಳು, ಜಿಲ್ಲಾ ಕಾಂಗ್ರೆಸ್ ಸಮಿತಿ ವಿವಿಧ ಮುಂಚೂಣಿ ಘಟಕ, ವಿಭಾಗಗಳ ಅಧ್ಯಕ್ಷರು ಹಾಗೂ ಪದಾಧಿಕಾರಿಗಳು, ಪಕ್ಷದ ಪುರ ಪಂಚಾಯಿತಿ, ಎಪಿಎಂಸಿಯ ಹಾಲಿ ಹಾಗೂ ಮಾಜಿ ಅಧ್ಯಕ್ಷರು, ಉಪಾಧ್ಯಕ್ಷರು, ಸದಸ್ಯರುಗಳು, ಮಹಾ ನಗರ ಪಾಲಿಕೆಯ ಹಾಲಿ ಹಾಗೂ ಮಾಜಿ ಮಹಾಪೌರರು, ಉಪ ಮಹಾಪೌರರು ಹಾಗೂ ಸದಸ್ಯರುಗಳು, ಮಹಿಳೆಯರು, ಯುವಕರು ಕಾಂಗ್ರೆಸ್ ಪಕ್ಷದ ಎಲ್ಲ ಮುಖಂಡರು, ಕಾರ್ಯಕರ್ತರು, ಅಭಿಮಾನಿಗಳು ಹೆಚ್ಚು ಹೆಚ್ಚು ಸಂಖ್ಯೆಯಲ್ಲಿ ಆಗಮಿಸಬೇಕೆಂದು ಅವರು ಹೇಳಿಕೆಯಲ್ಲಿ ಕೋರಿದ್ದಾರೆ.

# ಕೆಪಿಸಿಸಿ(ಐ) ಪ್ರಚಾರ ಸಮಿತಿ ಕೊಪ್ಪಳ ಜಿಲ್ಲಾ ಉಸ್ತುವಾರಿಯಾಗಿ ವೆಂಕಟೇಶ ಹೆಗಡೆ ನೇಮಕ

• ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ



ಕರ್ನಾಟಕ ಪ್ರದೇಶ ಕಾಂಗ್ರೆಸ್ ಪ್ರಚಾರ ಸಮಿತಿಯ ಕೊಪ್ಪಳ ಜಿಲ್ಲಾ ಉಸ್ತುವಾರಿಯನ್ನಾಗಿ ನಗರದ ಕಾಂಗ್ರೆಸ್ ಯುವ ಮುಖಂಡ ವೆಂಕಟೇಶ್ ಹೆಗಡೆ ಅವರನ್ನು ನಿಯೋಜಿಸಿ ಪ್ರಚಾರ ಸಮಿತಿಯ ರಾಜ್ಯಾಧ್ಯಕ್ಷ ವಿನಯ್ ಕುಮಾರ್ ಸೊರಕೆ ಅವರು ಆದೇಶಿಸಿದ್ದಾರೆ. ರಾಜ್ಯದ ವಿವಿಧ 25 ಜನರ ಉಸ್ತುವಾರಿಯನ್ನು ನಿಯೋಜಿಸಿ ಸಮಿತಿಯ ರಾಜ್ಯಾಧ್ಯಕ್ಷರು ಆದೇಶ ಹೊರಡಿಸಿದ್ದಾರೆ. ಈ ಮೊದಲು ರಾಯಚೂರು ಜಿಲ್ಲಾ ಉಸ್ತುವಾರಿಯಾಗಿದ್ದ ವೆಂಕಟೇಶ್ ಹೆಗಡೆ ಅವರಿಗೆ ಕೊಪ್ಪಳ ಜಿಲ್ಲೆಯ ಉಸ್ತುವಾರಿ ಜವಾಬ್ದಾರಿ ನೀಡಿದ್ದಾರೆ.

# ಪದೇಪದೇ ವಿದ್ಯುತ್ ಕಡಿತ: ತೊಂದರೆ



• ಮಲ್ಲಮ್ಮ ನುಡಿ ವಾರ್ತೆಮುದಗಲ್

ಪಟ್ಟಣ ಸಮೀಪದ ದೇಸಾಯಿಬೋಗಾಪೂರ ಗ್ರಾಮ ಮತ್ತು ನಾಲ್ಕು ತಾಂಡಾದಲ್ಲಿ ಪದೇಪದೇ ವಿದ್ಯುತ್ ಕಡಿತವಾಗುವುದರಿಂದ ಇಲ್ಲಿನ ಜನರಿಗೆ ಸಾಕಷ್ಟು ತೊಂದರೆ ಉಂಟಾಗಿದೆ. ದೇಸಾಯಿ ಬೋಗಾಪುರ ಗ್ರಾಮ ಮತ್ತು ಗೌಡರ ಹಟ್ಟಿ ಕಸ್ತೂರಿ ತಾಂಡಾ, ಪಾಪಣ್ಣ ತಾಂಡಾ, ದಾದೂಡಿ ತಾಂಡಾ, ಕಿರಣ ತಾಂಡಾ ಸೇರಿದಂತೆ ಇಲ್ಲಿನ ಗ್ರಾಮಗಳಿಗೆ ಪದೇಪದೇ ವಿದ್ಯುತ್ ಕಡಿತವಾಗುವುದರಿಂದ ರಾತ್ರಿ ವೇಳೆಯಲ್ಲಿ ಬೇಳಕು, ಗಾಳಿ ಇಲ್ಲದೇ ನರಕಯಾತನೆ ಅನುಭವಿಸಬೇಕಾಗಿದೆ. ಕುಡಿಯುವ ನೀರಿಗೂ ಮಹಿಳೆಯರು, ಮಕ್ಕಳು ಪರಿತಪಿಸಬೇಕಾದ ಪರಿಸ್ಥಿತಿ ನಿರ್ಮಾಣವಾಗಿದೆ. ಈ ಗ್ರಾಮಗಳಿಗೆ ಸರಬರಾಜಾಗುವ ವಿದ್ಯುತ್ ಮೇಲ್ ಉಸ್ತುವಾರಿ ಮಸ್ಕಿ ಕ್ಷೇತ್ರದ ಮೆದಿಕಿನಾಳ ಸೆಕ್ಷನ್ಗೆ ಒಳಪಟ್ಟರೆ, ವಿದ್ಯುತ್ ಸರಬರಾಜು ಮಾತ್ರ ಲಿಂಗಸುಗೂರ ಕ್ಷೇತ್ರದ ನಾಗಲಾಪುರ 33ಕೆ ವಿ ಸ್ಟೇಷನ್ ನಿಂದ ಸರಬರಾಜಾಗುತ್ತಿದೆ. ಏನಾದರೂ ಸಮಸ್ಯೆ ಉಂಟಾದಾಗ ಬಂದು ನೋಡುವ ಲೈನ್ ಮನ್ ಮಸ್ಕಿ ತಾಲೂಕನ್ವರಾದರೇ ವಿದ್ಯುತ್ ನೀಡುವರು ಲಿಂಗಸೂರು ತಾಲೂಕಿನ ಜೆಸ್ಕಾಂ ದವರು. ಈ ಅವಳಿ ತಾಲೂಕಿನ ಜೆಸ್ಕಾಂ ಇಲಾಖೆ ಅಧಿಕಾರಿಗಳ ಸಮನ್ವಯ ಕೊರತೆಯಿಂದ ಇಲ್ಲಿನ ಸಾರ್ವಜನಿಕರಿಗೆ ಪದೇ ಪದೇ ವಿದ್ಯುತ್ ಕಡಿತ ದ ತೊಂದರೆ ಅನುಭವಿಸಬೇಕಾದ ಪರಸ್ಥಿತಿ ಉಂಟಾಗುತ್ತದೆ. ಆದರೆ ಈಗ ಒಂದು ವಾರದಿಂದ ಸಮರ್ಪಕ ವಿದ್ಯುತ್ ಇಲ್ಲದೆ ಹೊಟ್ಟೆಗೆ ಹಿಟ್ಟಿಲ್ಲ, ಮೊಬೈಲ್ ಚಾರ್ಜ್ ಇಲ್ಲ, ಕುಡಿಯುವ ನೀರಿಗಂತೂ ಜನಹಾಹಾಕಾರದ ಪರಿಸ್ಥಿತಿ ನಿರ್ಮಾಣವಾಗಿದೆ. ರಾತ್ರಿ ವೇಳೆಯಲ್ಲಿ ಬಾಣತಿಯರು, ಗರ್ಭಿಣಿಯರು, ಶಿಶುಮಕ್ಕಳು, ಮಹಿಳೆಯರು ಮನೆಯೊಳಗೆ ಹೋಗದಂತ ಸ್ಥಿತಿ ನಿರ್ಮಾಣವಾಗಿದೆ. ಹೊರಗಡೆ ಉಳಿದುಕೊಳ್ಳಲು ಕತ್ತಲು ಕಾಟವಾದರೆ ರಾತ್ರಿ ಮನೆಯಲ್ಲಿ ಉಳಿದುಕೊಳ್ಳಲು ಬಿಸಿಗೆಯ ಝುಳಕ್ಕೆ ಜನ ಹೈರ್ನಾಗಿದ್ದಾರೆ. ಈ ಬಗ್ಗೆ ಸಂಬಂಧಿಸಿದ ಅಧಿಕಾರಿಗಳಿಗೆ ಸಾಕಷ್ಟು ಬಾರಿ ತಿಳಿ ಹೇಳಿದರು ಕ್ರಮಕ್ಕೆ ಮುಂದಾಗಿಲ್ಲ. ಇದ್ದ ಹಳೆಯ ಮೆದಿಕಿನಾಳ ಲೈನಮನ್ ಶಿವಪ್ಪನನ್ನು ಬದಲಾವಣೆಗೆ ವಿರೋಧಿಸಿದರು. ರಾಜಕೀಯ ಒತ್ತಡಕ್ಕೆ ಮಣಿದು ಅಧಿಕಾರಿಗಳು ವರ್ಗಾವಣೆಮಾಡಿದ್ದಾರೆ. ಹೊಸದಾಗ ಬಂದ ಲೈನ್‌ಮನ್‌ನಿಗೆ ಇಲ್ಲಿನ ಲೈನ್ ಗಳ ಮತ್ತು ವಿದ್ಯುತ್ ಸಮಸ್ಯೆ ಅರ್ಥವಾಗದೆ ಕಾಲಹರಣ ಮಾಡುತ್ತಿದ್ದಾರೆ. ಸಂಬಂಧಿಸಿದ ಅಧಿಕಾರಿಗಳು ಚುನಾಯಿತ ಪ್ರತಿನಿಧಿಗಳು ಕೂಡಲೇ ಸಮಸ್ಯೆಗೆ ಸ್ಪಂದಿಸಬೇಕು ಇಲ್ಲದಿದ್ದರೆ ತಾಲೂಕಿನ ಜೆಸ್ಕಾಂ ಕಚೇರಿ ಎದ್ರು ಅನಿರ್ದಿಷ್ಟ ಅವಧಿ ಪ್ರತಿಭಟನೆ ನಡೆಸುವುದಾಗಿ ಇಲ್ಲಿನ ಸಾರ್ವಜನಿಕರು ಎಚ್ಚರಿಸಿದ್ದಾರೆ.

# ಮೊಬೈಲ್ ಹ್ಯಾಕ್ ಮಾಡಿ 2.58 ಲಕ್ಷ ರೂ.ಗಳ ಪಂಗನಾಮ

• ಮಲ್ಲಮ್ಮ ನುಡಿ ವಾರ್ತೆ ಕಲಬುರಗಿ

ಮೇ.20– ಮೊಬೈಲ್ ಹ್ಯಾಕ್ ಮಾಡಿ ಸುಮಾರು 2.58 ಲಕ್ಷ 53ರೂ.ಗಳನ್ನು ವಂಚಿಸಿದ ಕುರಿತು ದುಬೈ ಕಾಲೋನಿಯ ಆಟೋ ನಗರ ನಿವಾಸಿ ಹಾಗೂ ಮಹೇಂದ್ರ ಫೈನಾನ್ಸ್ ಕಂಪೆನಿಯಲ್ಲಿ ಅಕೌಂಟೆಂಟ್ ಆಗಿರುವ ರಾಜು ದೈಮಲೆ ತಂದೆ ನಾಗೇಂದ್ರ ಅವರು ಸೈಬರ್ ಕ್ರೈಂಗೆ ದೂರು ಸಲ್ಲಿಸಿದ್ದಾರೆ. ಬಿಹಾರ್ ರಾಜ್ಯದ ಪಾಟ್ನಾದ ರಾಜೇಶ್ ಮಿರ್ಶರಾ ಎಂಬಾತನು ನನ್ನ ಮೊಬೈಲ್ ಹ್ಯಾಕ್ ಮಾಡಿ ನನ್ನ ಫೀಪ್ ಕಾರ್ಟ ಐಡಿಯಿಂದ ನನ್ನ ಐಸಿಐಸಿಐ ಬ್ಯಾಂಕ್‌ನ ಕ್ರೇಡಿಟ್ ಕಾರ್ಡ್ ಬಳಸಿಕೊಂಡು ಮೂರು ವಿವಿಧ ಕಂಪೆನಿಗಳ ದುಬಾರಿ ಮೊಬೈಲ್‌ಗಳನ್ನು ಖರೀದಿಸಿಕೊಂಡು ಒಟ್ಟು 2,58,053ರೂ.ಗಳ ಹಣ ಮೋಸ ವಂಚನೆ ಮಾಡಿದ್ದಾನೆ ಎಂದು ಅವರು ದೂರಿದ್ದಾರೆ. ಸುಮಾರು 16 ವರ್ಷಗಳೀಂದ ಮಹೇಂದ್ರ ಫೈನಾನ್ಸ್ ಕಂಪೆನಿಯಲ್ಲಿ ರಾಜು ಕೆಲಸ ಮಾಡುತ್ತಿದ್ದು, ಕಳೆದ 13ರಂದು ಸಂಜೆ ಐದು ಗಂಟೆಗೆ ಕಚೇರಿಯಲ್ಲಿ ಇದ್ದಾಗ ಅವರ ಮೊಬೈಲ್‌ಗೆ ಮಹೇಂದ್ರ ಫೈನಾನ್ಸ್ ಕಂಪೆನಿಯ ಕಸ್ಟೋಮರ್ ಅನೀಲಕುಮಾರ್ ಮೊಬೈಲ್‌ನಿಂದ ಅಪ್ಲಿಕೆಷನ್ ಲಿಂಕ್ ಬಂದಿದ್ದನ್ನು ಕ್ಲೀಕ್ ಮಾಡಿದಾಗ ಮೊಬೈಲ್ ಹ್ಯಾಕ್ ಆಗಿ ಸುಮಾರು ಒಂದು ಗಂಟೆಯವರೆಗೆ ಅವರ ಮೊಬೈಲ್ ಅಪರೇಟಿವ್ ಆಗಿಲ್ಲ.

# ಹಡಗಲಿ ಶಾಲೆಗೆ ಮುಖ್ಯೋಪಾಧ್ಯಾಯರಾಗಿ ಗೋವಿಂದ ನಾಯ್ಕ



• ಮಲ್ಲಮ್ಮ ನುಡಿ ವಾರ್ತೆಮುದಗಲ್

ಪಟ್ಟಣ ಸಮೀಪದ ಹಡಗಲಿ ಗ್ರಾಮದ ಸರಕಾರಿ ಸಂಯುಕ್ತ ಹಿರಿಯ ಪ್ರಾಥಮಿಕ ಶಾಲೆಗೆ ಮುಖ್ಯೋಪಾಧ್ಯರಾಗಿ ಆಗಮಿಸಿದ ಗೋವಿಂದ ನಾಯ್ಕರನ್ನು ಶಾಲಾ ಸುಧಾರಣಾ ಸಮಿತಿಯವರು, ಗ್ರಾಮಸ್ಥರು ಸ್ವಾಗತಿಸಿ ಸನ್ಮಾನಿಸಿದರು. ಯರದೊಡ್ಡಿ ತಾಂಡಾದ ಶಾಲೆಯಲ್ಲಿ ಹಲವು ವರ್ಷಗಳಿಂದ ಶಿಕ್ಷಕ ವೃತ್ತಿಯಲ್ಲಿ ಸೇವೆ ಸಲ್ಲಿಸುತ್ತಿದ್ದ ಗೋವಿಂದ್ ನಾಯಕ್ ನೂತನವಾಗಿ ಮುಖ್ಯಗುರುಗಳಾಗಿ ಪದೋನ್ನತಿ ಹೋದಿ ಹಡಗಲಿ ಶಾಲೆಗೆ ವರ್ಗಾವಣೆಗೊಂಡಿದ್ದರಿಂದ ಅವರನ್ನು ಗ್ರಾಮಸ್ಥರು ಆತ್ಮೀಯವಾಗಿ ಸ್ವಾಗತಿಸಿ ಸನ್ಮಾನಿಸಿದರು. ಈ ಸಂದರ್ಭದಲ್ಲಿ ಎಸ್‌ಡಿಎಂಸಿ ಅಧ್ಯಕ್ಷ ತಿಪ್ಪಣ್ಣ, ಮಸ್ಕಿ ಎಪಿಎಂಸಿ ನಿರ್ದೇಶಕ ದುರ್ಗಪ್ಪ ಕಟ್ಟಿಮನಿ, ಸಿ ಆರ್ ಸಿ ಶರಣಪ್ಪ ಮಾದರ್, ಶಿಕ್ಷಕಿ ಅನಿತಾ ಗೋಪಾಲ ಚವ್ಹಾಣ, ಅಂಮರೇಶ್ ವಿಠಲಪುರ್, ತಿಮ್ಮನಗೌಡ ದಳಪತಿ, ವೆಂಕನಗೌಡ , ಸಂತೋಷ್ ತುಗ್ಲಿ, ಶೇಖರ ಗೌಡ, ವೆಂಕಟೇಶ್ ದಾಸರ್, ವೀರೇಶ್ ಹಡಪದ, ಅಯ್ಯಪ್ಪ ಸೇರಿದಂತೆ ಅನೇಕರು ಇದ್ದರು.

## ಕಾಂಗ್ರೆಸ್ ಪಕ್ಷಕ್ಕೆ ಪರ್ಯಾಯ ಶಕ್ತಿ



**ಗಂಗಾವತಿ:** ತಮ್ಮ ಕುಟುಂಬವನ್ನು, ಕಾಂಗ್ರೆಸ್ ಪಕ್ಷದ ಕಾರ್ಯಕರ್ತರನ್ನು ಕಾಂಗ್ರೆಸ್ ಪಕ್ಷದ ಹೈಕಮಾಂಡ ನಿರ್ಲಕ್ಷ್ಯ ಮಾಡುತ್ತಿರುವದರ ವಿರುದ್ಧ ಹೈದ್ರಾಬಾದ್ ಕರ್ನಾಟಕ ಪ್ರದೇಶದಲ್ಲಿ ಕಾಂಗ್ರೆಸ್ ಪಕ್ಷಕ್ಕೆ ಪರ್ಯಾಯ ಸಂಘಟನೆ ಹುಟ್ಟುಹಾಕಿ ಮುಂಬರುವ ಚುನಾವಣೆಯನ್ನು ಎದುರಿಸುತ್ತೇವೆ ಎಂದು ವಿಧಾನಪರಿಷತ್ ಮಾಜಿ ಸದಸ್ಯ, ಕೆಪಿಸಿಸಿ ಕಾರ್ಯದರ್ಶಿ ಎಚ್.ಆರ್.ಶ್ರೀನಾಥ ಘೋಷಣೆ ಮಾಡಿದರು.

ಸರ್ವೇಶ್ ಹೋಟೆಲ್ ಸಭಾಂಗಣದಲ್ಲಿ ಮಂಗಳವಾರ ನಡೆಸಿದ ಸುದ್ದಿಗೋಷ್ಠಿಯಲ್ಲಿ ಗಂಗಾವತಿ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಸ್ಥಾನವನ್ನು, ಅಲ್ಪಸಂಖ್ಯಾತರ ಸಮುದಾಯದ ಕಾರ್ಯಕರ್ತರನಿಗೆ ನೀಡುವಂತೆ ಕೆಪಿಸಿಸಿ ಗೆ ಸೂಚಿಸಿದ್ದೆ, ಅದರಂತೆ ಪಕ್ಷದ ನಿಷ್ಠಾವಂತ ಕಾರ್ಯಕರ್ತ ಅಯೂಬ್ ಖಾನ್ ಅವರಿಗೆ ನೇಮಕ ಮಾಡಲು ಶಿಫಾರಸ್ಸು ಪತ್ರ ನೀಡಿದ್ದೆ. ಇದನ್ನು ಕಡೆಗಣಿಸಿ ನಾಗರಾಜ ನಂದಾಪುರ ನೇಮಕ ಆಗಿರುವದಕ್ಕೆ ತಮ್ಮ ಬೇಸರ ಹೊರ ಹಾಕಿದರು.

ಕಾಂಗ್ರೆಸ್ ನಲ್ಲಿ ಭಿನ್ನಾಭಿಪ್ರಾಯ ಸ್ಫೋಟ ಅಯ್ಯುಬ್ ಖಾನ್ ಅವರಿಗೆ ಕಾಂಗ್ರೆಸ್ ಬ್ಲಾಕ್ ಅಧ್ಯಕ್ಷ ಸ್ಥಾನಕ್ಕೆ ಶಿಫಾರಸ್ಸು ಮಾಡಿದ್ದೆ ಆದರೆ ಕಾಂಗ್ರೆಸ್ ಹೈಕಮಾಂಡ್ ಯಾವುದೇ ತೀರ್ಮಾನ ತೊಗೊಳ್ಳದೆ ನಾಗರಾಜ್ ನಂದಾಪುರ ಅವರಿಗೆ ಕಾಂಗ್ರೆಸ್ ಬ್ಲಾಕ್ ಅಧ್ಯಕ್ಷ ಸ್ಥಾನ ಕೊಟ್ಟಿರೋದು ಬೇಸರವಿಲ್ಲ ಆದರೆ ನಾನು ಕೊಟ್ಟಿರುವಂತಹ ವ್ಯಕ್ತಿಗೆ ಮಾಡಿಲ್ಲ ಇದು ಎಲ್ಲೋ ಒಂದು ಕಡೆ ಬೇಸರ ತಂದಿದೆ ಇದು ಒಂದು ವಿಷಯ ಅಲ್ಲ ಬಹಳಷ್ಟು ವಿಷಯದಲ್ಲಿ ನಮ್ಮ ನಿರ್ದೇಶನಗಳಾಗಲಿ ಬೂತ್ ಮಟ್ಟದ ಕೆಲಸಗಳಾಗಲಿ ಗಮನಕ್ಕೆ ತಾರದೆ ಮಾಡುತ್ತ ಇರೋದರಿಂದ ಶಿವರಾಜ್ ತಂಗಡಗಿ ಬಯ್ಯಾಪುರ ಅಮರೇಗೌಡ ಬಸವರಾಜ ರಾಯರೆಡ್ಡಿ ಜಿಲ್ಲೆಯ ಕಾಂಗ್ರೆಸ್ಸಿನ ಎಲ್ಲ ಲೀಡರ್ ಗಳಿಗೆ ತಕ್ಕ ಪಾಠ ಕಲಿಸುವ ಸ್ಥಿತಿ ನಿರ್ಮಾಣವಾಗುತ್ತದೆ ಎಂದು ವಿಧಾನ ಪರಿಷತ್ ಮಾಜಿ ಸದಸ್ಯ, ಕೆಪಿಸಿಸಿ ಕಾರ್ಯದರ್ಶಿ ಹೆಚ್ ಆರ್ ಶ್ರೀನಾಥ್ ಅವರು ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿ ಆಕ್ರೋಶ ವ್ಯಕ್ತಪಡಿಸಿದರು

ಸಂಸದ ರಾಜಶೇಖರ ಹಿಟ್ನಾಳ ಮತ್ತು ಜಿಲ್ಲಾ ಉಸ್ತುವಾರಿ ಸಚಿವ ಶಿವರಾಜ ತಂಗಡಗಿ ಗಂಗಾವತಿ ವಿಧಾನಸಭಾ ಕ್ಷೇತ್ರದಲ್ಲಿನ ಪಕ್ಷದ ಕಾರ್ಯಕರ್ತರನ್ನು, ಮುಖಂಡರನ್ನು ಕಡೆಗಾಣಿಸಿದ್ದಾರೆ. ಪಕ್ಷ ಸಂಘಟನೆ ಮಾಡುತ್ತಿಲ್ಲ, ಅವರುಗಳು ಇಲ್ಲಿಗೆ ಬಂದರೆ ಪಕ್ಷ ಕಟ್ಟಿ ಬೆಳೆಸಿದ ಮುಖಂಡರನ್ನು ಭೇಟಿ ಮಾಡದೆ ಕಡೆಗಣಿಸಿದ್ದಾರೆ ಎಂದು ಆರೋಪಿಸಿದರು.

ಗೋಷ್ಠಿಯಲ್ಲಿ ಕಾಂಗ್ರೆಸ್ ಮುಖಂಡರಾದ ಸುರೇಶಗೌರಪ್ಪ, ಗೌಳಿ ರಮೇಶ, ಮಹೇಶ ಸಾಗರ, ರಾಜಶೇಖರ ಮುಷ್ಟೂರು, ಅಯೂಬ್ ಖಾನ್, ನಾಜೀಮ, ರಾಮಣ್ಣ, ಶಬ್ಬೀರ, ಮಹಮ್ಮದ್ ಅಲಿ, ವೀರನಗೌಡ, ಜೋಗದ ವಸಂತನಾಯಕ ಮತ್ತು ಇತರರು ಇದ್ದರು.

## ಭೀಕರ ರಸ್ತೆ ಅಪಘಾತ: ಎರಡು ಎತ್ತುಗಳ ಸಾವು



**ಬಳ್ಳಾರಿ:** ತಾಲೂಕಿನ ಅಶೋಕ್ ನಗರ ಕ್ಯಾಂಪ್ ಸಮೀಪ ಇಂದು ಬೆಳಗಿನ ಜಾವ ಸಂಭವಿಸಿದ ಭೀಕರ ರಸ್ತೆ ಅಪಘಾತದಲ್ಲಿ ಎರಡು ಎತ್ತುಗಳು ಸ್ಥಳದಲ್ಲೇ ಸಾವನ್ನಪ್ಪಿದ್ದು, ಎತ್ತಿನ ಗಾಡಿ ಚಾಲಕ ಗಂಭೀರವಾಗಿ ಗಾಯಗೊಂಡ ಘಟನೆ ನಡೆದಿದೆ.

ಬುಧವಾರ ಬೆಳಗ್ಗೆ ಸುಮಾರು 5 ಗಂಟೆ ಸುಮಾರಿಗೆ ಈ ದುರ್ಘಟನೆ ಸಂಭವಿಸಿದೆ. ಅಕ್ರಮ ಮರಳು ಸಾಗಣೆ ಮಾಡಲಾಗುತ್ತಿದ್ದ ಎತ್ತಿನ ಗಾಡಿಗೆ ತೆಲಂಗಾಣ ಮೂಲದ ಖಿಖ 38 ಂ 2777 ಸಂಖ್ಯೆಯ ಕಾರು ವೇಗವಾಗಿ ಬಂದು ಡಿಕ್ಕಿ ಹೊಡೆದಿದೆ ಎಂದು ತಿಳಿದುಬಂದಿದೆ. ಅಪಘಾತದ ತೀವ್ರತೆಗೆ ಎತ್ತಿನ ಗಾಡಿ ಸಂಪೂರ್ಣ ಜಖಂಗೊಂಡಿದ್ದು, ಗಾಡಿಯಲ್ಲಿದ್ದ ಎರಡು ಎತ್ತುಗಳು ಸ್ಥಳದಲ್ಲೇ ಮೃತಪಟ್ಟಿವೆ.

ಘಟನೆಯಲ್ಲಿ ಗಂಭೀರವಾಗಿ ಗಾಯಗೊಂಡ ಎತ್ತಿನ ಗಾಡಿ ಚಾಲಕನನ್ನು ಸ್ಥಳೀಯರು ತಕ್ಷಣ ರಕ್ಷಿಸಿ ಸಮೀಪದ ಆಸ್ಪತ್ರೆಗೆ ದಾಖಲಿಸಿ ಚಿಕಿತ್ಸೆ ಕೊಡಿಸಿದ್ದಾರೆ. ಗಾಯಾಳುವಿನ ಸ್ಥಿತಿ ಗಂಭೀರವಾಗಿದೆ ಎಂದು ಮೂಲಗಳು ತಿಳಿಸಿವೆ.

ಅಪಘಾತ ಸಂಭವಿಸಿದ ಕೂಡಲೇ ಸ್ಥಳದಲ್ಲಿ ಕೆಲಕಾಲ ಆತಂಕದ ವಾತಾವರಣ ನಿರ್ಮಾಣವಾಗಿತ್ತು. ರಸ್ತೆ ಮಧ್ಯೆ ಎತ್ತುಗಳು ಮೃತಪಟ್ಟಿದ್ದರಿಂದ ವಾಹನ ಸಂಚಾರಕ್ಕೂ ತಾತ್ಕಾಲಿಕ ಅಡಚಣೆ ಉಂಟಾಯಿತು. ನಂತರ ಪೊಲೀಸರು ಸ್ಥಳಕ್ಕೆ ಆಗಮಿಸಿ ಮೃತ ಎತ್ತುಗಳನ್ನು ತೆರವುಗೊಳಿಸಿ ಸಂಚಾರವನ್ನು ಸುಗಮಗೊಳಿಸಿದರು.

ಪ್ರಾಥಮಿಕ ತನಿಖೆಯ ಪ್ರಕಾರ, ಎತ್ತಿನ ಗಾಡಿ ರಾಂಗ್ ರೂಟ್‌ನಲ್ಲಿ ಸಂಚರಿಸುತ್ತಿದ್ದೇ ಅಪಘಾತಕ್ಕೆ ಪ್ರಮುಖ ಕಾರಣವಾಗಿರಬಹುದು ಎಂದು ಶಂಕಿಸಲಾಗಿದೆ. ಜೊತೆಗೆ ಬೆಳಗಿನ ಜಾವ ಮಂಜು ಮತ್ತು ಕಡಿಮೆ ಬೆಳಕು ಕೂಡ ಅಪಘಾತಕ್ಕೆ ಕಾರಣವಾಗಿರಬಹುದೆಂದು ಪೊಲೀಸರು ಅಭಿಪ್ರಾಯಪಟ್ಟಿದ್ದಾರೆ.

ಘಟನೆಯ ಸಂಬಂಧ ಮೋಕ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದ್ದು, ಕಾರು ಚಾಲಕನ ವಿರುದ್ಧ ತನಿಖೆ ಮುಂದುವರಿದಿದೆ. ಅಕ್ರಮ ಮರಳು ಸಾಗಣೆ ಕುರಿತೂ ಪೊಲೀಸರು ಹೆಚ್ಚಿನ ಮಾಹಿತಿ ಕಲೆಹಾಕುತ್ತಿದ್ದಾರೆ. ಸ್ಥಳೀಯರು ಈ ಪ್ರದೇಶದಲ್ಲಿ ಅಕ್ರಮ ಮರಳು ಸಾಗಣೆ ಹೆಚ್ಚಾಗಿರುವ ಬಗ್ಗೆ ಆತಂಕ ವ್ಯಕ್ತಪಡಿಸಿ, ಅಧಿಕಾರಿಗಳು ಕಠಿಣ ಕ್ರಮ ಕೈಗೊಳ್ಳಬೇಕು ಎಂದು ಆಗ್ರಹಿಸಿದ್ದಾರೆ.

# ನೀಟ್ ಪರೀಕ್ಷೆಯ ಪ್ರಶ್ನೆ ಪತ್ರಿಕೆ ಸೋರಿಕೆ ಖಂಡನೀಯ

• **ಮಲ್ಲಮ್ಮ ನುಡಿ ವಾರ್ತೆ ಗಂಗಾವತಿ**



ಭಾರತದಲ್ಲಿ ವೈದ್ಯಕೀಯ ಶಿಕ್ಷಣವನ್ನು ಪಡೆಯುವ ಸಲುವಾಗಿ ವಿದ್ಯಾರ್ಥಿಗಳು ಹಗಲು ರಾತ್ರಿ ಎನ್ನದೇ ತಮ್ಮ ಅಮೂಲ್ಯವಾದ ಸಮಯವನ್ನು ಓದುವುದಕ್ಕೆ ಮೀಸಲಿಟ್ಟು, ಉನ್ನತ ಶಿಕ್ಷಣವನ್ನು ಪಡೆದುಕೊಳ್ಳುವ ಸಲುವಾಗಿ ರಾಷ್ಟ್ರೀಯ ಮಟ್ಟದ ಪ್ರವೇಶ ಪರೀಕ್ಷೆಯನ್ನು ಬರೆದಿರುತ್ತಾರೆ. ಆದರೆ ಸರ್ಕಾರದ ನಿರ್ಲಕ್ಷ್ಯದಿಂದ ಪ್ರಶ್ನೆ ಪತ್ರಿಕೆ ಸೋರಿಕೆಯಾಗಿ ವಿದ್ಯಾರ್ಥಿಗಳ ಮಾನಸಿಕ ಸ್ಥಿರತೆಗೆ ಧಕ್ಕೆಯುಂಟಾಗಿದೆ ಎಂದು ದಲಿತ ಸೇನೆ ಸಂಘಟನೆಯ ಕೊಪ್ಪಳ ಜಿಲ್ಲಾಧ್ಯಕ್ಷರಾದ ಉಡಚಪ್ಪ ಶ್ರೀರಾಮನಗರ ಕಳವಳ ವ್ಯಕ್ತಪಡಿಸಿದರು.

ಅವರು ಇಂದು ಮುಂಬರುವ ಜೂನ್–21 ರಂದು ನಡೆಯಲಿರುವ ಮರುಪರೀಕ್ಷೆಗೆ ಕಟ್ಟುನಿಟ್ಟಿನ ಕ್ರಮಗಳನ್ನು ಕೈಗೊಂಡು ಪೊಲೀಸ್ ಭದ್ರತೆಯೊಂದಿಗೆ ಪರೀಕ್ಷೆ ನಡೆಸಲು ಸರ್ಕಾರಕ್ಕೆ ಆಗ್ರಹಿಸಿ ತಹಶೀಲ್ದಾರರ ಮುಖಾಂತರ ಮುಖ್ಯಮಂತ್ರಿಗಳಿಗೆ ಮನವಿ ಸಲ್ಲಿಸಿ ಮಾತನಾಡಿದರು. ಪರೀಕ್ಷಾ ಕೆಲಸದಲ್ಲಿ ಕಾರ್ಯನಿರ್ವಹಿಸುವ ಅಧಿಕಾರಿಗಳು ನೇರವಾಗಿ ಇಂತಹ ಕೃತ್ಯದಲ್ಲಿ ತೊಡಗಿ ಹಣದ ಆಸೆಗೆ ದೇಶಾಧ್ಯಂತ ಕಷ್ಟಪಟ್ಟು ಓದಿದ ಮಕ್ಕಳಿಗೆ ಅನ್ಯಾಯವಾಗುವ ರೀತಿಯಲ್ಲಿ ನಡೆದುಕೊಂಡು ಕಾನೂನಿನ ವಿರುದ್ಧವಾಗಿ ಕೆಲಸ ನಿರ್ವಹಿಸಿ ಪ್ರಶ್ನೆ ಪತ್ರಿಕೆಗಳನ್ನು ಸೋರಿಕೆ ಮಾಡಿರುತ್ತಾರೆ. ವಿದ್ಯಾರ್ಥಿಗಳು ಸರಕಾರಿ ಮತ್ತು ಖಾಸಗಿ ಕಾಲೇಜುಗಳಲ್ಲಿ ಎಂ.ಬಿ.ಬಿ.ಎಸ್, ಬಿ.ಡಿ.ಎಸ್ ಮತ್ತು ಆಯುಷ್ ನಂತಹ ವೈದ್ಯಕೀಯ ಪದವಿಗಳನ್ನು ಪಡೆಯುವುದಕ್ಕಾಗಿ ಕಷ್ಟಪಟ್ಟು ಓದಿದ ಮಕ್ಕಳಿಗೆ ಇಂದಿನ ದಿನಮಾನಗಳಲ್ಲಿ ಸರ್ಕಾರಗಳು ಅತ್ಯಂತ ಕಠಿಣವಾದ ಮತ್ತು ಶಿಸ್ತುಬದ್ಧ ಕಾನೂನಿಡಿಯಲ್ಲಿ ಪರೀಕ್ಷೆ ನಡೆಸಿ ವಿದ್ಯಾರ್ಥಿಗಳಿಗೆ ನ್ಯಾಯ ಒದಗಿಸುವುದು ಅತ್ಯಂತ ಜವಾಬ್ದಾರಿಯುತ ಕರ್ತವ್ಯವಾಗಿರುತ್ತದೆ. ಕೇಂದ್ರದ ಶಿಕ್ಷಣ ಸಚಿವರಾದ ಶ್ರೀ ಧರ್ಮೇಂದ್ರ ಪ್ರಧಾನ್ ರವರು ಲಕ್ಷಾಂತರ ವಿದ್ಯಾರ್ಥಿಗಳ ಜೀವನದಲ್ಲಿ ಆಟವಾಡಿರುತ್ತಾರೆ. ಮುಂದಿನ ದಿನಮಾನಗಳಲ್ಲಿ ಮಾನ್ಯ ಪ್ರಧಾನಮಂತ್ರಿಗಳು, ಇದರ ಬಗ್ಗೆ ಸೂಕ್ತ ತನಿಖೆ ನಡೆಸಿ ಅಪರಾಧಿಗಳಿಗೆ ಕಠಿಣವಾದ ಶಿಕ್ಷೆಯನ್ನು ವಿಧಿಸಬೇಕೆಂದು ದಲಿತ ಸೇನೆ ಆಗ್ರಹಿಸುತ್ತದೆ. ಮೇ–3, 2026 ರಂದು ನಡೆದಿದ್ದ ರಾಷ್ಟ್ರೀಯ ಅರ್ಹತೆ ಮತ್ತು ಪ್ರವೇಶ ಪರೀಕ್ಷೆಯ ಪ್ರಶ್ನೆ ಪತ್ರಿಕೆ ಸೋರಿಕೆಯಾಗಿರುವುದು ಸಾಬೀತಾದ ಹಿನ್ನೆಲೆಯಲ್ಲಿ ನ್ಯಾಷನಲ್ ಟೆಸ್ಟಿಂಗ್ ಏಜೆನ್ಸಿ ಪರೀಕ್ಷೆಯನ್ನು ರದ್ದುಗೊಳಿಸಿದ್ದು, ಈ ಕುರಿತಂತೆ ಸಿ.ಬಿ.ಐ ತನಿಖೆ ನಡೆಯಬೇಕೆಂದು ಮತ್ತು ಮರುಪರೀಕ್ಷೆಯನ್ನು ಜೂನ್–21, 2026 ರಂದು ಪೆನ್ ಮತ್ತು ಪೇಪರ್ ಮಾದರಿಯಲ್ಲಿ ನಡೆಯುವ ಪರೀಕ್ಷೆಯಲ್ಲಾದರೂ ಯಾವುದೇ ರೀತಿಯ ಲೋಪದೋಷಗಳು ಆಗದಂತೆ ಮುಂಜಾಗ್ರತೆ ವಹಿಸಿ ಕಟ್ಟುನಿಟ್ಟಿನ ಪೊಲೀಸ್ ಬಂದೋಬಸ್ತ್ ದೊಂದಿಗೆ ಪರೀಕ್ಷೆ ನಡೆಸಬೇಕು. ರಾಷ್ಟ್ರಾದ್ಯಂತ ನಡೆಯುವ ವಿದ್ಯಾರ್ಥಿಗಳ ಭವಿಷ್ಯದ ಪರೀಕ್ಷೆಯನ್ನು ಯಾವುದೇ ಲೋಪ ದೋಷಗಳು ಇಲ್ಲದಂತೆ ಕೇಂದ್ರದ ಶಿಕ್ಷಣ ಸಚಿವರಾದ ಶ್ರೀ ಧರ್ಮೇಂದ್ರ ಪ್ರಧಾನ್‌ರವರು ಮುಂಜಾಗ್ರತೆಯನ್ನು ವಹಿಸಿ ಪರೀಕ್ಷೆ ನಡೆಸಬೇಕೆಂದು ನಮ್ಮ ದಲಿತ ಸೇನೆ ಸಂಘಟನೆ ಒತ್ತಾಯಿಸುತ್ತಿದೆ ಎಂದರು.

ಈ ಸಂದರ್ಭದಲ್ಲಿ ದಲಿತ ಸೇನೆ ಸಂಘಟನೆಯ ಜಿಲ್ಲಾ ಉಪಾಧ್ಯಕ್ಷರಾದ ಶಿವಕುಮಾರ ಡಿ., ಗಂಗಾವತಿ ತಾಲೂಕ ಅಧ್ಯಕ್ಷ ಮಂಜುನಾಥ ಜಿ., ಉಪಾಧ್ಯಕ್ಷರಾದ ಪರಶುರಾಮ, ದುರುಗಪ್ಪ ಪ್ರಗತಿನಗರ, ಕೃಷ್ಣ, ಶಿವ, ಸಂಘಟನಾ ಸದಸ್ಯರಾದ ರಾಜು, ಖಜಾಂಚಿಯಾದ ಜಗದೀಶ ಸೇರಿದಂತೆ ಮತ್ತಿತರರು ಭಾಗವಹಿಸಿದ್ದರು.

## ಪೊಲೀಸ್ ಇಲಾಖೆಯಿಂದ ರಾಷ್ಟ್ರೀಯ ಏಕತಾ ಓಟ




• **ಮಲ್ಲಮ್ಮ ನುಡಿ ವಾರ್ತೆ ಮುದಗಲ್**

ಸರ್ದಾರ್ ವಲ್ಲಭಬಾಯಿ ಪಟೇಲ್ ಅವರ ಜನ್ಮದಿನ ಹಾಗೂ ರಾಷ್ಟ್ರೀಯ ಐಕ್ಯತಾ ದಿನಾಚರಣೆಯ ಅಂಗವಾಗಿ ಬುದುವಾರ ಪಟ್ಟಣದ ಪೊಲೀಸ್ ಠಾಣೆವತಿಯಿಂದ ರಾಷ್ಟ್ರೀಯ ಏಕತಾ ಓಟ ಕಾರ್ಯಕ್ರಮ ಜರುಗಿತು.

ಆಟೋ ನಿಲ್ದಾಣದಲ್ಲಿ ಪಿಎವೆಂಕಟೇಶ ಮಾಡಗೇರಿ ಮಾತನಾಡಿ ದೇಶದ ಉಕ್ಕಿನ ಮನುಷ್ಯ ಎಂದೇ ಖ್ಯಾತರಾದ ಸರ್ದಾರ್ ವಲ್ಲಭಭಾಯಿ ಪಟೇಲ್ ಅವರ ಜನ್ಮದಿನದ ಸ್ಮರಣಾರ್ಥವಾಗಿ ಮತ್ತು ದೇಶದ ಏಕತೆ, ಸಮಗ್ರತೆಯ ಸಂದೇಶವನ್ನು ಸಾರಲು ಈ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದೆ. ಸಾರ್ವಜನಿಕರೆಲ್ಲರೂ ಕಾನೂನು ನಿಯಮಗಳನ್ನು ಪಾಲಿಸಬೇಕು. ಪ್ರತಿಯೊಬ್ಬರೂ ಕಾನೂನಿಗೆ ಗೌರವ ಕೊಟ್ಟು ನಡೆಯಬೇಕು. ಕಾನೂನು ನಮ್ಮನ್ನು ಎಂದಿಗೂ ರಕ್ಷಿಸುತ್ತದೆ. ಮಾನವನ ಪ್ರತಿ ಹಂತದಲ್ಲೂ ಎಲ್ಲಾ ಚಟುವಟಿಕೆಯಲ್ಲೂ ಕಾನೂನಿದೆ. ಇಂತಹ ಕಾನೂನಿನ ಬಗ್ಗೆ ಪ್ರತಿಯೊಬ್ಬರು ಅರಿಯಬೇಕು. ಜನರಿಗೆ ಕಾನೂನು ಪಾಲನೆ ಬಗ್ಗೆ ತಿಳಿಸುವ ಮೂಲಕ ಸುಧಾರಿತ ಸಮಾಜ ನಿರ್ಮಾಣ ಮಾಡುವಲ್ಲಿ ಪಾತ್ರ ವಹಿಸಬೇಕು ಎಂದರು.

ಅಮರೇಶ ಹೆಚ್ ಸಿ, ರದ್ರಗೌಡ ಪಿಸಿ, ಹೋಮ್ ಗಾರ್ಡ್ಸ್ ಸೇರಿದಂತೆ ಆಟೋ ಚಾಲಕರು ಹಾಗೂ ಸಾರ್ವಜನಿಕರಿದ್ದರು.

## ರಸಗೊಬ್ಬರ ವಿತರಣೆ ಸಮರ್ಪಕವಾಗಿ ನಡೆಯಲಿ

• **ಮಲ್ಲಮ್ಮ ನುಡಿ ವಾರ್ತೆ ಕೊಪ್ಪಳ**

ರೈತರಿಗೆ ಅನುಕೂಲವಾಗುವಂತೆ ಕೊಪ್ಪಳ ಜಿಲ್ಲೆಯಲ್ಲಿ ರಸಗೊಬ್ಬರ ವಿತರಣೆ ಪ್ರಕ್ರಿಯೆಯನ್ನು ಕೂಡಲೇ ಆರಂಭಿಸಿ, ಅಚ್ಚುಕಟ್ಟಾಗಿ ನಿರ್ವಹಣೆ ಮಾಡಬೇಕು ಎಂದು ಜಿಲ್ಲಾಧಿಕಾರಿಗಳಾದ ಡಾ.ಸುರೇಶ ಬಿ ಇಟ್ನಾಳ ಅವರು ಕೃಷಿ ಇಲಾಖೆಯ ಅಧಿಕಾರಿಗಳು ಮತ್ತು ವಿತರಕರಿಗೆ ಕಟ್ಟುನಿಟ್ಟಿನ ನಿರ್ದೇಶನ ನೀಡಿದರು.



ಮೇ 19ರಂದು, ಕೃಷಿ ಇಲಾಖೆಯ ಜಂಟಿ ಕೃಷಿ ನಿರ್ದೇಶಕರು, ಉಪ ನಿರ್ದೇಶಕರು, ಕೊಪ್ಪಳ, ಗಂಗಾವತಿ, ಕುಷ್ಟಗಿ, ಯಲಬುರ್ಗಾ, ಕಾರಟಗಿ, ಕುಕನೂರ, ಕನಕಗಿರಿ ತಾಲೂಕಿನ ಸಹಾಯಕ ಕೃಷಿ ನಿರ್ದೇಶಕರು, ಮಾರ್ಕೆಟಿಂಗ್ ಅಧಿಕಾರಿಗಳು, ರಸಗೊಬ್ಬರ ವಿತರಕ ಸಂಘದ ಅಧ್ಯಕ್ಷರು ಮತ್ತು ಕೃಷಿ ಇಲಾಖೆಯ ಇನ್ನಿತರ ಅಧಿಕಾರಿಗಳೊಂದಿಗೆ ಗೂಗಲ್ ಮೀಟ್ ನಡೆಸಿ ಅವರು ಮಾತನಾಡಿದರು.

ಕೊಪ್ಪಳ ಜಿಲ್ಲೆಯಲ್ಲಿ ಮುಂಗಾರು ಹಂಗಾಮಿನ ಮಳೆಗಳು ವಾಡಿಕೆಗಿಂತ ಮುನ್ನವೇ ಆರಂಭವಾಗಿವೆ. ಜಿಲ್ಲೆಯಲ್ಲಿ ಈಗಾಗಲೇ ಎರಡ್ಮೂರು ಬಾರಿ ಬಿರುಸಿನ ಮಳೆ ಬಿದ್ದಿರುವುದರಿಂದ ರೈತ ಸಮುದಾಯದಿಂದ ಬಿತ್ತನೆ ಕಾರ್ಯಗಳು ಚುರುಕುಗೊಂಡಿವೆ. ಆದ್ದರಿಂದ ನೀರಾವರಿ ಆಶ್ರಿತ ರೈತರು ಸೇರಿದಂತೆ ಬಿತ್ತನೆ ಕಾರ್ಯ ಆರಂಭಿಸುವ ಎಲ್ಲ ರೈತರಿಗೆ ಯಾವುದೇ ರೀತಿಯಲ್ಲಿ ತೊಂದರೆಯಾಗದಂತೆ ಜಿಲ್ಲಾದ್ಯಂತ ರಸಗೊಬ್ಬರ ವಿತರಣೆ ಕಾರ್ಯವು ಶಿಸ್ತುಬದ್ಧವಾಗಿ ನಡೆಯಬೇಕು.

ಜಿಲ್ಲೆಯ ಪ್ರತಿಯೊಬ್ಬ ರೈತರಿಗೆ ಅನುಕೂಲವಾಗುವಂತೆ ಗೊಬ್ಬರ ವಿತರಣೆಯಲ್ಲಿ ಪಾರದರ್ಶಕತೆ ಕಾಯ್ದುಕೊಳ್ಳಬೇಕು. ಯಾವುದೇ ಕಾರಣಕ್ಕೂ ದುರುಪಯೋಗವಾಗಬಾರದು. ಜಿಲ್ಲೆಯಲ್ಲಿ ಯೂರಿಯಾ ಗೊಬ್ಬರಕ್ಕೆ ಯಾವುದೇ ರೀತಿಯ ಕೊರತೆ ಇಲ್ಲ. ಇಂದು ರಸಗೊಬ್ಬರ ಸಿಗದಿದ್ದರೂ ನಾಳೆಯಾದರು ತಪ್ಪದೇ ಲಭ್ಯವಾಗುತ್ತದೆ ಎಂಬ ಮಾಹಿತಿಯನ್ನು ರೈತರಿಗೆ ನೀಡಬೇಕು. ರಸಗೊಬ್ಬರ ಸಿಗುವುದಿಲ್ಲ ಎಂದು ಯಾವುದೇ ಭಾಗದ ರೈತರು ಆತಂಕಕ್ಕೆ ಒಳಗಾಗಬಾರದು. ಆದ್ದರಿಂದ ರಸಗೊಬ್ಬರದ ಅವಶ್ಯಕತೆ ಇರುವ ಎಲ್ಲ ರೈತರಿಗೂ ರಸಗೊಬ್ಬರವು ಸಕಾಲಕ್ಕೆ ಲಭ್ಯವಾಗುವಂತೆ ಸೂಕ್ತ ಮೇಲ್ವಿಚಾರಣೆ ಮಾಡಬೇಕು ಎಂದು ಜಿಲ್ಲಾಧಿಕಾರಿಗಳು ನಿರ್ದೇಶನ ನೀಡಿದರು.

2026–27ನೇ ಸಾಲಿನ ಮುಂಗಾರು ಹಂಗಾಮಿನ ಅವಧಿ ಏಪ್ರೀಲ್ 2026ರಿಂದ ಸೆಪ್ಟೆಂಬರ್‌ರವರೆಗೆ ಕೊಪ್ಪಳ ಜಿಲ್ಲೆಯಲ್ಲಿ ಯೂರಿಯಾ ರಸಗೊಬ್ಬರಕ್ಕೆ 49,451 ಮೆಟ್ರಿಕ್ ಟನ್, ಡಿಎಪಿಗೆ 17,817 ಮೆಟ್ರಿಕ್ ಟನ್, ಎಂಒಪಿಗೆ 5758 ಮೆಟ್ರಿಕ್ ಟನ್, ಕಾಂಪ್ಲೆಕ್ಸ್‌ಗೆ 43,446 ಮೆಟ್ರಿಕ್ ಟನ್ ಮತ್ತು ಎಸ್‌ಎಸ್‌ಪಿಗೆ 1231 ಮೆಟ್ರಿಕ್ ಟನ್ ಬೇಡಿಕೆ ಇದೆ. ಮೇ 19ರವರೆಗೆ ಜಿಲ್ಲೆಯಲ್ಲಿ 12,041 ಮೆಟ್ರಿಕ್ ಟನ್ ಯೂರಿಯಾ, 5795 ಮೆಟ್ರಿಕ್ ಟನ್ ಡಿಎಪಿ, 1014 ಮೆಟ್ರಿಕ್ ಟನ್, ಎಂಒಪಿ, 18269 ಮೆಟ್ರಿಕ್ ಟನ್ ಕಾಂಪ್ಲೆಕ್ಸ್, 535 ಮೆಟ್ರಿಕ್ ಟನ್ ಎಸ್‌ಎಸ್‌ಪಿ ದಾಸ್ತಾನು ಇದೆ ಎಂದು ಕೊಪ್ಪಳ ಜಿಲ್ಲೆಯ ಜಂಟಿ ಕೃಷಿ ನಿರ್ದೇಶಕರು ಸಭೆಗೆ ಮಾಹಿತಿ ನೀಡಿದರು. ಮೇ 20ನೇ ತಾರೀಖಿನಿಂದಲೇ ಕೊಪ್ಪಳ ಜಿಲ್ಲೆಯಲ್ಲಿ ರಸಗೊಬ್ಬರ ವಿತರಣೆ ಪ್ರಕ್ರಿಯೆಯನ್ನು ಆರಂಭಿಸಲು ಅಗತ್ಯ ಕ್ರಮವಹಿಸುವುದಾಗಿ ಅವರು ತಿಳಿಸಿದರು.

# ವಸತಿ ಶಾಲಾ ಕಾಲೇಜುಗಳ ಹೊರ ಗುತ್ತಿಗೆ ಸಿಬ್ಬಂದಿಗಳ ಮುಷ್ಕರ ಆರಂಭ

• **ಮಲ್ಲಮ್ಮ ನುಡಿ ವಾರ್ತೆ ಹಗರಿಬೊಮ್ಮನಹಳ್ಳಿ**



ತಮಗೆ ಕನಿಷ್ಠ ವೇತನ ರೂ 36000 ಜಾರಿಗೆ ಆಗ್ರಹಿಸಿ, ನಿವೃತ್ತಿಯವರೆಗೆ ಸೇವಾ ಭದ್ರತೆಗೆ, ತಮ್ಮ ಸೇವಾ ಖಾಯಮಾತಿಗಾಗಿ ಒತ್ತಾಯಿಸಿ ಕರ್ನಾಟಕ ರಾಜ್ಯ ಸರಕಾರಿ ಹಾಸ್ಟೆಲ್ ಮತ್ತು ವಸತಿಶಾಲಾ ಹೊರ ಗುತ್ತಿಗೆ ನೌಕರರು ಮೇ 25ರಿಂದ ಬೆಂಗಳೂರಿನ ಫ್ರೀಡಮ್ ಪಾರ್ಕಿನಲ್ಲಿ ಅನಿರ್ದಿಷ್ಟ ಮುಷ್ಕರ ಆರಂಭಿಸಲಿದ್ದಾರೆ ಎಂದು ಸಂಘದ ಜಿಲ್ಲಾಧ್ಯಕ್ಷ ಮರಡಿ ಜಂಬಯ್ಯ ನಾಯಕ ಹೇಳಿದರು.

ಇಲ್ಲಿನ ಅಂಬೇಡ್ಕರ್ ಭವನದಲ್ಲಿ ಇಂದು ನಡೆದ ಮೂರು ತಾಲೂಕುಗಳ ಸಂಘದ ಪದಾಧಿಕಾರಿಗಳ ಸಭೆಯಲ್ಲಿ ಅವರು ಮಾತನಾಡಿದರು.

ರಾಜ್ಯದ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಸಮಾಜ ಕಲ್ಯಾಣ ಇಲಾಖೆ, ಅಲ್ಪಸಂಖ್ಯಾತ ಕಲ್ಯಾಣ ಇಲಾಖೆ, ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆ ಹಾಗೂ ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಹಾಸ್ಟೆಲ್ ಗಳಲ್ಲಿ ಕಳೆದ 15–20 ವರ್ಷಗಳಿಂದ ಹೊರ ಗುತ್ತಿಗೆ ನೌಕರರಾಗಿ ಅಡುಗೆಯವರಾಗಿ, ಅಡುಗೆ ಸಹಾಯಕರಾಗಿ, ಸ್ವಚ್ಛತಾಗಾರರಾಗಿ, ಕಾವಲುಗಾರರಾಗಿ, ಅಟೆಂಡರ್ಗಳಾಗಿ, ಕಂಪ್ಯೂಟರ್ ಅಸಪರೇಟರುಗಳಾಗಿ, ಡಾಟಾ ಎಂಟ್ರಿ ಅಸಪರೇಟರುಗಳಾಗಿ , ಅತಿಥಿ ಶಿಕ್ಷಕರಾಗಿ ಜೀವನಕ್ಕೆ ಯಾವುದೇ ಭದ್ರತಾ ಇಲ್ಲದೇ ದುಡಿಯುತ್ತಾ ಬಂದಿದ್ದು ತಮಗೆ ಕನಿಷ್ಠ ವೇತನ 36000 ರೂಪಾಯಿಗಳನ್ನು ಕೊಡಬೇಕು, ತಮ್ಮ ನಿವೃತ್ತಿ ಅವಧಿಯವರೆಗೂ ಸೇವಾ ಭದ್ರತೆ ನೀಡಬೇಕು, ಕೆಲಸ ಮಾಡುವ ಸ್ಥಳದಲ್ಲೇ ಖಾಯಂ ಮಾಡಬೇಕು ಹಾಗೂ ತಮ್ಮ ಇತರ ವಿವಿಧ ಬೇಡಿಕೆಗಳನ್ನು ಈಡೇರಿಸಲು ಸರಕಸರವನ್ನು ಆಗ್ರಹಿಸಲು ತಮ್ಮ ಸಂಘ ಮೇ 25ರಿಂದ ಬೆಂಗಳೂರಿನ ಫ್ರೀಡಂ ಪಾರ್ಕಿನಲ್ಲಿ ಅನಿರ್ಧಿಷ್ಟ ಮುಷ್ಕರ ಆರಂಭಿಸಲಿದೆ ಎಂದೂ ಅವರು ಹೇಳಿದರು.

ಅನಿರ್ದಿಷ್ಟ ಮುಷ್ಕರದ ಪೂರ್ವಭಾವಿಯಾಗಿ ಇಂದು ಇಲ್ಲಿನ ಅಂಬೇಡ್ಕರ್ ಭವನದಲ್ಲಿ ಹಗರಿಬೊಮ್ಮನಹಳ್ಳಿ, ಹಡಗಲಿ ಹಾಗೂ ಹರಪನಹಳ್ಳಿ ತಾಲೂಕುಗಳ ಸಂಘದ ಪದಾಧಿಕಾರಿಗಳ ಸಭೆಯು ಮೇ 25ರಿಂದ ಆರಂಭವಾಗುವ ಅನಿರ್ದಿಷ್ಟ ಮುಷ್ಕರವನ್ನು ಯಶಸ್ವಿಯಾಗಿ ಮಾಡಲು ತೀರ್ಮಾನಿಸಿತು ಎಂದು ಅವರು ಹೇಳಿದರು.

ಇಂದಿನ ಸಭೆಯನ್ನು ಉದ್ದೇಶಿಸಿ ಕರ್ನಾಟಕ ರಾಜ್ಯ ಅಂಗವಿಕಲರು ಹಾಗೂ ಪಾಲಕರ ಒಕ್ಕೂಟದ ರಂಗಪ್ಪ ದಾಸರ್, ಜನವಾದಿ ಮಹಿಳಾ ಸಂಘಟನೆಯ ವಿನೋದ ಹಾಗೂ ನೌಕರರ ಒಕ್ಕೂಟದ ರಂಗನಾಥ ಹವಲ್ದಾರ್ ಮಾತನಾಡಿದರು.

# ಆನ್‌ಲೈನ್ ಔಷಧ ಮಾರಾಟ, ವ್ಯಾಪಾರಿಗಳ ಆಕ್ರೋಶ

• **ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ**




ಆನ್‌ಲೈನ್ ಮೂಲಕ ಔಷಧಗಳ ಮಾರಾಟವನ್ನು ನಿಯಂತ್ರಿಸುವಂತೆ ಆಗ್ರಹಿಸಿ ಅಖಿಲ ಭಾರತ ಔಷಧ ವ್ಯಾಪಾರಿಗಳ ಸಂಘ ಕರೆ ನೀಡಿದ್ದ ರಾಷ್ಟ್ರವ್ಯಾಪಿ ಮೆಡಿಕಲ್ ಶಾಪ್ ಬಂದ್‌ಗೆ ಬಳ್ಳಾರಿಯಲ್ಲಿ ಬುಧವಾರ ಉತ್ತಮ ಪ್ರತಿಕ್ರಿಯೆ ವ್ಯಕ್ತವಾಯಿತು. ನಗರದ ಪ್ರಮುಖ ವಾಣಿಜ್ಯ ಪ್ರದೇಶಗಳು ಸೇರಿದಂತೆ ಹಲವು ಭಾಗಗಳಲ್ಲಿ ಮೆಡಿಕಲ್ ಅಂಗಡಿಗಳು ಸ್ವಯಂಪ್ರೇರಿತವಾಗಿ ಬಂದ್ ಆಗಿದ್ದವು.

ನಗರದ ಗಾಂಧಿನಗರ, ಕೌಲಬಜಾರ್, ಬೆಂಗಳೂರು ರಸ್ತೆ, ಪಾರ್ವತಿ ನಗರ, ಮೋಕಾ ರಸ್ತೆ ಸೇರಿದಂತೆ ವಿವಿಧ ಪ್ರದೇಶಗಳ ಔಷಧ ಮಳಿಗೆಗಳು ದಿನಪೂರ್ತಿ ಮುಚ್ಚಲ್ಪಟ್ಟಿದ್ದರಿಂದ ಸಾರ್ವಜನಿಕರಿಗೆ ಕೆಲಕಾಲ ಔಷಧ ಖರೀದಿಯಲ್ಲಿ ತೊಂದರೆ ಎದುರಾಯಿತು. ವಿಶೇಷವಾಗಿ ದಿನನಿತ್ಯ ಔಷಧ ಸೇವಿಸುವ ರೋಗಿಗಳು ಹಾಗೂ ಹಿರಿಯ ನಾಗರಿಕರು ಪರದಾಡುವ ಪರಿಸ್ಥಿತಿ ನಿರ್ಮಾಣವಾಗಿತ್ತು. ಆದರೆ ತುರ್ತು ವೈದ್ಯಕೀಯ ಸೇವೆಗೆ ಅಡಚಣೆ ಆಗದಂತೆ ಆಸ್ಪತ್ರೆಗಳ ಒಳಾಂಗಣದಲ್ಲಿರುವ ಕೆಲವು ಮೆಡಿಕಲ್ ಮಳಿಗೆಗಳನ್ನು ತೆರೆಯಲು ಅವಕಾಶ ನೀಡಲಾಗಿತ್ತು.

ಆನ್‌ಲೈನ್ ಮೂಲಕ ಔಷಧ ಮಾರಾಟ ಹೆಚ್ಚುತ್ತಿರುವುದರಿಂದ ಸಣ್ಣ ಹಾಗೂ ಮಧ್ಯಮ ಮಟ್ಟದ ಔಷಧ ವ್ಯಾಪಾರಿಗಳಿಗೆ ದೊಡ್ಡ ಮಟ್ಟದ ಹೊಡೆತ ಬೀಳುತ್ತಿದೆ ಎಂದು ವ್ಯಾಪಾರಿಗಳು ಆಕ್ರೋಶ ವ್ಯಕ್ತಪಡಿಸಿದರು. ವೈದ್ಯರ ಸಲಹೆ ಇಲ್ಲದೆ ಔಷಧಗಳನ್ನು ಖರೀದಿಸುವ ಪ್ರವೃತ್ತಿ ಹೆಚ್ಚುತ್ತಿರುವುದು ಸಾರ್ವಜನಿಕರ ಆರೋಗ್ಯದ ಮೇಲೆ ದುಷ್ಪರಿಣಾಮ ಬೀರುವ ಸಾಧ್ಯತೆ ಇದೆ ಎಂದು ಅವರು ಆತಂಕ ವ್ಯಕ್ತಪಡಿಸಿದರು.

ಆನ್‌ಲೈನ್ ಮಾರಾಟದಲ್ಲಿ ಅಗತ್ಯ ನಿಯಂತ್ರಣ ಇಲ್ಲದಿರುವುದರಿಂದ ನಕಲಿ ಔಷಧಿಗಳ ವಹಿವಾಟು ಹೆಚ್ಚುವ ಸಾಧ್ಯತೆ ಇದ್ದು, ಇದರಿಂದ ರೋಗಿಗಳ ಜೀವಕ್ಕೂ ಅಪಾಯ ಉಂಟಾಗಬಹುದು ಎಂದು ವ್ಯಾಪಾರಿಗಳು ಎಚ್ಚರಿಸಿದರು. ಔಷಧ ವಿತರಣೆಯಲ್ಲಿ ಪಾರದರ್ಶಕತೆ ಕಾಪಾಡಬೇಕು, ಪರವಾನಗಿ ಇಲ್ಲದೇ ನಡೆಯುತ್ತಿರುವ ಮಾರಾಟವನ್ನು ಕಟ್ಟುನಿಟ್ಟಾಗಿ ತಡೆಯಬೇಕು ಹಾಗೂ ಸರ್ಕಾರ ಔಷಧ ವ್ಯಾಪಾರಿಗಳ ಹಿತಾಸಕ್ತಿಯನ್ನು ರಕ್ಷಿಸುವ ಕ್ರಮ ಕೈಗೊಳ್ಳಬೇಕು ಎಂದು ಒತ್ತಾಯಿಸಿದರು.

ಇದಲ್ಲದೆ, ಕಾರ್ಪೊರೇಟ್ ಕಂಪನಿಗಳು ನೀಡುತ್ತಿರುವ ಅತಿಯಾದ ರಿಯಾಯಿತಿಯಿಂದ ಸ್ಥಳೀಯ ಮೆಡಿಕಲ್ ಅಂಗಡಿಗಳ ವ್ಯವಹಾರ ಕುಂಠಿತವಾಗುತ್ತಿದೆ ಎಂದು ಆರೋಪಿಸಿದ ವ್ಯಾಪಾರಿಗಳು, ಸಣ್ಣ ವ್ಯಾಪಾರಿಗಳ ಉಳಿವಿಗಾಗಿ ಸರ್ಕಾರ ವಿಶೇಷ ನೀತಿ ರೂಪಿಸಬೇಕು ಎಂದು ಮನವಿ ಮಾಡಿದರು.

ಇದು ಕೇವಲ ವ್ಯಾಪಾರಿಗಳ ಹೋರಾಟವಲ್ಲ; ಸಾರ್ವಜನಿಕರ ಆರೋಗ್ಯ ಭದ್ರತೆಗಾಗಿ ನಡೆಸುತ್ತಿರುವ ಹೋರಾಟವಾಗಿದೆ ಎಂದು ಔಷಧಿ ಅಂಗಡಿ ಮಾಲೀಕರು ತಿಳಿಸಿದರು. ಔಷಧ ಮಾರಾಟ ವ್ಯವಸ್ಥೆಯಲ್ಲಿ ನಿಯಂತ್ರಣ ಮತ್ತು ಪಾರದರ್ಶಕತೆ ಕಾಪಾಡುವುದು ಸರ್ಕಾರದ ಜವಾಬ್ದಾರಿಯಾಗಿದ್ದು, ನಮ್ಮ ಬೇಡಿಕೆಗಳಿಗೆ ಸ್ಪಂದಿಸದಿದ್ದರೆ ಮುಂದಿನ ದಿನಗಳಲ್ಲಿ ಹೋರಾಟವನ್ನು ಮತ್ತಷ್ಟು ತೀವ್ರಗೊಳಿಸಲಾಗುವುದು ಎಂದು ಎಚ್ಚರಿಸಿದರು.

ಮುಷ್ಕರ ಹಿನ್ನೆಲೆಯಲ್ಲಿ ನಗರದ ಹಲವೆಡೆ ಜನರು ಪರ್ಯಾಯವಾಗಿ ಆಸ್ಪತ್ರೆಗಳ ಔಷಧ ಮಳಿಗೆಗಳತ್ತ ಮುಖ ಮಾಡಿದ್ದು ಕಂಡುಬಂತು. ಕೆಲವೆಡೆ ಬೆಳಿಗ್ಗೆ ಔಷಧ ಖರೀದಿಸಲು ಬಂದ ಸಾರ್ವಜನಿಕರು ಅಂಗಡಿಗಳು ಬಂದ್ ಆಗಿರುವುದನ್ನು ನೋಡಿ ಹಿಂದಿರುಗಿದ ದೃಶ್ಯಗಳು ಕಂಡುಬಂದವು. ಆದರೂ ತುರ್ತು ಸೇವೆಗಳಿಗೆ ಯಾವುದೇ ರೀತಿಯ ತೊಂದರೆ ಆಗದಂತೆ ಮುನ್ನೆಚ್ಚರಿಕಾ ಕ್ರಮ ಕೈಗೊಳ್ಳಲಾಗಿದೆ ಎಂದು ಸಂಘದ ಪದಾಧಿಕಾರಿಗಳು ಸ್ಪಷ್ಟಪಡಿಸಿದರು.

# ಪೊಲೀಸ್ ದೌರ್ಜನ್ಯ ತಡೆಗೆ ಸ್ಟ್ಯಾಂಡಿಂಗ್ ಆರ್ಡರ್–1060 ಜಾರಿ

• ಮಲ್ಲಮ್ಮ ನುಡಿ ವಾರ್ತೆ ಬೆಂಗಳೂರು

ರಾಜ್ಯದಲ್ಲಿ ಇತ್ತೀಚಿನ ದಿನಗಳಲ್ಲಿ ಹೆಚ್ಚಾಗುತ್ತಿರುವ ಲಾಕಪ್ ಡೆತ್ (ಪೊಲೀಸ್ ಕಸ್ಟಡಿ ಸಾವು) ಹಾಗೂ ಪೊಲೀಸ್ ದೌರ್ಜನ್ಯ ಪ್ರಕರಣಗಳಿಗೆ ಬ್ರೇಕ್ ಹಾಕಲು ರಾಜ್ಯ ಪೊಲೀಸ್ ಇಲಾಖೆ ಅತ್ಯಂತ ಕಠಿಣ ಕ್ರಮಕ್ಕೆ ಮುಂದಾಗಿದೆ. ಈ ದೌರ್ಜನ್ಯಗಳನ್ನು ತಡೆಗಟ್ಟುವ ನಿಟ್ಟಿನಲ್ಲಿ ರಾಜ್ಯ ಪೊಲೀಸ್ ಮಹಾನಿರ್ದೇಶಕರು (ಡಿಜಿ–ಐಜಿಪಿ) ಆದ ಡಾ.ಎಂ.ಎ. ಸಲೀಂ ಅವರು ಹೊಸ ಭಾರತೀಯ ನಾಗರಿಕ ಸುರಕ್ಷಾ ಸಂಹಿತೆ (BNSS) ಕಾಯ್ದೆಯಡಿ ಅತ್ಯಂತ ಮಹತ್ವದ 'ಸ್ಟ್ಯಾಂಡಿಂಗ್ ಆರ್ಡರ್–1060' (Standing Order-1060) ಅನ್ನು ಜಾರಿಗೊಳಿಸಿ ಕಟ್ಟುನಿಟ್ಟಿನ ಆದೇಶ ಹೊರಡಿಸಿದ್ದಾರೆ.

ಈ ಹೊಸ ಸ್ಟ್ಯಾಂಡಿಂಗ್ ಆರ್ಡರ್ ಪ್ರಕಾರ, ಇನ್ನು ಮುಂದೆ ಪೊಲೀಸ್ ಕಸ್ಟಡಿಯಲ್ಲಿ ಯಾವುದೇ ರೀತಿಯ ದೌರ್ಜನ್ಯಗಳು ಅಥವಾ ಅಹಿತಕರ ಘಟನೆಗಳು ನಡೆದ ತಕ್ಷಣವೇ ಸ್ಥಳೀಯ ಪೊಲೀಸರು ಬಿಎನ್‌ಎಸ್‌ಎಸ್ (BNSS) ಸೆಕ್ಷನ್ 103 ಮತ್ತು 185ರ ಅಡಿಯಲ್ಲಿ ಕಡ್ಡಾಯವಾಗಿ ಸ್ಪಾಟ್ ಮಹಜರ್ (ಸ್ಥಳ ತನಿಖೆ) ಪ್ರಕ್ರಿಯೆಯನ್ನು ಪೂರ್ಣಗೊಳಿಸಬೇಕಾಗುತ್ತದೆ. ಯಾವುದೇ ವಿಳಂಬಕ್ಕೆ ಆಸ್ಪದ ನೀಡದೆ ತಕ್ಷಣವೇ ಕಾನೂನು ಕ್ರಮಗಳನ್ನು ಜರುಗಿಸುವುದನ್ನು ಈ ಆದೇಶ ಕಡ್ಡಾಯಗೊಳಿಸಿದೆ.



ಮುಖ್ಯವಾಗಿ, ಕಸ್ಟಡಿ ದೌರ್ಜನ್ಯ ಪ್ರಕರಣಗಳ ತನಿಖೆಯ ವೇಳೆ ಸ್ಥಳೀಯ ಪೊಲೀಸ್ ಅಧಿಕಾರಿಗಳು ಯಾವುದೇ ರೀತಿಯ ಪ್ರಭಾವ ಬೀರದಂತೆ ಮತ್ತು ಸಾಕ್ಷ್ಯಗಳನ್ನು ನಾಶಪಡಿಸದಂತೆ ತಡೆಯಲು ಇಡೀ ತನಿಖಾ ಪ್ರಕ್ರಿಯೆಯನ್ನು ಸಂಪೂರ್ಣ ಪಾರದರ್ಶಕಗೊಳಿಸಲು ಡಿಜಿಪಿ ಸೂಚಿಸಿದ್ದಾರೆ. ತನಿಖೆಯ ಹಾದಿ ತಪ್ಪಿಸುವ ಅಥವಾ ಘಟನೆಯನ್ನು ಮುಚ್ಚಿಹಾಕುವ ಪ್ರಯತ್ನಗಳಿಗೆ ಈ ನಿಯಮದ ಮೂಲಕ ಪೂರ್ಣವಿರಾಮ ಇಡಲು ನಿರ್ಧರಿಸಲಾಗಿದೆ.

ಒಂದು ವೇಳೆ ಇಲಾಖೆಯ ನಿಯಮಗಳನ್ನು ಮೀರಿ, ಕಸ್ಟಡಿ ದೌರ್ಜನ್ಯದ ಸಾಕ್ಷ್ಯ ನಾಶಕ್ಕೆ ಯತ್ನಿಸುವ ಅಧಿಕಾರಿಗಳನ್ನೇ ಈ ಘಟನೆಗೆ ನೇರ ಹೊಣೆಗಾರರನ್ನಾಗಿ ಮಾಡಲಾಗುವುದು ಎಂದು ಡಿಜಿ ಮತ್ತು ಐಜಿಪಿ ಡಾ. ಎಂ.ಎ. ಸಲೀಂ ಅವರು ಖಡಕ್ ಎಚ್ಚರಿಕೆ ನೀಡಿದ್ದಾರೆ. ಅಂತಹ ಕರ್ತವ್ಯಲೋಪ ಎಸಗುವ ಅಧಿಕಾರಿಗಳ ವಿರುದ್ಧ ಕೇವಲ ಇಲಾಖಾ ವಿಚಾರಣೆಯಷ್ಟೇ ಅಲ್ಲದೆ, ಕಾನೂನಿನ ಚೌಕಟ್ಟಿನಲ್ಲಿ ಅತ್ಯಂತ ಕಠಿಣ ಶಿಕ್ಷೆ ನೀಡಲಾಗುವುದು ಎಂದು ಅವರು ಆದೇಶದಲ್ಲಿ ಸ್ಪಷ್ಟಪಡಿಸಿದ್ದಾರೆ.

**'ಸ್ಟ್ಯಾಂಡಿಂಗ್ ಆರ್ಡರ್–1060' ಎಂದರೇನು..?**

**ಪೊಲೀಸ್ ಕಿರುಕುಳಕ್ಕೆ ಬ್ರೇಕ್ ಹಾಕುವ ಅಸ್ತ್ರ**

ಸಾಮಾನ್ಯವಾಗಿ ಪೊಲೀಸ್ ಇಲಾಖೆಯಲ್ಲಿ ಕೆಳಹಂತದ ಸಿಬ್ಬಂದಿ (ಕಾನ್‌ಸ್ಟೆಬಲ್, ಹೆಡ್ ಕಾನ್‌ಸ್ಟೆಬಲ್ ಮತ್ತು ಎಎಸ್‌ಐ) ಮೇಲಾಧಿಕಾರಿಗಳ ಕಿರುಕುಳಕ್ಕೆ ಒಳಗಾಗುತ್ತಿದ್ದಾರೆ ಎಂಬ ದೂರುಗಳು ವ್ಯಾಪಕವಾಗಿ ಕೇಳಿ ಬರುತ್ತಿರುತ್ತವೆ. ಕರ್ತವ್ಯದ ಅವಧಿ, ರಜೆ ಮಂಜೂರಾತಿ ಮತ್ತು ಸಣ್ಣಪುಟ್ಟ ತಪ್ಪುಗಳಿಗೂ ಅಮಾನತ್ತು ಮಾಡುವ ಅಥವಾ ಚಾರ್ಜ್ ಶೀಟ್ ನೀಡುವ ಮೂಲಕ ಮೇಲಾಧಿಕಾರಿಗಳು ತಮಗೆ ಮಾನಸಿಕ ಕಿರುಕುಳ ನೀಡುತ್ತಿದ್ದಾರೆ ಎಂದು ಹಲವು ಸಿಬ್ಬಂದಿ ಆತ್ಮಹತ್ಯೆಯಂತಹ ತೀವ್ರ ನಿರ್ಧಾರಗಳನ್ನು ಕೈಗೊಂಡ ಉದಾಹರಣೆಗಳಿವೆ. ಈ ಹಿನ್ನೆಲೆಯಲ್ಲಿ, ಕೆಳಹಂತದ ಸಿಬ್ಬಂದಿಗೆ ರಕ್ಷಣೆ ನೀಡಲು ಮತ್ತು ಮೇಲಾಧಿಕಾರಿಗಳ ಸರ್ವಾಧಿಕಾರಿ ಧೋರಣೆಗೆ ಕಡಿವಾಣ ಹಾಕಲು ಈ ಸ್ಟ್ಯಾಂಡಿಂಗ್ ಆರ್ಡರ್–1060 ಅನ್ನು ಜಾರಿಗೆ ತರಲಾಗಿದೆ.

**ಆದೇಶದಲ್ಲಿರುವ ಪ್ರಮುಖ ನಿಯಮಗಳೇನು..?**

ಈ ಆದೇಶದ ಪ್ರಕಾರ, ಯಾವುದೇ ಒಬ್ಬ ಪೊಲೀಸ್ ಸಿಬ್ಬಂದಿಯ ವಿರುದ್ಧ ಮೇಲಾಧಿಕಾರಿಗಳು ಸಕಾರಣವಿಲ್ಲದೆ ಅಥವಾ ವೈಯಕ್ತಿಕ ದ್ವೇಷದಿಂದ ಶಿಸ್ತು ಕ್ರಮ ಜರುಗಿಸುವಂತಿಲ್ಲ. ಸಿಬ್ಬಂದಿಗೆ ವಾರದ ರಜೆ (Weekly Off) ನೀಡುವುದು ಕಡ್ಡಾಯ, ಆರೋಗ್ಯದ ಸಮಸ್ಯೆಗಳಿದ್ದಾಗ ರಜೆ ನಿರಾಕರಿಸುವಂತಿಲ್ಲ ಮತ್ತು ಯಾವುದೇ ಗಂಭೀರ ಆರೋಪಗಳಿಲ್ಲದೆ ಏಕಾಏಕಿ ಅಮಾನತ್ತು (Suspension) ಮಾಡುವಂತಿಲ್ಲ ಎಂದು ಈ ನಿಯಮ ಹೇಳುತ್ತದೆ. ಒಂದು ವೇಳೆ ಕೆಳಹಂತದ ಸಿಬ್ಬಂದಿಗೆ ಅನ್ಯಾಯವಾಗುತ್ತಿದ್ದರೆ, ಅವರು ನೇರವಾಗಿ ಹಿರಿಯ ಅಧಿಕಾರಿಗಳಿಗೆ ದೂರು ನೀಡಲು ಈ ಆದೇಶದಲ್ಲಿ ಮುಕ್ತ ಅವಕಾಶ ಕಲ್ಪಿಸಲಾಗಿದೆ.

**ಸುದ್ದಿಯಾಗಲು ಕಾರಣ: ನಿಯಮ ಉಲ್ಲಂಘನೆ ಮತ್ತು ಎಚ್ಚರಿಕೆ**

ಇತ್ತೀಚಿನ ದಿನಗಳಲ್ಲಿ ಕೆಲವು ಜಿಲ್ಲೆಗಳ ಎಸ್‌ಪಿ (SP) ಮತ್ತು ಕಮಿಷನರೇಟ್ ವ್ಯಾಪ್ತಿಯ ಹಿರಿಯ ಅಧಿಕಾರಿಗಳು ಈ 'ಸ್ಟ್ಯಾಂಡಿಂಗ್ ಆರ್ಡರ್–1060' ಅನ್ನು ಸರಿಯಾಗಿ ಪಾಲಿಸುತ್ತಿಲ್ಲ ಎಂಬ ಆರೋಪಗಳು ಕೇಳಿ ಬಂದ ಹಿನ್ನೆಲೆಯಲ್ಲಿ ಇದು ತೀವ್ರ ಸುದ್ದಿಯಾಗಿದೆ. ನಿಯಮಗಳನ್ನು ಗಾಳಿಗೆ ತೂರಿ ಸಿಬ್ಬಂದಿಯನ್ನು ನಿಯೋಜನೆ (OOD) ಹೆಸರಿನಲ್ಲಿ ತಮಗೆ ಬೇಕಾದ ಕಡೆ ವರ್ಗಾವಣೆ ಮಾಡಿಕೊಳ್ಳುವುದು ಮತ್ತು ವಿನಾಕಾರಣ ಶಿಕ್ಷೆ ನೀಡುತ್ತಿರುವುದನ್ನು ರಾಜ್ಯ ಪೊಲೀಸ್ ಪ್ರಧಾನ ಕಚೇರಿ ಗಂಭೀರವಾಗಿ ಪರಿಗಣಿಸಿದೆ. ಈ ಆದೇಶವನ್ನು ಕಟ್ಟುನಿಟ್ಟಾಗಿ ಜಾರಿಗೊಳಿಸದಿದ್ದರೆ ಸಂಬಂಧಪಟ್ಟ ಹಿರಿಯ ಅಧಿಕಾರಿಗಳ ವಿರುದ್ಧವೇ ಕ್ರಮ ಕೈಗೊಳ್ಳಲಾಗುವುದು ಎಂದು ಡಿಜಿ– ಮತ್ತು ಐಜಿಪಿಯವರು ಕಡಕ್ ಎಚ್ಚರಿಕೆ ನೀಡಿದ್ದಾರೆ.

**ಸಿಬ್ಬಂದಿ ವಲಯದಲ್ಲಿ ಹರ್ಷ, ಆಡಳಿತದಲ್ಲಿ ಶಿಸ್ತು**

ಈ ನಿಯಮದ ಕಟ್ಟುನಿಟ್ಟಿನ ಅನುಷ್ಠಾನದಿಂದಾಗಿ ಇಲಾಖೆಯ ಕೆಳಹಂತದ ಸಿಬ್ಬಂದಿ ನಿರಾಳರಾಗಿದ್ದಾರೆ. ಹಗಲಿರುಳು ಕಷ್ಟಪಡುವ ಕಾನ್‌ಸ್ಟೆಬಲ್‌ಗಳಿಗೆ ಈ ಆದೇಶವು ಒಂದು ರೀತಿಯ ರಕ್ಷಣಾ ಕವಚವಾಗಿ ಪರಿಣಮಿಸಿದೆ. ಅಧಿಕಾರಿಗಳು ಮತ್ತು ಸಿಬ್ಬಂದಿಯ ನಡುವೆ ಉತ್ತಮ ಬಾಂಧವ್ಯ ಬೆಳೆಯಲು, ಇಲಾಖೆಯಲ್ಲಿ ಪಾರದರ್ಶಕತೆ ತರಲು ಮತ್ತು ಸಿಬ್ಬಂದಿಯ ಮಾನಸಿಕ ಒತ್ತಡವನ್ನು ಕಡಿಮೆ ಮಾಡಲು 'ಸ್ಟ್ಯಾಂಡಿಂಗ್ ಆರ್ಡರ್–1060' ಅತ್ಯಂತ ನಿರ್ಣಾಯಕ ಕಾನೂನಾಗಿದೆ ಎಂದು ಕಾನೂನು ತಜ್ಞರು ಮತ್ತು ಪೊಲೀಸ್ ಸಂಘಟನೆಗಳು ಅಭಿಪ್ರಾಯಪಟ್ಟಿವೆ.

## ಕಾಂಗ್ರೆಸ್ ನಲ್ಲಿ ಗೊಂದಲವೇ ಇಲ್ಲ, ಬಿಜೆಪಿಯಲ್ಲೇ ಎಲ್ಲ: ಈಶ್ವರ ಖಂಡ್ರೆ



**ಬೆಂಗಳೂರು:** ಕಾಂಗ್ರೆಸ್ ನಲ್ಲಿ ಯಾವುದೇ ಗೊಂದಲ ಇಲ್ಲ, ತಮ್ಮ ಎಲೆಯಲ್ಲಿ ಹೆಗ್ಗಣ ಸತ್ತು ಬಿದ್ದಿದ್ದರೂ, ಬೇರೆಯವರ ಎಲೆಯಲ್ಲಿ ನೊಣವನ್ನು ಬಿಜೆಪಿ ನಾಯಕರು ಹುಡುಕುತ್ತಿದ್ದಾರೆ ಎಂದು ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವ ಈಶ್ವರ ಬಿ ಖಂಡ್ರೆ ತಿರುಗೇಟು ನೀಡಿದ್ದಾರೆ. ಬೆಂಗಳೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ರಾಜ್ಯ ಬಿಜೆಪಿಯಲ್ಲಿ ಎಷ್ಟು ಬಣ ಇದೆ. ಅವರಲ್ಲೇ ಒಗ್ಗಟ್ಟಿಲ್ಲ. ಬೇರೆಯವರ ಬಗ್ಗೆ ಮಾತನಾಡಲು ನೈತಿಕ ಹಕ್ಕೇ ಆ ಪಕ್ಷಕ್ಕಿಲ್ಲ ಎಂದು ಗುಡುಗಿದರು. ಸಂಪುಟ ವಿಸ್ತರಣೆ ಬಗ್ಗೆ ಕೇಳಿದ ಪ್ರಶ್ನೆಗೆ ಉತ್ತರಿಸಿದ ಈಶ್ವರ ಖಂಡ್ರೆ, ಸಚಿವ ಸಂಪುಟ ಪುನಾರಚನೆ, ವಿಸ್ತರಣೆ ವರಿಷ್ಠರ ತೀರ್ಮಾನ ಮತ್ತು ಮುಖ್ಯಮಂತ್ರಿಗಳ ಪರಮಾಧಿಕಾರ ಎಂದು ಉತ್ತರಿಸಿದರು.

## 74 ಸಾವಿರ ಉದ್ಯೋಗ ಅವಕಾಶಗಳು ಸೃಷ್ಟಿ



**ಬೆಂಗಳೂರು:** ವೈಮಾಂತರಿಕ್ಷ ಹಾಗೂ ರಕ್ಷಣಾ ವಲಯದ ಬೆಂಗಳೂರು ಮೂಲದ ಆಕ್ಸಿಸ್‌ಕೇಡ್ಸ್ ಏರೊಸ್ಪೇಸ್ ಇನ್‌ಫ್ರಾಸ್ಟ್ರಕ್ಚರ್ ಪ್ರೈವೇಟ್ ಲಿಮಿಟೆಡ್, ರಾಜ್ಯದಲ್ಲಿ ₹6,000 ಕೋಟಿ ಮೊತ್ತದ ಬಂಡವಾಳ ಹೂಡಿಕೆಗೆ ಮುಂದೆ ಬಂದಿದೆ ಎಂದು ಕೈಗಾರಿಕಾ ಸಚಿವ ಎಂ. ಬಿ. ಪಾಟೀಲ ತಿಳಿಸಿದ್ದಾರೆ.

ಬುಧವಾರ ಖನಿಜ ಭವನದಲ್ಲಿ ಕಂಪನಿಯ ಉನ್ನತಾಧಿಕಾರಿಗಳ ಜೊತೆಗೆ ನಡೆದ ವಿಸ್ತೃತ ಸಮಾಲೋಚನೆಯ ನಂತರ ಸಚಿವರು ಈ ಮಾಹಿತಿ ನೀಡಿದ್ದಾರೆ.

200 ಎಕರೆ ಪ್ರದೇಶದಲ್ಲಿ ವೈಮಾಂತರಿಕ್ಷ, ರಕ್ಷಣೆ, ಸೆಮಿಕಂಡಕ್ಟರ್ ಹಾಗೂ ಕೃತಕ ಬುದ್ಧಿಮತ್ತೆ (ಎಐ) ನಾವೀನ್ಯತೆ ಕ್ಷೇತ್ರಗಳಲ್ಲಿ ಉತ್ಪಾದನೆ, ಪರೀಕ್ಷೆ ಮತ್ತು ನಿರ್ವಹಣೆಯ ಸಮಗ್ರ ಕೇಂದ್ರ ಸ್ಥಾಪಿಸುವುದು ಆಕ್ಸಿಸ್‌ಕೇಡ್ಸ್ ಏರೊಸ್ಪೇಸ್‌ನ ಮುಖ್ಯ ಉದ್ದೇಶವಾಗಿದೆ. ಜಾಗತಿಕ ಪಾಲುದಾರಿಕೆಯಡಿ ದೇಶೀಯವಾಗಿ ಸಂಶೋಧನೆ ಹಾಗೂ ಅಭಿವೃದ್ಧಿ ಕೇಂದ್ರವನ್ನೂ ಸ್ಥಾಪಿಸಲಿದೆ ಎಂದು ಸಚಿವರು ತಿಳಿಸಿದ್ದಾರೆ.

ಕಂಪನಿಯು ಹಂತ ಹಂತವಾಗಿ ಒಟ್ಟು ₹6,000 ಕೋಟಿ ಬಂಡವಾಳ ಹೂಡಿಕೆ ಮಾಡಲಿದೆ. ಇದರಿಂದ ರಾಜ್ಯದಲ್ಲಿ ಪ್ರತ್ಯಕ್ಷವಾಗಿ 20 ಸಾವಿರ ಹಾಗೂ ಪರೋಕ್ಷವಾಗಿ 54 ಸಾವಿರ ಉದ್ಯೋಗಗಳು ಸೃಷ್ಟಿಯಾಗಲಿವೆ. ಕ್ಷಿಪಣಿ ತಯಾರಿಕೆಯ ಪೂರಕ ಸೌಲಭ್ಯ , ರೇಡಾರ್ – ಸಂವೇದಕ, ಯುದ್ಧ ವಿಮಾನಗಳ ದುರಸ್ತಿ–ನಿರ್ವಹಣೆ ಸೌಲಭ್ಯ (ಎಂಆರ್‌ಒ) ಸೇರಿದಂತೆ ವೈಮಾಂತರಿಕ್ಷ ಹಾಗೂ ರಕ್ಷಣಾ ವಲಯದ ಮೂಲ ಸೌಕರ್ಯಗಳನ್ನು ಅಭಿವೃದ್ಧಿಪಡಿಸಲು ಕಂಪನಿ ಉದ್ದೇಶಿಸಿದೆ.

ಮೊದಲ ಹಂತದಲ್ಲಿ ₹1,290 ಕೋಟಿ, 2ನೆ ಹಂತದಲ್ಲಿ ₹2,898 ಕೋಟಿ ಮತ್ತು 3ನೇ ಹಂತದಲ್ಲಿ ₹1,512 ಕೋಟಿ ಬಂಡವಾಳ ಹೂಡಿಕೆ ಮಾಡಲಿದೆ ಎಂದು ಸಚಿವರು ವಿವರಿಸಿದರು.

ಈ ಯೋಜನೆ ಕಾರ್ಯಗತಗೊಳಿಸಲು ಕಂಪನಿಯು ದೇವನಹಳ್ಳಿ ಬಳಿ ಭೂಮಿ ಒದಗಿಸಲು ಮನವಿ ಮಾಡಿಕೊಂಡಿದೆ. 1.8 ಕಿ.ಮೀ ಉದ್ದದ ರನ್ ವೇ ನಿರ್ಮಾಣದ ಉದ್ದೇಶ ಕೂಡ ಇದೆ ಎಂದು ಕಂಪನಿ ಹೇಳಿದ್ದು, ಹಾಗಾದರೆ ಹಾಸನ, ವಿಜಯಪುರ ಹಾಗೂ ಶಿವಮೊಗ್ಗ ವಿಮಾನ ನಿಲ್ದಾಣಗಳನ್ನು ಬೇಕಾದರೂ ಪರಿಗಣಿಸಬಹುದು ಎಂದು ಸಚಿವರು ಸಲಹೆ ನೀಡಿದ್ದಾರೆ. ಹಾಲಿ ಇರುವ ದೇವನಹಳ್ಳಿ ಘಟಕದ ಸನಿಹದಲ್ಲೇ ಈ ಉದ್ದೇಶಿತ ಘಟಕ ಇರಬೇಕು ಎನ್ನುವ ಬೇಡಿಕೆಯನ್ನು ಸಂಸ್ಥೆ ಪ್ರತಿನಿಧಿಗಳು ತಿಳಿಸಿದರು. ನಂತರ ಸಚಿವರು ರನ್ ವೇ ನಿರ್ಮಾಣಕ್ಕೂ ಅನುಕೂಲ ಇರುವ ಕಡೆ ಜಾಗ ಗುರುತಿಸಲು ಅಧಿಕಾರಿಗಳಿಗೆ ಸೂಚಿಸಿದರು.

## ಮಲ್ಲಮ್ಮನುಡಿ ವರದಿ, ಎಚ್ಚೆತ್ತ ಅಧಿಕಾರಿಗಳು

• ಮಲ್ಲಮ್ಮ ನುಡಿ ವಾರ್ತೆ ಚಿಟಗುಪ್ಪ

ವರದಿ MN ಫಲಶ್ರುತಿ

ತಾಲೂಕಿನ ನಿರ್ಣಾ ಗ್ರಾಮ ಸ್ವಚ್ಛತೆಗೆ ಮರಿಮಾಚಿದೆ ಎಂದು ಗ್ರಾಮಸ್ಥರು ಮಲ್ಲಮ್ಮನುಡಿ ಪತ್ರಿಕೆಗೆ ತಿಳಿಸಿದಾಗ, ಗ್ರಾಮದ ಕೆಲವು ಓಣಿಯಲ್ಲಿವೂ ಸಹ ಸ್ವಚ್ಛತೆ ಇಲ್ಲದೆ ಗಬ್ಬು ನಾರುತ್ತಿದೆ, ಹಲವಾರು ಬಾರಿ ಗ್ರಾಮ ಪಂಚಾಯಿತಿಗೆ ಹೋಗಿ ಅಧಿಕಾರಿಗಳಿಗೆ ತಿಳಿಸಿದರು ಸಹ ಯಾವುದೇ ಪ್ರಯೋಜನೆ ಆಗುತ್ತಿಲ್ಲ ನಮ್ಮ ಮನೆಯಲ್ಲಿ ವೃದ್ಧರು, ಸಣ್ಣ ಸಣ್ಣ ಮಕ್ಕಳಿದ್ದಾರೆ ಗೊಬ್ಬು ನಾರುತ್ತಿರುವುದರಿಂದ ಸಾಂಕ್ರಾಮಿಕ ರೋಗಗಳು ಹರಡುತ್ತಿವೆ, ನಾವುಗಳು ಜೀವದ ಭಯದಲ್ಲಿ ಬದುಕುವ ಪರಿಸ್ಥಿತಿ ನಿರ್ಮಾಣವಾಗಿದೆ ಎಂದು ಜನರು ಅಸಮಾಧಾನ ವ್ಯಕ್ತಪಡಿಸಿದನ್ನು ಪತ್ರಿಕೆಯಲ್ಲಿ ಪ್ರಕಟವಾದ, ನಂತರ ಅಲ್ಲಿನ ಅಧಿಕಾರಿಗಳು ಎಚ್ಚೆತ್ತುಕೊಂಡು ಸ್ವಚ್ಛತೆ ಮಾಡಿದ್ದಾರೆ.







ಹೆಚ್ಚುಬಿಸಿಲು ಇರುವುದರಿಂದ ಜನರಿಗೆ ನೀರಿನ ಸಮಸ್ಯೆ ಅಗಬಾರದೆಂದ್ದು, ಸಫಾಯಿ ಸಿಬ್ಬಂದಿಗಳಿಗೆ ನೀರಿನ ವ್ಯವಸ್ಥೆ ಮಾಡಲು ಬಳಸಿಕೊಳ್ಳಲಾಗಿದೆ. ಗ್ರಾಮದಲ್ಲಿ ಸ್ವಚ್ಛತೆಯನ್ನು ಕೈಗೊಂಡಿದ್ದೇವೆ, ಜನರು ತೆರಿಗೆ ಪಾವತಿಸಿ ಗ್ರಾಮದ ಅಭಿವೃದ್ಧಿ ಕೈಜೋಡಿಸಬೇಕು.

–ಬಸವರಾಜ ಗುಗ್ಗರಿ, ಅಭಿವೃದ್ಧಿ ಅಧಿಕಾರಿಗಳು, ನಿರ್ಣಾ.



ಮಲ್ಲಮ್ಮ ನುಡಿ

ನಿರ್ಣಾ ಗ್ರಾಪಂ ಕಣಾ, ಸೌಲಭ್ಯಗಳಿಲ್ಲದೆ ಜನ ಹೈರಾಣ..!

## ಸಫಾರಿಗಳಲ್ಲಿ ತೆರೆದ ವಾಹನಕ್ಕೆ ಅವಕಾಶವಿಲ್ಲ

• ಮಲ್ಲಮ್ಮ ನುಡಿ ವಾರ್ತೆ ಬೆಂಗಳೂರು

ರಾಜ್ಯದ ಐದು ಹುಲಿ ಸಂರಕ್ಷಿತ ಪ್ರದೇಶ ಹಾಗೂ ವನ್ಯಜೀವಿಧಾಮಗಳ ಸಫಾರಿಯಲ್ಲಿ ತೆರೆದ ಕ್ಯಾಂಪರ್ ಬದಲಿಗೆ ಸುರಕ್ಷಿತ ಬಸ್ ಬಳಕೆ ಮಾಡುವಂತೆ ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವ ಈಶ್ವರ ಬಿ ಖಂಡ್ರೆ ಸೂಚನೆ ನೀಡಿದ್ದಾರೆ.

ದುಬಾರೆ ಆನೆ ಶಿಬಿರದಲ್ಲಿ ನಿನ್ನೆ ಎರಡು ಸಾಕಾನೆಗಳ ಕಾಳಗದ ವೇಳೆ ಪ್ರವಾಸಿ ಮಹಿಳೆ ಮೃತಪಟ್ಟ ಆಘಾತಕಾರಿ ಘಟನೆ ಹಿನ್ನೆಲೆಯಲ್ಲಿ ಸಫಾರಿಗಳಲ್ಲಿ ಪ್ರವಾಸಿಗರ ಸುರಕ್ಷತೆಗೂ ಹೆಚ್ಚಿನ ಗಮನ ಹರಿಸುವಂತೆ ಅರಣ್ಯ ಸಚಿವರು ಮುಖ್ಯ ವನ್ಯಜೀವಿ ಪರಿಪಾಲಕರಿಗೆ ಸ್ಪಷ್ಟ ನಿರ್ದೇಶನ ನೀಡಿದ್ದಾರೆ.

ಬಂಡೀಪುರ, ನಾಗರಹೊಳೆ, ಕಾಳಿ, ಬಿಳಿಗಿರಿರಂಗನಬೆಟ್ಟ ಮತ್ತು ಭದ್ರಾ ಹುಲಿ ಸಂರಕ್ಷಿತ ಪ್ರದೇಶ ಹಾಗೂ ಮಲೆ ಮಹದೇಶ್ವರ ಬೆಟ್ಟ, ದಾಂಡೇಲಿ, ಕೆ.ಗುಡಿ ಸೇರಿದಂತೆ ರಾಜ್ಯದ ವಿವಿಧ ವನ್ಯಜೀವಿಧಾಮ ಮತ್ತು ಕಾನನಗಳಲ್ಲಿ ಸಫಾರಿ ನಡೆಯುತ್ತಿದ್ದು, ರಾಜ್ಯದ ಮೂಲೆಮೂಲೆಗಳಿಂದ ಅಷ್ಟೇ ಅಲ್ಲದೆ ದೇಶ ವಿದೇಶಗಳಿಂದಲೂ ಪ್ರವಾಸಿಗರು, ವನ್ಯಜೀವಿ ಪ್ರಿಯರು ಇಲ್ಲಿಗೆ ಆಗಮಿಸುತ್ತಾರೆ. ಅದೃಷ್ಟವಶಾತ್ ಈವರೆಗೆ ಸಫಾರಿ ಪ್ರದೇಶಗಳಲ್ಲಿ ಆನೆಗಳು, ಹುಲಿಗಳು ಸೇರಿದಂತೆ ಯಾವುದೇ ವನ್ಯಮೃಗಗಳು ಸಫಾರಿ ವಾಹನಗಳ ಮೇಲೆ ದಾಳಿ ಮಾಡಿ ಜೀವಹಾನಿ ಮಾಡಿದ ಘಟನೆಗಳು ಸಂಭವಿಸಿರುವುದಿಲ್ಲ. ಆದಾಗ್ಯೂ ಅನಾಹುತ ಸಂಭವಿಸುವ ಮೊದಲೇ ಎಚ್ಚೆತ್ತುಕೊಳ್ಳುವ ಅಗತ್ಯವಿದೆ ಎಂದು ಸೂಚನೆಯಲ್ಲಿ ತಿಳಿಸಿದ್ದಾರೆ.

**ಸಫಾರಿ, ಆನೆ ಶಿಬಿರದ ಸನಿಹದಲ್ಲಿ ಆಂಬುಲೆನ್ಸ್ ಖಾತ್ರಿಗೂ ಸೂಚನೆ:** ಸಫಾರಿಗೆ ಬರುವ ಪ್ರವಾಸಿಗರ ಸುರಕ್ಷತೆ–ಯ ದೃಷ್ಟಿಯಿಂದ ಇನ್ನು ಮುಂದೆ ತೆರೆದ ಕ್ಯಾಂಪರ್ ವಾಹನಗಳ ಬದಲಿಗೆ ಸಂಪೂರ್ಣ ಸುರಕ್ಷಿತವಾದ ಬಸ್ ಸಫಾರಿಗೆ ಹೆಚ್ಚಿನ ಆದ್ಯತೆ ನೀಡುವಂತೆ ಮತ್ತು ಹಾಲಿ ಬಳಕೆಯಲ್ಲಿರುವ ಕ್ಯಾಂಪರ್ ಗಳಿಗೆ ಕಬ್ಬಿಣದ ಸರಳುಗಳಿಂದ ಕೂಡಿದ ಜಾಲರಿಗಳನ್ನು ಅಥವಾ ಒಡೆಯಲಾಗದ ಗಾಜು ಅಳವಡಿಸಿ ಬಳಸುವ ಬಗ್ಗೆ ಕ್ರಮವಹಿಸಲು, ಯಾವುದೇ ಪ್ರವಾಸಿಗರು ಅರಣ್ಯದೊಳಗೆ ಇಳಿಯಲು ಅವಕಾಶ ನೀಡದಂತೆ ಸೂಚಿಸಿದ್ದಾರೆ.

## ಡಾ. ಮಹಾಂತ ಶಿವಯೋಗಿಗಳ ಸ್ಮರಣೋತ್ಸವ

• ಮಲ್ಲಮ್ಮ ನುಡಿ ವಾರ್ತೆ ಬಸವಕಲ್ಯಾಣ

ಇಲ್ಲಿನ ವಿಶ್ವ ಬಸವ ಧರ್ಮ ಟ್ರಸ್ಟ್ ಅನುಭವ ಮಂಟಪ. ವತಿಯಿಂದ ಇಳಕಲ್ಲಿನ ಚಿತ್ತರಗಿ ವಿಜಯ ಮಹಾಂತೇಶ್ವರ ಸಂಸ್ಥಾನ ಮಠದ ಲಿಂ. ಪೂಜ್ಯ ಶ್ರೀ ಮ. ನಿ. ಪ್ರ. ಡಾ. ಮಹಾಂತ ಶಿವಯೋಗಿಗಳ 8ನೇ ಸ್ಮರಣೋತ್ಸವ ಕಾರ್ಯಕ್ರಮ ಜರುಗಿತು . ಸಾನಿಧ್ಯ ವಹಿಸಿದ. ಅನುಭವ ಮಂಟಪ ಸಂಚಾಲಕರಾದ ಪೂಜ್ಯ ಶ್ರೀ ಶಿವಾನಂದ ಸ್ವಾಮಿಗಳು. ಮಾತನಾಡಿ ಇಳಕಲ್ಲಿನ ಚಿತ್ತರಗಿ ವಿಜಯ ಮಹಾಂತೇಶ್ವರ ಸಂಸ್ಥಾನ ಮಠದ ಡಾ. ಶ್ರೀ ಮಹಾಂತ ಶಿವಯೋಗಿಗಳು ಅವರು ಕರ್ನಾಟಕದ ಅತ್ಯಂತ ಪೂಜನೀಯ ಮತ್ತು ಪ್ರಭಾವಶಾಲಿ ಲಿಂಗಾಯತ ಸ್ವಾಮಿಗಳು. ಅವರು ಸಮಾಜ ಸುಧಾರಣೆ ಮತ್ತು ಜನರನ್ನು ದುರ್ವ್ಯಸನಗಳಿಂದ ಮುಕ್ತಗೊಳಿಸಲು ತಮ್ಮ ಇಡೀ ಜೀವನವನ್ನು ಮುಡುಪಾಗಿಟ್ಟಿದ್ದರು. ಎಂದರು. ಈ ಸಂದರ್ಭದಲ್ಲಿ ಪೂಜ್ಯ ಶ್ರೀ ಇಷ್ಟಲಿಂಗ ಸ್ವಾಮಿಗಳು. ಪೂಜ್ಯ ಶ್ರೀ ಅಡಿವೆಪ್ಪ ಸ್ವಾಮಿಗಳು. ಪೂಜ್ಯ ಶ್ರೀ ಬಸವದೇವರು. ಸಹಾಯಕ ಆಯುಕ್ತರಾದ ಪ್ರಕಾಶ ಕುದರೆ. ತಹಸೀಲ್ದಾರರಾದ ದತ್ತಾತ್ರೇಯ ಗದಾ. ಅಶೋಕ ಕುಂಬಾರ, ನಾಗೇಂದ್ರಪ್ಪ ಪಾಟೀಲ್.




ಗಂಗಾಧರ ಬಿರಾದರ್. ಜಕಪ್ಪ ಬಿರಾದರ. ಸಚಿನ್ ಕೌಟೆ. ಗಣೇಶ ಮೇತ್ರೆ ಸೇರಿದಂತೆ ಅನೇಕರು ಉಪಸ್ತಿತರಿದ್ದರು.

## ಇದು ಕೇವಲ ಫೋಟೋಶೂಟ್ ರಾಜಕಾರಣವೇ?



ವರ್ತಮಾನ–ವಿಜಯ

● ಮಧೂರ ತಿಳಗೂಳಕರ

ಜಿಲ್ಲಾ ವರದಿಗಾರರು

ದೇಶದಲ್ಲಿ ಇಂಧನ ಉಳಿತಾಯ ಮತ್ತು ಪರಿಸರ ಸಂರಕ್ಷಣೆ ಇಂದಿನ ಅತ್ಯಗತ್ಯ ಅಗತ್ಯಗಳಾಗಿವೆ. ಯುದ್ಧ ನಡೆಯುತ್ತಿರುವ ಹಿನ್ನೆಲೆಯಲ್ಲಿ ಸ್ವತಃ ಪ್ರಧಾನಿ ನರೇಂದ್ರ ಮೋದಿ ಅವರು ಪೆಟ್ರೋಲ್ ಮತ್ತು ಡೀಸೆಲ್ ಬಳಕೆಯನ್ನು ಕಡಿಮೆ ಮಾಡಲು, ಸಾರ್ವಜನಿಕ ಸಾರಿಗೆ ಅಥವಾ ಇಲೆಕ್ಟ್ರಿಕ್ ವಾಹನಗಳನ್ನು ದಿನನಿತ್ಯದ ಜೀವನದಲ್ಲಿ ಅಳವಡಿಸಿಕೊಳ್ಳಲು ಜನಸಾಮಾನ್ಯರಿಗೆ ಕರೆ ನೀಡುತ್ತಲೇ ಬಂದಿದ್ದಾರೆ. ಪರಿಸರ ಸ್ನೇಹಿ ನಡೆ ಕೇವಲ ಘೋಷಣೆಯಾಗಬಾರದು, ಅದು ನಮ್ಮ ಜೀವನದ ಭಾಗವಾಗಬೇಕು ಎನ್ನುವುದು ಪ್ರಧಾನಿಯವರ ಆಶಯ.

ಆದರೆ, ಪ್ರಧಾನಿಯವರ ಈ ಕರೆಯನ್ನು ಅವರದೇ ಪಕ್ಷದ ಬಿಜೆಪಿ ಜನಪ್ರತಿನಿಧಿಗಳು ಎಷ್ಟು ಗಂಭೀರವಾಗಿ ತೆಗೆದುಕೊಂಡಿದ್ದಾರೆ ಎಂದು ನೋಡಿದರೆ ಮಾತ್ರ ತೀವ್ರ ನಿರಾಶೆಯಾಗುತ್ತದೆ. ಪ್ರಧಾನಿ ಹೇಳುವುದು ಒಂದು, ಆದರೆ ಅವರದೇ ಪಕ್ಷದ ನಾಯಕರು, ಶಾಸಕರು, ಸಂಸದರು ಮಾಡುತ್ತಿರುವುದು ಮತ್ತೊಂದು ಎನ್ನುವುದು ಸದ್ಯದ ಕಹಿ ವಾಸ್ತವ.

**ಐಷಾರಾಮಿ ಕಾರುಗಳಲ್ಲಿ ಬಂದು, ಇ–ಬೈಕ್ ಮೇಲೆ ಪೋಸ್!**



ಇತ್ತೀಚಿನ ದಿನಗಳಲ್ಲಿ ಬಿಜೆಪಿ ಜನಪ್ರತಿನಿಧಿಗಳ ಒಂದು ಹೊಸ ಟ್ರೆಂಡ್ ಸಾಮಾಜಿಕ ಜಾಲತಾಣಗಳಲ್ಲಿ ಭಾರಿ ಚರ್ಚೆಗೆ ಗ್ರಾಸವಾಗಿದೆ. ಇಂಧನ ಉಳಿತಾಯದ ಜಾಗೃತಿ ಮೂಡಿಸುವ ಹೆಸರಿನ ನೆಪದಲ್ಲಿ ಇಲೆಕ್ಟ್ರಿಕ್ ಬೈಕ್ (E-Bike) ಚಲಾಯಿಸುವ ಫೋಟೋಗಳು ಮತ್ತು ವಿಡಿಯೋಗಳು ಸಖತ್ ವೈರಲ್ ಆಗುತ್ತಿವೆ. ಆದರೆ ಇದರ ಹಿಂದಿನ ಅಸಲಿ ಕಥೆಯೇ ಬೇರೆ!

ಮನೆಯಿಂದ ಹೊರಡುವಾಗ ಕೋಟ್ಯಂತರ ರೂಪಾಯಿ ಬೆಲೆಬಾಳುವ, ಅತಿ ಹೆಚ್ಚು ಇಂಧನ ಹೀರುವ ಐಷಾರಾಮಿ ಎಸ್‌ಯುವಿ ಕಾರುಗಳಲ್ಲಿ ರಾಜಾರೋಷವಾಗಿ ಬರುವ ಈ ನಾಯಕರು, ಕಾರ್ಯಕ್ರಮದ ಸ್ಥಳ ಅಥವಾ ಮಾಧ್ಯಮಗಳ ಕ್ಯಾಮೆರಾ ಕಣ್ಣುಗಳು ಇರುವ ಜಾಗಕ್ಕೆ ಬರುತ್ತಿದ್ದಂತೆ ಕಾರಿನಿಂದ ಇಳಿಯುತ್ತಾರೆ. ಅಲ್ಲಿ ಸಿದ್ಧವಾಗಿ ನಿಲ್ಲಿಸಲಾದ ಇಲೆಕ್ಟ್ರಿಕ್ ಬೈಕ್ ಏರಿ, ವಿಡಿಯೋಗಾಗಿ ಮತ್ತು ಪತ್ರಿಕೆಗಳ ಹೆಡ್‌ಲೈನ್‌ಗಾಗಿ ಜಿಲ್ಲಾಧಿಕಾರಿ ಕಚೇರಿ ಅಥವಾ ಒಂದಿಷ್ಟು ದೂರ ಪ್ರಯಾಣಿಸಿ 'ಪೋಸ್' ನೀಡುತ್ತಾರೆ. ಶೂಟಿಂಗ್ ಮುಗಿಯುತ್ತಿದ್ದಂತೆ ಇ–ಬೈಕ್ ಅಲ್ಲಿಯೇ ಬಿಟ್ಟು, ಮತ್ತೆ ಅದೇ ಹವಾನಿಯಂತ್ರಿತ ಐಷಾರಾಮಿ ಕಾರು ಹತ್ತಿ ಹೊರಟುಬಿಡುತ್ತಾರೆ..!

**ಇದು ಸಾರ್ವಜನಿಕರ ಕಣ್ಣಿಗೆ ಮಣ್ಣೆರಚುವ ತಂತ್ರವೇ?**

ಪ್ರಧಾನಿ ಮೋದಿ ಅವರು ಇಲೆಕ್ಟ್ರಿಕ್ ವಾಹನಗಳನ್ನು ಪ್ರತಿನಿತ್ಯ ಬಳಸಲು, ಇಂಧನ ಉಳಿಸಲು ಹೇಳಿರುವುದು ಫೋಟೋ ಕ್ಲಿಕ್ಕಿಸಿಕೊಳ್ಳಲು ಅಲ್ಲ, ಬದಲಿಗೆ ನಿಜವಾದ ಬದಲಾವಣೆ ತರಲು. ಆದರೆ ಬಿಜೆಪಿ ಜನಪ್ರತಿನಿಧಿಗಳಿಗೆ ಇ–ಬೈಕ್ ಎನ್ನುವುದು ಕೇವಲ ಒಂದು 'ಪ್ರಚಾರದ ತಂತ್ರವಾಗಿ' ಮಾರ್ಪಟ್ಟಿದೆ.

ಸಾಮಾನ್ಯ ಜನರಿಗೆ ಪೆಟ್ರೋಲ್, ಡೀಸೆಲ್ ಬೆಲೆ ಏರಿಕೆಯ ಬಿಸಿ ತಟ್ಟುತ್ತಿದ್ದು, ಅವರು ಅನಿವಾರ್ಯವಾಗಿ ಪರ್ಯಾಯ ಮಾರ್ಗಗಳನ್ನು ಹುಡುಕುತ್ತಿದ್ದಾರೆ. ಇಂತಹ ಸಂದರ್ಭದಲ್ಲಿ ಜನರಿಗೆ ಮಾದರಿಯಾಗಬೇಕಾದ ಜನಪ್ರತಿನಿಧಿಗಳು ಈ ರೀತಿ ನಕಲಿ ಜಾಗೃತಿ ಮೂಡಿಸುತ್ತಿರುವುದು ಜನಸಾಮಾನ್ಯರ ಕಣ್ಣಿಗೆ ಮಣ್ಣೆರಚುವ ಮತ್ತು ಪ್ರಧಾನಿಯವರ ಆಶಯಕ್ಕೆ ಅಪಚಾರ ಎಸಗುವ ಕೆಲಸವಾಗಿದೆ.

**ಬದಲಾವಣೆ ಪ್ರಚಾರದಿಂದ ಬರುವುದಲ್ಲ, ನಡವಳಿಕೆಯಿಂದ ಬರಬೇಕು**

ರಾಜಕಾರಣಿಗಳು ಕೇವಲ ಕ್ಯಾಮೆರಾ ಮುಂದೆ ಪರಿಸರ ಪ್ರೇಮವನ್ನು ಪ್ರದರ್ಶಿಸುವುದನ್ನು ನಿಲ್ಲಿಸಬೇಕು. ನಿಜವಾಗಿಯೂ ಅವರಿಗೆ ಇಂಧನ ಉಳಿಸಬೇಕು, ಪರಿಸರ ರಕ್ಷಿಸಬೇಕು ಎಂಬ ಕಾಳಜಿ ಇದ್ದರೆ, ತಮ್ಮ ದಿನನಿತ್ಯದ ಓಡಾಟಕ್ಕೆ ಇಲೆಕ್ಟ್ರಿಕ್ ವಾಹನಗಳನ್ನು ಬಳಸಲಿ. ಕನಿಷ್ಠ ವಾರದಲ್ಲಿ ಒಂದು ದಿನವಾದರೂ ಅಧಿಕೃತವಾಗಿ ಇ–ಬೈಕ್ ಅಥವಾ ಸಾರ್ವಜನಿಕ ಸಾರಿಗೆಯನ್ನು ಬಳಸಿ ಮಾದರಿಯಾಗಬೇಕಿದೆ.

**ಒಟ್ಟಾರೆಯಾಗಿ**

ಬಣ್ಣ ಬಣ್ಣದ ಭಾಷಣಗಳು ಮತ್ತು ಸಾಮಾಜಿಕ ಜಾಲತಾಣಗಳ 'ರೀಲ್ಸ್' ಗಳು , ಟಿವಿ ಚಾನೆಲ್ ಮತ್ತು ಪತ್ರಿಕೆಗಳ ಕ್ಯಾಮೆರಾಗಳಿಗೆ ಪೋಸ್ ಕೊಡುವುದರಿಂದ ದೇಶ ಬದಲಾಗುವುದಿಲ್ಲ. ಪ್ರಧಾನಿ ಮೋದಿ ಅವರ ಮಾತಿನಂತೆ ಪೆಟ್ರೋಲ್–ಡೀಸೆಲ್ ಉಳಿಸುವ ಕಾಯಕ ನಮ್ಮ ಮನೆಯಿಂದಲೇ, ನಮ್ಮ ನಡವಳಿಕೆಯಿಂದಲೇ ಆರಂಭವಾಗಬೇಕು. ಬಿಜೆಪಿ ನಾಯಕರು ಇನ್ನಾದರೂ ಈ ' ಫೋಟೋಶೂಟ್ ರಾಜಕಾರಣ ' ಬಿಟ್ಟು, ನೈಜ ಪರಿಸರ ಪ್ರೇಮವನ್ನು ರೂಢಿಸಿಕೊಳ್ಳಲಿ ಎನ್ನುವುದೇ ಆಶಯ.

Printed, Published and Owned by: Ramesh Reddy and Printed at Metropolitan Media Company Ltd., Plot No.224, in Sy.No.41/2, 41/B & 42, Kapnoor 2nd stage, Industrial Area, Kalburagi-585104. Published at Sy.No. 466, TMC No. 22-405, First Floor, Gada Complex, Opp. Inspection Bungalow, Humnabad-585330.Editor: Ramesh Reddy, Office Ph. No: +91 9449732000.

PRGI NO. 120927
(RNINO:KARKAN/2011/48371)